22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 267 | ನವದೆಹಲಿ | ಬೆಲೆ ₹ 10 | ಏಪ್ರಿಲ್ 02, 2025, ಬುಧವಾರ


## ನವದೆಹಲಿಯಲ್ಲಿ ಕರ್ನಾಟಕ ಸರ್ಕಾರದ ವತಿಯಿಂದ ನೂತನವಾಗಿ ನಿರ್ಮಿಸಿರುವ "ಕರ್ನಾಟಕ ಭವನ'-1 (ಕಾವೇರಿ)ದ ಉದ್ಘಾಟನಾ ಕಾರ್ಯಕ್ರಮಕ್ಕೆ ಸರ್ವರಿಗೂ ಹಾರ್ದಿಕ ಸುಸ್ವಾಗತ



ಘನ ಉಪಸ್ಥಿತಿ
**ಶ್ರೀ ಮಲ್ಲಿಕಾರ್ಜುನ ಖರ್ಗೆ**
ಮಾನ್ಯ ವಿರೋಧ ಪಕ್ಷದ ನಾಯಕರು, ರಾಜ್ಯ ಸಭೆ

## ಕರ್ನಾಟಕ ಭವನ-1(ಕಾವೇರಿ) ನವದೆಹಲಿ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ

ಸ್ಥಳ : ಕರ್ನಾಟಕ ಭವನ-1 ಆವರಣ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ

**ದಿನಾಂಕ: 02.04.2025 ಸಮಯ: ಸಂಜೆ 06:30 ಗಂಟೆಗೆ**



ಉದ್ಘಾಟನೆ
**ಶ್ರೀ ಸಿದ್ದರಾಮಯ್ಯ**
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಮುಖ್ಯ ಅತಿಥಿ
**ಶ್ರೀ ಡಿ.ಕೆ. ಶಿವಕುಮಾರ್**
ಸನ್ಮಾನ್ಯ ಉಪ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ



ನವದೆಹಲಿಯಲ್ಲಿ ಕರ್ನಾಟಕ ಸರ್ಕಾರದ ವತಿಯಿಂದ ನೂತನವಾಗಿ ನಿರ್ಮಿಸಿರುವ "ಕರ್ನಾಟಕ ಭವನ'ದ ಉದ್ಘಾಟನೆ ಆಗಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹಾಗೂ ಕರ್ನಾಟಕ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳ ಗಣ್ಯರಿಗೆ ಹಾರ್ದಿಕ ಸುಸ್ವಾಗತ

ಅಧ್ಯಕ್ಷತೆ | ಮುಖ್ಯ ಅತಿಥಿಗಳು | ಗೌರವಾನ್ವಿತ ಆಹ್ವಾನಿತರು



**ಶ್ರೀ ಸತೀಶ ಜಾರಕಿಹೊಳಿ**
ಮಾನ್ಯ ಸಚಿವರು, ಲೋಕೋಪಯೋಗಿ ಇಲಾಖೆ, ಕರ್ನಾಟಕ ಸರ್ಕಾರ



**ಡಾ॥ ಹೆಚ್.ಸಿ ಮಹದೇವಪ್ಪ**
ಮಾನ್ಯ ಸಚಿವರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ



**ಶ್ರೀಮತಿ ನಿರ್ಮಲಾ ಸೀತಾರಾಮನ್**
ಮಾನ್ಯ ಹಣಕಾಸು ಹಾಗೂ ಕಾರ್ಪೊರೇಟ್ ವ್ಯವಹಾರಗಳ ಸಚಿವರು, ಭಾರತ ಸರ್ಕಾರ



**ಶ್ರೀ ಹೆಚ್.ಡಿ.ಕುಮಾರಸ್ವಾಮಿ**
ಮಾನ್ಯ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವರು, ಭಾರತ ಸರ್ಕಾರ



**ಶ್ರೀ ಪ್ರಹ್ಲಾದ್ ಜೋಶಿ**
ಮಾನ್ಯಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರು, ಭಾರತ ಸರ್ಕಾರ



**ಸುಶ್ರೀ ಶೋಭಾ ಕರಂದ್ಲಾಜೆ**
ಮಾನ್ಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ಕಾರ್ಮಿಕ ಮತ್ತು ಉದ್ಯೋಗದ ರಾಜ್ಯ ಸಚಿವರು, ಭಾರತ ಸರ್ಕಾರ



**ಶ್ರೀ ವಿ. ಸೋಮಣ್ಣ**
ಮಾನ್ಯ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವರು, ಭಾರತ ಸರ್ಕಾರ



**ಶ್ರೀ ಆರ್ ಅಶೋಕ**
ಮಾನ್ಯ ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿಧಾನಸಭೆ




**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ**
ಮಾನ್ಯ ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿಧಾನ ಪರಿಷತ್



**ಶ್ರೀ ಟಿ.ಬಿ ಜಯಚಂದ್ರ**
ಮಾನ್ಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿಗಳು–I, ನವದೆಹಲಿ



**ಶ್ರೀ ಪ್ರಕಾಶ ಹುಕ್ಕೇರಿ**
ಮಾನ್ಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿಗಳು–II, ನವದೆಹಲಿ



**ಸ್ವಾಗತ ಕೋರುವವರು**

## ಸತೀಶ್ ಜಾರಕಿಹೊಳಿ ಅಭಿಮಾನಿಗಳ ಬಳಗ

ಯಮಕನಮರಡಿ ವಿಧಾನಸಭಾ ಕ್ಷೇತ್ರ, ಬೆಳಗಾವಿ ಜಿಲ್ಲೆ

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 02, 2025, ಬುಧವಾರ

## ಒಳಪುಟಗಳಲ್ಲಿ

ರಾಜ್ಯದ ಜನತೆಗೆ ಬೆಲೆ ಏರಿಕೆ ಗ್ಯಾರಂಟಿ ದಯಪಾಲಿಸಿದ ಕಾಂಗ್ರೆಸ್ ಸರ್ಕಾರ ಬಿ. ವೈ. ವಿಜಯೇಂದ್ರ ಟೀಕೆ- ಪು.4

ಸರ್ಕಾರದಿಂದ ಬೆಲೆ ಏರಿಕೆ ವಿರುದ್ಧ ಇಂದು ಅಹೋರಾತ್ರಿ ಧರಣಿ ಸತ್ಯಾಗ್ರಹಕ್ಕೆ ಯಡಿಯೂರಪ್ಪ ಸಜ್ಜು -ಪು. 5

## ಜಾತಿಗಣತಿ ಶೀಘ್ರ ನಡೆಸಲು ಖರ್ಗೆ ಕರೆ

**ನವದೆಹಲಿ, ಏ.1:** ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ದಶಮಾನ ಮತ್ತು ಜಾತಿ ಜನಗಣತಿಯನ್ನು ಶೀಘ್ರವಾಗಿ ನಡೆಸಬೇಕೆಂದು ಕರೆ ನೀಡಿದ್ದು, ಇದು ದೇಶದ ಆರ್ಥಿಕ ಮತ್ತು ಸಾಮಾಜಿಕ ಯೋಗಕ್ಷೇಮಕ್ಕೆ ನಿರ್ಣಾಯಕವಾಗಿದೆ ಎಂದು ಹೇಳಿದರು. ಶೂನ್ಯ ವೇಳೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಅವರು, ಪ್ರಸ್ತುತ ಸರ್ಕಾರವು ಜನಗಣತಿಯನ್ನು ನಡೆಸುವಲ್ಲಿ ಅತಿಯಾದ ವಿಳಂಬವನ್ನು ಮಾಡುತ್ತಿದೆ ಎಂದು ಹೇಳಿದರು. ಪ್ರತಿ 10 ವರ್ಷಗಳಿಗೊಮ್ಮೆ ಜನಗಣತಿ ನಡೆಸುವ ಅವಕಾಶವಿದ್ದರೂ, ಸರ್ಕಾರವು ಹಾಗೆ ಮಾಡುವ ಉದ್ದೇಶವನ್ನು ಹೊಂದಿಲ್ಲ ಎಂದು ಖರ್ಗೆ ಹೇಳಿದ್ದಾರೆ. ಮಹಾತ್ಮಾ ಗಾಂಧಿಯವರ ಮಾತುಗಳನ್ನು ಉಲ್ಲೇಖಿಸಿ, "ನಮ್ಮ ದೇಹವನ್ನು ಪರೀಕ್ಷಿಸಲು ನಾವು ನಿಯತಕಾಲಿಕವಾಗಿ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾದಂತೆಯೇ, ಜಾತಿ ಜನಗಣತಿಯು ಯಾವುದೇ ರಾಷ್ಟ್ರದ ಪ್ರಮುಖ ಪರೀಕ್ಷೆಯಾಗಿದೆ" ಎಂದು ಕಾಂಗ್ರೆಸ್ ಅಧ್ಯಕ್ಷರು ಉಲ್ಲೇಖಿಸಿದ್ದಾರೆ. ಜನಗಣತಿಯನ್ನು ನಡೆಸುವುದು ಒಂದು ಬೃಹತ್ ಕಾರ್ಯವಾಗಿದೆ ಮತ್ತು ಸರ್ಕಾರವು ಅದಕ್ಕೆ ಸಾಕಷ್ಟು ಹಂಚಿಕೆಗಳನ್ನು ಮಾಡಿಲ್ಲ. ನಿಯಮಿತ ಜನಗಣತಿಯ ಜೊತೆಗೆ ಜಾತಿ ಜನಗಣತಿಯನ್ನು ನಡೆಸಬೇಕು ಎಂದು ಅವರು ಒತ್ತಿ ಹೇಳಿದರು.




ಸಮಾಜದಲ್ಲಿ ಅದರ ತ್ವರಿತ ಹರಡುವಿಕೆಯನ್ನು ಗಮನಿಸಿದ ಬಿಜೆಪಿಯ ಸುಜೀತ್ ಕುಮಾರ್ ಆಟಿಸಂ ಸಮಸ್ಯೆಯನ್ನು ಪರಿಹರಿಸುವ ತುರ್ತು ಅಗತ್ಯವನ್ನು ಎತ್ತಿ ತೋರಿಸಿದರು. ಆಟಿಸಂ ಪೀಡಿತ ಮಕ್ಕಳಿಗೆ ವಿಶೇಷ ನೆರವು ಬೇಕಾಗುತ್ತದೆ ಎಂದು ಹೇಳಿದ ಅವರು, ಸರ್ಕಾರವು ಅವರಿಗೆ ನಿರ್ದಿಷ್ಟ ನಿಬಂಧನೆಗಳನ್ನು ಮಾಡಬೇಕೆಂದು ಒತ್ತಾಯಿಸಿದರು. ಈ ಬಗ್ಗೆ ಜಾಗೃತಿ ಮೂಡಿಸಲು ವಿಶೇಷ ಶಿಬಿರ ಆಯೋಜಿಸುವಂತೆ ಕುಮಾರ್ ಒತ್ತಾಯಿಸಿದರು.

# ಅಮೆರಿಕ ಉತ್ಪನ್ನಗಳ ಮೇಲಿನ ಸುಂಕ ಕಡಿತ: ಭಾರತದ ಮಹತ್ವದ ನಿರ್ಧಾರ

### ಇಂದು ಪರಸ್ಪರ ಸುಂಕ ನೀತಿ ಘೋಷಿಸಲಿರುವ ಅಮೆರಿಕ ಅಧ್ಯಕ್ಷ ಟ್ರಂಪ್

**ನವದೆಹಲಿ,ಏ.1:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಾಳೆ ಹೊಸ ಪರಸ್ಪರ ಸುಂಕ ನೀತಿಯನ್ನು ಘೋಷಣೆ ಮಾಡಲಿದ್ದಾರೆ. ಈ ಹೊಸ ನೀತಿಯ ಪ್ರಕಾರ, ಅಮೆರಿಕದ ಉತ್ಪನ್ನಗಳ ಮೇಲೆ ಯಾವ ದೇಶವು ಎಷ್ಟು ಶೇ. ಸುಂಕವನ್ನು ವಿಧಿಸುತ್ತದೆಯೋ, ಅದೇ ಪ್ರಮಾಣದಲ್ಲಿ ಆ ದೇಶದ ಆಮದುಗಳ ಮೇಲೆ ಅಮೆರಿಕವು ಸುಂಕ ವಿಧಿಸಲಿದೆ.

ಈ ಪರಸ್ಪರ ಸುಂಕ ವ್ಯವಸ್ಥೆಯು ಚೀನಾ, ಕೆನಡಾ, ಮೆಕ್ಸಿಕೊ ಮತ್ತು ಯುರೋಪಿಯನ್ ಯೂನಿಯನ್ನಂತಹ ಪ್ರಮುಖ ವ್ಯಾಪಾರ ಪಾಲುದಾರರನ್ನು ಗುರಿಯಾಗಿಸಲಿದೆ. ಇದರ ಜೊತೆಗೆ, ತೆರಿಗೆ ಸಂಗ್ರಹಣೆಯಲ್ಲಿ ಇತರ ಅಂಶಗಳಾದ ಮೌಲ್ಯವರ್ಧಿತ ತೆರಿಗೆ, ಸಬ್ಸಿಡಿಗಳು, ಮತ್ತು ವಿನಿಮಯ ದರಗಳನ್ನೂ ಪರಿಗಣಿಸಲಾಗುತ್ತಿದೆ. ಈಗಾಗಲೇ ಟ್ರಂಪ್ ಮಾರ್ಚ್‌ನಲ್ಲಿ ಚೀನಾದಿಂದ ಆಮದಾಗುವ ಎಲ್ಲಾ



ಸರಕುಗಳ ಮೇಲೆ 20% ಸುಂಕವನ್ನು ವಿಧಿಸಿದ್ದಾರೆ ಮತ್ತು ಕೆನಡಾ ಹಾಗೂ ಮೆಕ್ಸಿಕೊದಿಂದ ಆಮದಾಗುವ ಹೆಚ್ಚಿನ ಸರಕುಗಳ ಮೇಲೆ ಶೇ.25 ಸುಂಕವನ್ನು ಘೋಷಿಸಿದ್ದಾರೆ, ಆದರೆ USMCA–ಅನುಗುಣವಾದ ಸರಕುಗಳಿಗೆ ತಾತ್ಕಾಲಿಕ ವಿನಾಯಿತಿ ನೀಡಲಾಗಿದೆ. ಏ.2 ರಿಂದ ಈ ತೆರಿಗೆಗಳು ಎಲ್ಲಾ ದೇಶಗಳಿಗೆ ವಿಸ್ತರಿಸಲ್ಪಡಲಿದೆ.

ಈ ಬಗ್ಗೆ ಮಾತನಾಡಿರುವ ಟ್ರಂಪ್, ಏ.2ರಿಂದ ನಾವು ಎಲ್ಲಾ ದೇಶಗಳೊಂದಿಗೆ ಪರಸ್ಪರ ಸುಂಕಗಳನ್ನು ಪ್ರಾರಂಭಿಸುತ್ತೇವೆ. ಇದು ಎಲ್ಲರಿಗೂ ಸಮಾನವಾಗಿ ಇರುತ್ತದೆ. ತೀವ್ರ ವ್ಯಾಪಾರ ಅಸಮತೋಲನ ಹೊಂದಿರುವ 15 ದೇಶಗಳು ಮೇಲೆ ಮಾತ್ರ ಗಮನ ಹರಿಸದೇ ಎಲ್ಲಾ ವ್ಯಾಪಾರ ಪಾಲುದಾರರನ್ನು ಗುರಿಯಾಗಿಸುವ ಉದ್ದೇಶವನ್ನು ಸ್ಪಷ್ಟಪಡಿಸಿದ್ದಾರೆ.

ನಾವು ತುಂಬಾ ಒಳ್ಳೆಯವರಾಗಿರುತ್ತೇವೆ, ತುಲನಾತ್ಮಕವಾಗಿ ಹೇಳುವುದಾದರೆ, ನಾವು ತುಂಬಾ ಉದಾರವಾಗಿ ಇರುತ್ತೇವೆ. ನೀವು ಎರಡು ದಿನಗಳಲ್ಲಿ ನೋಡಲಿದ್ದೀರಿ, ಅದು ಬಹುಶಃ ನಾಳೆ ರಾತ್ರಿ ಅಥವಾ ಬಹುಶಃ ಬುಧವಾರ ಆಗಿರಬಹುದು. ಏ.2 ರ ಪರಸ್ಪರ ಸುಂಕದ ಗಡುವಿಗೆ ಮುಂಚಿತವಾಗಿ ಭಾರತವು ಅಮೆರಿಕದ ಉತ್ಪನ್ನಗಳ ಮೇಲಿನ ಸುಂಕವನ್ನು ಗಣನೀಯವಾಗಿ ಕಡಿತಗೊಳಿಸಲು ನಿರ್ಧರಿಸಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

## ಲೋಕಸಭೆಯಲ್ಲಿ ವಕ್ಫ್ ಮಸೂದೆ ಇಂದು ಮಂಡನೆ

**ನವದೆಹಲಿ,ಏ.1:** ವಕ್ಫ್ ತಿದ್ದುಪಡಿ ಮಸೂದೆ 2024 ಇಂದು ಲೋಕಸಭೆಯಲ್ಲಿ ಮಂಡನೆಯಾಗಲಿದೆ. ತೀವ್ರ ಚರ್ಚಿತ ಮಸೂದೆ ಮಂಡನೆಗೆ ಕೇಂದ್ರ ಸರ್ಕಾರ ಸಕಲ ತಯಾರಿ ಮಾಡಿಕೊಂಡಿದೆ. ಇದು ದೇಶದ ಮುಸ್ಲಿಮ್ ಸಮುದಾಯದಲ್ಲಿ ಪ್ರತಿಭಟನೆಗೆ ಕಾರಣವಾಗಿದೆ. ಈ ಮಸೂದೆಯು ವಕ್ಫ್ ಆಸ್ತಿಗಳ ಆಡಳಿತ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಹೊಸ ನಿಯಮಗಳನ್ನು ಜಾರಿಗೆ ತರಲಿದೆ ಎಂದು ಸರ್ಕಾರ ಹೇಳಿದ್ದರೂ, ಇದು ಮುಸ್ಲಿಮರ ಧಾರ್ಮಿಕ ಸ್ವಾತಂತ್ರ್ಯ ಮತ್ತು ಆಸ್ತಿ ಹಕ್ಕುಗಳ ಮೇಲೆ ದಾಳಿ ಎಂದು ವಿರೋಧ ಪಕ್ಷಗಳು ಮತ್ತು ಮುಸ್ಲಿಂ ನಾಯಕರು ಆರೋಪಿಸಿದ್ದಾರೆ.

ಮಸೂದೆ ಮಂಡನೆಗೆ ಸಂಬಂಧಿಸಿದಂತೆ ಲೋಕಸಭೆ ಸ್ಪೀಕರ್ ಓಂಬಿರ್ಲಾ ನೇತೃತ್ವದಲ್ಲಿ ಕಲಾಪಗಳ ವ್ಯವಹಾರಗಳ ಸಲಹಾ ಸಮಿತಿ ಸಭೆ ನಡೆಸಲಾಯಿತು. ಸಭೆಯಲ್ಲಿ ಮಸೂದೆಯ ಮೇಲೆ ಚರ್ಚೆಗೆ ಎಂಟು ಗಂಟೆಗಳ ಸಮಯ ನಿಗದಿ ಪಡಿಸಿದೆ ಎಂದು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜುಜು ಹೇಳಿದರು.



ಆದರೆ ಇದಕ್ಕೆ ವಿರೋಧ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ ಈ ಸಮಯ ಕಡಿಮೆಯಾಗಿದೆ ಎಂದು ಹೇಳಿವೆ, ಸರ್ಕಾರ ಸಮಯ ವಿಸ್ತರಣೆಗೆ ಒಪ್ಪದ ಹಿನ್ನೆಲೆ ಸಭೆಯನ್ನು ಬಹಿಷ್ಕರಿಸಲಾಯಿತು.

ಬಳಿಕ ಈ ಬಗ್ಗೆ ಮಾತನಾಡಿದ ಸಚಿವ ಕಿರಣ್ ರಿಜಿಜು, ವಕ್ಫ್ ಮಸೂದೆಯ ಬಗ್ಗೆ ಚರ್ಚೆ ನಡೆಯಬೇಕು ಎನ್ನುವುದು ಸರ್ಕಾರದ ಉದ್ದೇಶ ಪ್ರತಿಪಕ್ಷಗಳ ಸಭಾತ್ಯಾಗವು ಮಸೂದೆಯ ಕುರಿತು ಚರ್ಚೆಯನ್ನು ತಪ್ಪಿಸಲು ಒಂದು ನೆಪವಾಗಿದೆ ಮಸೂದೆ ಮಂಡನೆ ತಡೆಯಲು ಭಯ ಹುಟ್ಟಿಸಲು ಪ್ರತಿಪಕ್ಷಗಳು ಹೀಗೆ ಮಾಡುತ್ತಿವೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಇನ್ನು ಲೋಕಸಭೆಯಲ್ಲಿ ಬಿಲ್ ಮಂಡನೆ ಹಿನ್ನೆಲೆ ಕಾಂಗ್ರೆಸ್ ಮತ್ತು ಬಿಜೆಪಿ ಸೇರಿದಂತೆ ಇತರೆ ಎಲ್ಲ ಪ್ರಮುಖ ಪಕ್ಷಗಳು ತಮ್ಮ ಸಂಸದರಿಗೆ ಕಡ್ಡಾಯವಾಗಿ ಹಾಜರಿರುವಂತೆ ವಿಪಕ್ಷ ಜಾರಿ ಮಾಡಿದೆ. ಒಟ್ಟು ಲೋಕಸಭಾ ಬಲ 542 ಆಗಿದ್ದು ಮಸೂದೆ ಜಾರಿಯಾಗಲು 272 ಮತಗಳ ಅಗತ್ಯವಿದೆ. ಬಿಜೆಪಿ ನೇತೃತ್ವದ NDA ಲೋಕಸಭೆಯಲ್ಲಿ ಸುರಕ್ಷಿತವಾಗಿದೆ. NDA 293 ಸಂಸದರನ್ನು ಹೊಂದಿದ್ದು ಈ ಪೈಕಿ 240 ಸಂಸದರು ಬಿಜೆಪಿ 12 ಜನತಾದಳ (ಯುನೈಟೆಡ್), 16 ತೆಲುಗು ದೇಶಂ ಪಕ್ಷ , 5 ಲೋಕ ಜನಶಕ್ತಿ ಪಕ್ಷ (ರಾಮ್ ವಿಲಾಸ್), ಇಬ್ಬರು ರಾಷ್ಟ್ರೀಯ ಲೋಕದಳ ಮತ್ತು ಏಳು ಶಿವಸೇನೆಗೆ ಸೇರಿದವರಿದ್ದಾರೆ.

ರಾಜ್ಯಸಭೆಯ ಒಟ್ಟು ಸದಸ್ಯರ ಬಲ 236 ಆಗಿದ್ದು, ಎನ್‌ಡಿಎ 123 ಸಂಸದರ ಬಲವನ್ನು ಹೊಂದಿದೆ, ಇದರಲ್ಲಿ BJP ಯ 98, JD(U) ಯ ನಾಲ್ವರು, TDP ಯ 2, NCP ಯ 3 ಮತ್ತು RLD ಯ ಒಬ್ಬ ಜಯಂತ್ ಚೌಧರಿ ಸೇರಿದ್ದಾರೆ. ಬಹುಮತಕ್ಕೆ 119 ಸಂಸದರ ಬೆಂಬಲ ಬೇಕಾಗುತ್ತದೆ ಇದು ಎನ್‌ಡಿಎಯನ್ನು ಬಹುಮತದ ಅಂಚಿನಲ್ಲಿ ನಿಲ್ಲಿಸಿದೆ.

## ಡಾ.ಶಿವಕುಮಾರ ಸ್ವಾಮೀಜಿ 118ನೇ ಜಯಂತಿ



**ತುಮಕೂರು, ಏ.1;** ತುಮಕೂರಿನ ಸಿದ್ದಗಂಗಾ ಮಠದ ತ್ರಿವಿಧ ದಾಸೋಹಿ, ಶಿವೈಕ್ಯ ಡಾ.ಶ್ರೀ ಶಿವಕುಮಾರ ಸ್ವಾಮೀಜಿಯವರ 118ನೇ ಜನ್ಮ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಆಚರಿಸಲಾಯಿತು. ಶಿವಕುಮಾರ ಸ್ವಾಮೀಜಿಯವರ ಗದ್ದುಗೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪೂಜೆ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಮಠದ ಈ ಸಮಾರಂಭದಲ್ಲಿ ಭಾಗವಹಿಸಲು ಸಂತಸವಾಗುತ್ತಿದೆ ಎಂದು ಹೇಳಿದರು. ಕರ್ನಾಟಕ ಆಧ್ಯಾತ್ಮ, ಸಂಗೀತ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಖ್ಯಾತಿ ಹೊಂದಿದ್ದು, ಬಸವಣ್ಣ, ಅಲ್ಲಮಪ್ರಭು, ಪುರಂದರದಾಸ, ಅಕ್ಕಮಹಾದೇವಿ ಅವರಂತಹ ಸಂತರು, ಕವಿಗಳನ್ನು ಒಳಗೊಂಡಂತೆ ಮಹನೀಯರ ಕ್ಷೇತ್ರವಾಗಿದೆ ಎಂದು ಬಣ್ಣಿಸಿದರು. ಇದೇ ವೇಳೆ ಶಿಕ್ಷಣ ಕ್ಷೇತ್ರಕ್ಕೆ ಸಿದ್ಧಗಂಗಾಮಠ ನೀಡುತ್ತಿರುವ ಕೊಡುಗೆಗಳನ್ನು ಅವರು ಸ್ಮರಿಸಿದರು. 118ನೇ ಜಯಂತ್ಯೋತ್ಸವದ ಅಂಗವಾಗಿ 118 ಮಕ್ಕಳಿಗೆ "ಶಿ" ಅಕ್ಷರದಿಂದ ನಾಮಕರಣ ಮಾಡಲಾಯಿತು. ಸಮಾರಂಭದಲ್ಲಿ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸುತ್ತೂರು ಮಠದ ಶ್ರೀ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ, ಸಿದ್ಧಗಂಗಾ ಮಠದ ಉತ್ತರಾಧಿಕಾರಿ ಶಿವಸಿದ್ದೇಶ್ವರ ಸ್ವಾಮೀಜಿ, ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು. ತುಮಕೂರಿನ ಶಿವಕುಮಾರ ಸ್ವಾಮೀಜಿಯವರ 118 ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲ ತಾಣದಲ್ಲಿ ಸ್ವಾಮೀಜಿಗೆ ಗೌರವ ಸಲ್ಲಿಸಿರುವ ಪ್ರಧಾನಿ ನರೇಂದ್ರ ಮೋದಿ ಸ್ವಾಮೀಜಿ ಸಮಾಜಕ್ಕೆ ಮಾರ್ಗದರ್ಶಕ ಬೆಳಕಾಗಿದ್ದು, ಸಮಾಜಕ್ಕೆ ದಾರಿ ತೋರಿಸಿದ್ದಾರೆ ಎಂದು ಹೇಳಿದ್ದಾರೆ. ಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪೂಜ್ಯ ಸ್ವಾಮೀಜಿಯವರೊಂದಿಗಿನ ಕ್ಷಣಗಳನ್ನು ನೆನಪಿಸಿಕೊಂಡ ಪ್ರಧಾನಿ 1.17 ನಿಮಿಷಗಳ ವೀಡಿಯೊವನ್ನು ಹಂಚಿಕೊಂಡಿದ್ದಾರೆ.

ತುಮಕೂರಿನ ಸಿದ್ದಗಂಗಾ ಮಠದಲ್ಲಿ ಮಂಗಳವಾರ ನಡೆದ ಶಿವೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಗಳ 118 ನೇ ಜಯಂತಿಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು, "ಜಾತಿ ಧರ್ಮಗಳ ತಾರತಮ್ಯವಿಲ್ಲದೆ ಅನ್ನ, ಅಕ್ಷರ, ಆಶ್ರಯ ನೀಡುವ ಮೂಲಕ ಸಮಾಜಕ್ಕೆ ಸಾವಿರಾರು ಮುತ್ತುರತ್ನಗಳನ್ನು ನೀಡಿರುವ ಶ್ರೀ ಶಿವಕುಮಾರ ಸ್ವಾಮೀಜಿಗಳಿಗೆ "ಭಾರತ

> ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪ್ರಧಾನಮಂತ್ರಿಗಳು ಹಾಗೂ ಕೇಂದ್ರ ಸರ್ಕಾರದ ಗಮನಕ್ಕೆ ಶ್ರೀಗಳಿಗೆ ಭಾರತರತ್ನ ನೀಡುವ ವಿಚಾರ ತರಬೇಕು ಎಂದು ರಾಜ್ಯದ ಜನರ ಹಾಗೂ ರಾಜ್ಯ ಸರ್ಕಾರದ ಪರವಾಗಿ ಮನವಿ ಮಾಡುತ್ತೇನೆ.
>
> **ಡಿ.ಕೆ.ಶಿವಕುಮಾರ್** | ಡಿಸಿಎಂ

ರತ್ನ" ಪುರಸ್ಕಾರ ನೀಡಿ ಗೌರವಿಸಬೇಕು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ಸಚಿವ ರಾಜನಾಥ್ ಸಿಂಗ್ ಅವರ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

ಶಿವಕುಮಾರ ಸ್ವಾಮೀಜಿಗಳು ಈ ಮಠದ ದಾಸೋಹ ಪರಿಕಲ್ಪನೆ ಮೂಲಕ ಅನೇಕ ಸಾಧಕರನ್ನು ಸಮಾಜಕ್ಕೆ ನೀಡಿದ ಪರಮ ಪೂಜ್ಯರು ಹಾಗೂ ಸಿದ್ದಗಂಗಾ ಮಠ ಪವಿತ್ರ ಸ್ಥಳ" ಎಂದು ಹೇಳಿದರು. ನಾನು ಶ್ರೀಗಳ ಕೊನೆಯ ದಿನಗಳಲ್ಲಿ ಅವರನ್ನು ಚೆನ್ನೈ ಆಸ್ಪತ್ರೆಯಲ್ಲಿ ಭೇಟಿ ಮಾಡುವ ಅವಕಾಶ ಸಿಕ್ಕಿತ್ತು. ಶಿವಕುಮಾರಸ್ವಾಮಿಗಳು ನಮ್ಮ ಜಿಲ್ಲೆಯವರು. ನಮ್ಮ ತಂದೆ–ತಾಯಿ ನನಗೂ ಶಿವಕುಮಾರ ಎಂದು ಹೆಸರಿಟ್ಟಿರುವುದು ನನ್ನ ಭಾಗ್ಯ. ಶ್ರೀಗಳನ್ನು ದಿನವೂ ಸ್ಮರಿಸುವ ಪುಣ್ಯ ನನ್ನದು ಎಂದು ನಾನು ಭಾವಿಸುತ್ತೇನೆ" ಎಂದರು.

ನಮ್ಮ ಮನಸ್ಸಿಗೆ ಶಾಂತಿ ಸಿಗಬೇಕು ಎಂದು ನಾವು ಈ ಮಠಕ್ಕೆ ಆಗಮಿಸಿ ಶ್ರೀಗಳನ್ನು ಸ್ಮರಿಸುತ್ತಿದ್ದೇವೆ" ಎಂದು ಹೇಳಿದರು. "ಶ್ರೀಗಳು ಹಾಕಿಕೊಟ್ಟ ಹಾದಿ, ಅವರ ಆಚಾರ ವಿಚಾರ, ಅವರ ನುಡಿಮುತ್ತುಗಳು ನಮ್ಮ ಬದುಕಿಗೆ ಶಕ್ತಿ ತುಂಬುತ್ತವೆ. ಎಸ್.ಎಂ. ಕೃಷ್ಣ ಅವರ ಸರ್ಕಾರದಲ್ಲಿ ನಾನು ಸಚಿವನಾಗಿದ್ದಾಗ ಈ ಮಠಕ್ಕೆ ಆಗಮಿಸಿದ್ದೆ. ಇಲ್ಲಿನ ಅನ್ನದಾಸೋಹ ಕಾರ್ಯಕ್ರಮ ನೋಡಿ ಎಸ್.ಎಂ. ಕೃಷ್ಣ ಅವರು ವಾಪಸ್ ತೆರಳುವಾಗ ಮಹತ್ವದ ನಿರ್ಧಾರ ಮಾಡಿದರು. ಸಿದ್ದಗಂಗಾ ಮಠದ ಅನ್ನದಾಸೋಹ ಕಾರ್ಯಕ್ರಮ ನಮ್ಮ ಸರ್ಕಾರದ ಕಾರ್ಯಕ್ರಮವಾಗಿ ಪರಿವರ್ತನೆ ಆಗಬೇಕು ಎಂದು ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಶಾಲೆಗಳ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ ಆರಂಭಿಸಿದರು" ಎಂದು ಸ್ಮರಿಸಿದರು."ನಾವು ತಿನ್ನುವ ಅನ್ನ, ಬೇಯಿಸುವ ನೀರು, ನಮ್ಮ ದುಡಿಮೆಯ ಬೆವರಾಗಬೇಕೇ ಹೊರತು, ಬೇರೆಯವರ ಕಣ್ಣೀರಾಗಬಾರದು ಎಂದು ಶಿವಕುಮಾರಸ್ವಾಮೀಜಿ ಅವರು ಹೇಳಿದ್ದರು.








ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಹಾಗೂ ಶಾಸಕ ಡಾ.ಟಿ.ಬಿ.ಜಯಚಂದ್ರ ಅವರು, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ವಿ.ಸೋಮಣ್ಣ, ನಿರ್ಮಲಾ ಸೀತಾರಾಮನ್ ಹಾಗೂ ಶೋಭಾ ಕರಂದ್ಲಾಜೆ ಅವರನ್ನು ಭೇಟಿ ಮಾಡಿ ನವದೆಹಲಿಯ ಕೌಟಿಲ್ಯ ರಸ್ತೆಯಲ್ಲಿ ಕರ್ನಾಟಕ ಸರ್ಕಾರದ ವತಿಯಿಂದ ನೂತನವಾಗಿ ನಿರ್ಮಿಸಿರುವ "ಕರ್ನಾಟಕ ಭವನ"ದ ಉದ್ಘಾಟನಾ ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಕರ್ನಾಟಕ ಭವನದ ನಿವಾಸಿ ಆಯುಕ್ತೆ ಇಮ್‌ಕೊಂಗ್ಲಾ ಜಮೀರ್ ಅವರು ಸಹ ಇದ್ದರು.

# ಇಂದು ನೂತನ ಕರ್ನಾಟಕ ಭವನ (ಕಾವೇರಿ) ಉದ್ಘಾಟನೆ

**ನವದೆಹಲಿ,ಏ.1:** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ನೂತನ ಕರ್ನಾಟಕ ಭವನ (ಕಾವೇರಿ) ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಇದರ ಉದ್ಘಾಟನಾ ಸಮಾರಂಭವು ನಾಳೆ ಸಂಜೆ 6:30ಕ್ಕೆ ನಡೆಯಲಿದೆ. ಸಿಎಂ ಸಿದ್ದರಾಮಯ್ಯ ಅವರು ಈ ಭವ್ಯ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಾ ಖರ್ಗೆ ಘನ ಉಪಸ್ಥಿತಿ ವಹಿಸಿದ್ದಲಿದ್ದು, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಿಸಿಎಂ ಡಿ.ಕೆ ಶಿವಕುಮಾರ್, ಗೌರವಾನ್ವಿತ ಆಹ್ವಾನಿತರಾಗಿ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್, ಚಲುವಾದಿ ನಾರಯಣ ಸ್ವಾಮಿ ಅವರನ್ನು ಆಹ್ವಾನಿಸಿದೆ. ಕೇಂದ್ರ ಸಚಿವರಾದ ಎಚ್.ಡಿ ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ನಿರ್ಮಲಾ ಸೀತಾರಾಮನ್ ಅವರಿಗೂ ಆಹ್ವಾನಿಸಿದೆ. ದೆಹಲಿ ವಿಶೇಷ ಪ್ರತಿನಿಧಿಗಳಾದ ಟಿ.ಬಿ ಜಯಚಂದ್ರ, ಪ್ರಕಾಶ್ ಹುಕ್ಕೇರಿ ಕೂಡಾ ಭಾಗಿಯಾಗಲಿದ್ದಾರೆ.

**ಕರ್ನಾಟಕ ಭವನದ ವಿಶೇಷಗಳು**

ದೆಹಲಿಯ ಪ್ರತಿಷ್ಠಿತ ಪ್ರದೇಶವಾದ ಚಾಣಕ್ಯಪುರಿಯಲ್ಲಿ ನಿರ್ಮಾಣವಾಗಿರುವ ಈ ಕಟ್ಟಡವು 3532 ಚದರ ಮೀಟರ್ ವಿಸ್ತೀರ್ಣವನ್ನು ಹೊಂದಿದೆ. ಒಟ್ಟು 12,212 ಚದರ ಮೀಟರ್ (1,31,450 ಚದರ ಅಡಿ)



ನಿರ್ಮಾಣ ಪ್ರದೇಶವನ್ನು ಒಳಗೊಂಡಿರುವ ಈ ಭವನವು 2ಬಿ+ಯು+6ಗ ರಚನೆಯಲ್ಲಿ 9 ಅಂತಸ್ತುಗಳನ್ನು ಹೊಂದಿದೆ. ಈ ಕಟ್ಟಡದಲ್ಲಿ ಒಟ್ಟು 52 ಕೊಠಡಿಗಳಿದ್ದು, ಅದರಲ್ಲಿ 2 VVIP ಸೂಟ್‌ಗಳು, 32 ಸೂಟ್ ರೂಂಗಳು ಮತ್ತು 18 ಸಿಂಗಲ್ ರೂಂಗಳು ಸೇರಿವೆ. ಇದರ ಜೊತೆಗೆ 86 ಶೌಚಾಲಯಗಳು ಮತ್ತು ನೆಲಮಾಳಿಗೆಯಲ್ಲಿ 10 ಕಾರ್ ಪಾರ್ಕಿಂಗ್ ಸೌಲಭ್ಯವನ್ನು ಒಳಗೊಂಡಿದೆ. ಯೋಜನೆಯು 2018ರಲ್ಲಿ ಆರಂಭವಾಗಿದ್ದು ಇದಕ್ಕಾಗಿ 81.00 ಕೋಟಿ ರೂಪಾಯಿ ಮೀಸಲಿಟ್ಟಿತ್ತು ಆದರೆ ಕಾಮಗಾರಿ ಅಂತ್ಯದ ವೇಳೆಗೆ ಯೋಜನೆಯ ವೆಚ್ಚ 138 ಕೋಟಿಗೆ ತಲುಪಿದೆ.

ಕಟ್ಟಡದ ಒಟ್ಟು 10 ಮಹಡಿಗಳಲ್ಲಿ ವಿವಿಧ ಸೌಲಭ್ಯಗಳನ್ನು ಒದಗಿಸಲಾಗಿದೆ:

ಕೆಳಗಿನ ಬೇಸ್ಮೆಂಟ್ (2335 ಚ.ಮೀ.): ಲಿಫ್ಟ್ ಲಾಬಿ, ಮೆಟ್ಟಿಲು, ಡ್ರೈವರ್ ಲಾಂಡ್ರಿ, ಸೆಕ್ಯುರಿಟಿ ರೂಂ, ಬಿಎಂಎಸ್ ರೂಂ, 50 ಕಾರ್ ಪಾರ್ಕಿಂಗ್ ಸ್ಥಳ ಮೇಲಿನ ಬೇಸ್ಮೆಂಟ್ (2335 ಚ.ಮೀ.): ಮೆಟ್ಟಿಲು, ಸ್ಟಾಫ್ ರೂಂ, 24 ಕಾರ್ ಪಾರ್ಕಿಂಗ್ ಸ್ಥಳ, ಸ್ಟಾಫ್ ರೆಸ್ಟ್ರೂಂ ಗ್ರೌಂಡ್ ಫ್ಲೋರ್ (1050 ಚ.ಮೀ.): ರಿಸೆಪ್ಷನ್, ವೇಟಿಂಗ್ ರೂಂ, ಬೋರ್ಡ್ ರೂಂ, ಪ್ಯಾಂಟ್ರಿ, ಮೀಡಿಯಾ ಬ್ರೀಫಿಂಗ್, ವಿಐಪಿ ಲಾಂಜ್, ಟಾಯ್ಲೆಟ್, ಫೈರ್ ಕಂಟ್ರೋಲ್ ರೂಂ, ಟೂರಿಸಂ ಇನ್ಫೊ ಡೆಸ್ಕ್, ಸೆಕ್ಯುರಿಟಿ ರೂಂ.

**ಮೊದಲನೇ ಮಹಡಿ (1005 ಚ.ಮೀ.):** ಆರ್‌ಸಿ ಚೇಂಬರ್, ಡಿಆರ್‌ಸಿ, ಪಿಎ ರೂಂ, ಸ್ಟಾಫ್ ರೂಂ, ಆಡಳಿತಾತ್ಮಕ ದಾಖಲೆ ಕೊಠಡಿ, ಸರ್ವರ್ ರೂಂ, ಪ್ಯಾಂಟ್ರಿ, ಲಿಯಾಸನ್ ಆಫೀಸರ್ ರೂಂ, ಕಾನ್ಫರೆನ್ಸ್ ರೂಂ.

**ಎರಡನೇ ಮಹಡಿ (1050 ಚ.ಮೀ.):** 3 ಸೂಟ್ ರೂಂಗಳು, 4 ಸಿಂಗಲ್ ರೂಂಗಳು, ಎಡ್ ಸ್ಪೆಷಲ್ ರಿಪ್ರೆಸೆಂಟೇಟಿವ್, ಪಿಎ ರೂಂ, ಲೀಗಲ್ ರೆಕಾರ್ಡ್ ರೂಂ.

**ಮೂರನೇ ಮಹಡಿ (1050 ಚ.ಮೀ.):** 8 ಸೂಟ್ ರೂಂಗಳು, 3 ಸಿಂಗಲ್ ರೂಂಗಳು, ಜಿಮ್, ಪ್ಯಾಂಟ್ರಿ.

**ನಾಲ್ಕನೇ ಮಹಡಿ (1050 ಚ.ಮೀ.):** 9 ಸೂಟ್ ರೂಂಗಳು, ಪ್ಯಾಂಟ್ರಿ, ಹೌಸ್‌ಕೀಪಿಂಗ್

**ಐದನೇ ಮಹಡಿ (1050 ಚ.ಮೀ.):** 6 ಸೂಟ್ ರೂಂಗಳು, 4 ಸಿಂಗಲ್ ರೂಂಗಳು, ಪ್ಯಾಂಟ್ರಿ, ಹೌಸ್‌ಕೀಪಿಂಗ್

**ಆರನೇ ಮಹಡಿ (1050 ಚ.ಮೀ.):** 6 ಸೂಟ್ ರೂಂಗಳು, 3 ಸಿಂಗಲ್ ರೂಂಗಳು, ಪ್ಯಾಂಟ್ರಿ, ಹೌಸ್‌ಕೀಪಿಂಗ್

**ಏಳನೇ ಮಹಡಿ (237.00 ಚ.ಮೀ.):** ಟೆರೇಸ್, ಸ್ಟೇರ್‌ಕೇಸ್ ರೂಂ, ಸೌರಶಕ್ತಿ ಘಟಕಗಳನ್ನು ಹೊಂದಿದೆ.

ಕರ್ನಾಟಕ ಭವನ (ಕಾವೇರಿ) ದೆಹಲಿಗೆ ಭೇಟಿ ನೀಡುವ ಕರ್ನಾಟಕದ ಸರ್ಕಾರಿ ಅಧಿಕಾರಿಗಳು, ಗಣ್ಯರು ಮತ್ತು ಸಾರ್ವಜನಿಕರಿಗೆ ಆರಾಮದಾಯಕ ಆತಿಥ್ಯ ಸೌಲಭ್ಯವನ್ನು ಒದಗಿಸುವ ಉದ್ದೇಶವನ್ನು ಹೊಂದಿದೆ. ಈ ಭವನವು ಕರ್ನಾಟಕದ ಸಂಸ್ಕೃತಿ, ಪರಂಪರೆ ಮತ್ತು ಆತಿಥ್ಯವನ್ನು ಪ್ರತಿಬಿಂಬಿಸುವಂತೆ ವಿನ್ಯಾಸಗೊಳಿಸಲಾಗಿದೆ. ಇದರ ಜೊತೆಗೆ, ದೆಹಲಿಯಲ್ಲಿ ಕರ್ನಾಟಕ ಸರ್ಕಾರದ ಕಾರ್ಯಕ್ರಮಗಳು, ಸಭೆ–ಸಮಾರಂಭಗಳು ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಇದು ಪ್ರಮುಖ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.

## ವಾಯುಯಾನ ವಲಯಕ್ಕೆ ಉತ್ತೇಜನ

**ನವದೆಹಲಿ,ಏ.1:** ರಾಜ್ಯಸಭೆಯು ಮಂಗಳವಾರ ವಿಮಾನ ವಸ್ತುಗಳ ಹಿತಾಸಕ್ತಿಗಳ ಸಂರಕ್ಷಣಾ ಮಸೂದೆ, 2025 ಅನ್ನು ಅಂಗೀಕರಿಸಿದೆ, ಹೊಸ ನಾಗರಿಕ ವಿಮಾನಯಾನ ಶಾಸನವು ವಿಮಾನಗಳ ಗುತ್ತಿಗೆ ವೆಚ್ಚವನ್ನು ಕಡಿಮೆ ಮಾಡುತ್ತದೆ ಮತ್ತು ಇದರಿಂದಾಗಿ ವಿಮಾನ ದರಗಳಲ್ಲಿ ಇಳಿಕೆಯಾಗುತ್ತದೆ ಎಂದು ಸರ್ಕಾರ ಹೇಳಿದೆ. ರಾಜ್ಯಸಭೆಯಲ್ಲಿ ಧ್ವನಿಮತದ ಮೂಲಕ ಅಂಗೀಕರಿಸಲ್ಪಟ್ಟ ಈ ಮಸೂದೆಯು ಭಾರತದಲ್ಲಿ ಅಂತರರಾಷ್ಟ್ರೀಯ ಒಪ್ಪಂದಗಳ ಅನ್ವಯಕ್ಕೆ ಕಾನೂನು ಜಾರಿಗೆ ತರಲು ಪ್ರಯತ್ನಿಸುತ್ತದೆ. ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನ್ ನಾಯ್ಡು, ಸರಿಯಾದ ಕಾನೂನು ಭಾರತದಲ್ಲಿ ಹೆಚ್ಚಿನ ವಿಮಾನಗಳನ್ನು ತರುತ್ತದೆ ಮತ್ತು ಇದರ ಪ್ರಯೋಜನವು ದೇಶದ ಪ್ರಯಾಣಿಕರಿಗೆ ಹರಿದು ಬರುತ್ತದೆ ಎಂದು ಹೇಳಿದರು.

ಭಾರತೀಯ ವಿಮಾನಯಾನ ಕಂಪನಿಗಳು ಗುತ್ತಿಗೆ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತವೆ ಏಕೆಂದರೆ ಶೇ.80ಕ್ಕಿಂತ ಹೆಚ್ಚು ವಿಮಾನಗಳು ಗುತ್ತಿಗೆಯಲ್ಲಿವೆ ಮತ್ತು ಈ ಶಾಸನವು ದೇಶದಲ್ಲಿ ಗುತ್ತಿಗೆ ಅಂಗಡಿಗಳನ್ನು ಸ್ಥಾಪಿಸಲು ಉದ್ಯಮಕ್ಕೆ ಪ್ರೋತ್ಸಾಹ ನೀಡುತ್ತದೆ. ಪುಟ-7




ನವದೆಹಲಿಯ ಕರ್ನಾಟಕ ಭವನದ ನೂತನ ಕಟ್ಟಡದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯ ಮಾಹಿತಿ ಕೇಂದ್ರದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೆರವೇರಿಸಲಿದ್ದಾರೆ.ರಾಜ್ಯದ ಕಡಲ ತೀರಗಳು,ಪಾರಂಪರಿಕ ತಾಣಗಳು ವನ್ಯಜೀವಿ ಸಂಕುಲಗಳ ಮಾಹಿತಿ ಜೊತೆಗೆ ವಾಸ್ತವ್ಯದ ಅನುಕೂಲ ಹಾಗೂ ರಾಜ್ಯಾದ್ಯಂತ ಪ್ರವಾಸದ ತಾಣಗಳ ಸಂಪೂರ್ಣ ಮಾಹಿತಿಯನ್ನು ಇಲ್ಲಿ ಆಗಮಿಸುವ ಹಾಗೂ ವಾಸ್ತವ್ಯ ಹೂಡುವ ಅತಿಥಿಗಳಿಗೆ ತಿಳಿಸುವ ಸದುದ್ದೇಶ ಹೊಂದಿದ್ದು,ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆ ಹಾಗೂ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಸಿಬ್ಬಂದಿಯಿಂದ ನೀಡಲಾಗುತ್ತದೆ ಎಂದು ನವದೆಹಲಿಯಲ್ಲಿ ಕೆ ಎಸ್ ಟಿ ಡಿ ಸಿ ಯ ವ್ಯವಸ್ಥಾಪಕ ಸುನಿಲ್ ಕುಮಾರ್ ಅವರು ಪ್ರಕಟಿಸಿದ್ದಾರೆ.

Managing Editor : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಬಾಲಾಜಿಕೃಪಾ ಪ್ರಾಜೆಕ್ಟ್ ಪ್ರೈವೇಟ್ ಲಿ.

## ಬೆಂಗಳೂರಿನ ಹೆಸರಾಂತ ಇಂಜಿನಿಯರ್ಸ್ ಮತ್ತು ಕಂಟ್ರಾಕ್ಟರ್

# 14/1, ಬಾಲಾಜಿಕೃಪಾ, 2ನೇ ಮುಖ್ಯರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560 020, ದೂರವಾಣಿ: 080-2346 2988, ಮೊಬೈಲ್.ನಂ. 98801 50207

**ನವದೆಹಲಿಯ ಕರ್ನಾಟಕ ಭವನ-1 (ಕಾವೇರಿ) ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿಯಲ್ಲಿ ನಿರ್ಮಿಸಿರುವ ನೂತನ "ಕರ್ನಾಟಕ ಭವನ'ವನ್ನು ಅತ್ಯಂತ ಸುಂದರವಾಗಿ ಆಕರ್ಷಣೀಯವಾಗಿ, 9 ಅಂತಸ್ತಿನ ಸುಂದರ ಭವನವನ್ನು ನಿರ್ಮಾಣ ಮಾಡಿದ್ದಾರೆ. ಒಟ್ಟು 12.212 ಚ.ಮೀ ವಿಸ್ತೀರ್ಣ ( 1,31,450 ಚ.ಅಡಿ) ಈ ಭವನದಲ್ಲಿ ಒಟ್ಟು 52 ಕೊಠಡಿಗಳು ಲಭ್ಯವಿರುತ್ತವೆ.**


- ಸದರಿ ಭವನದಲ್ಲಿ 2 ವಿವಿಐಪಿ ಸ್ಯೂಟ್
- 32 ಸ್ಯೂಟ್ ಕೊಠಡಿಗಳು
- 18 ಒಂಟಿ ಕೊಠಡಿಗಳು
- 86 ಶೌಚಾಲಯಗಳನ್ನು ನಿರ್ಮಿಸಲಾಗಿದೆ.


- ಮಾನ್ಯ ರಾಜ್ಯಪಾಲರಿಗೆ
- ಮುಖ್ಯ ನ್ಯಾಯಮೂರ್ತಿಗಳಿಗೆ
- ಮಾನ್ಯ ಮುಖ್ಯಮಂತ್ರಿಗಳಿಗೆ
- ಮಾನ್ಯ ಉಪಮುಖ್ಯಮಂತ್ರಿಗಳಿಗೆ, ಮಾನ್ಯ ಮಂತ್ರಿಗಳಿಗೆ


ಕರ್ನಾಟಕ ಭವನದ ಹೊರನೋಟ



ಕರ್ನಾಟಕ ಭವನದ ಮುಖ್ಯದ್ವಾರ



ಕರ್ನಾಟಕ ಭವನದ ಸುಸಜ್ಜಿತ ಕಾನ್ಫರೆನ್ಸ್ ಹಾಲ್


ಕರ್ನಾಟಕ ಭವನದ ವಿಶಾಲವಾದ ಡೈನಿಂಗ್ ಹಾಲ್


ಕರ್ನಾಟಕ ಭವನದ ಮುಖ್ಯದ್ವಾರದಲ್ಲಿನ ಒಳಾಂಗಣ


ಕರ್ನಾಟಕ ಭವನದ ವಿವಿಐಪಿ ಸ್ಯೂಟ್-1


ಕರ್ನಾಟಕ ಭವನದ ವಿಶಾಲವಾದ ವಿವಿಐಪಿ ಸ್ಯೂಟ್-2



ಕರ್ನಾಟಕ ಭವನದ ರಿಸೆಪ್ಷನ್ ವಲಯ

## ನಿತ್ಯ ಪಂಚಾಂಗ 02.04.2025 ಬುಧವಾರ



ವಿಶ್ವವಸು ನಾಮ ಸಂವತ್ಸರ, ಚೈತ್ರ ಸುದ್ಧ ಚೌತಿ, ಕೃತ್ತಿಕಾ

ಪಂಚಮಿ, ದೇವರ ದಾಸಿಮಯ್ಯ ಜ. ದಾವಣಗೆರೆ ಬಕ್ಕೇಶ್ವರ ರತ, ಕಮ್ಮರಡಿ ಸಿದ್ಧಿವಿನಾಯಕ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಗ್ಯಾರಂಟಿ ಶುಲ್ಕ ವಸೂಲಿಗಾರ ಸರ್ಕಾರ: ಪ್ರಲ್ಹಾದ್ ಜೋಶಿ ಟೀಕೆ



**ಬೆಂಗಳೂರು, ಏ. 1–** ಹಾಲು, ಮೊಸರು ಅಷ್ಟೇ ಅಲ್ಲ, ಇದೀಗ ಮನೆಯ ಕಸ 400 ರೂಪಾಯಿ ಶುಲ್ಕಕ್ಕೂ ವಿಧಿಸುವ ಮೂಲಕ ಸಿದ್ದರಾಮಯ್ಯ ಸರ್ಕಾರ ಗ್ಯಾರಂಟಿ ಶುಲ್ಕ ವಸೂಲಿಗಾರ ಸರ್ಕಾರ ಎಂದು ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ನಾಗರಿಕ ಸರಬರಾಜು ಸಚಿವರು ಪ್ರಲ್ಹಾದ್ ಜೋಶಿ ಟೀಕಿಸಿದ್ದಾರೆ.

ಸುದ್ದಿಗಾರರ ಜೊತೆ, ಆರ್ಥಿಕವಾಗಿ ಸರ್ಕಾರ ದಿವಾಳಿಯಾಗಿದ್ದು, ಭ್ರಷ್ಟಾಚಾರದಲ್ಲಿ ಮುಳುಗಿದೆ. ತ್ಯಾಜ್ಯ ಸಂಗ್ರಹ ಮತ್ತು ವಿಲೇವಾರಿಗಾಗಿ ಆಸ್ತಿ ತೆರಿಗೆಯಲ್ಲಿ ಅಡಕವಾಗಿತ್ತು ಕಡಿಮೆ ಉಪಕರದ ಬದಲಿಗೆ ಕಟ್ಟಡ ವಿಸ್ತರಣೆ ಶುಲ್ಕ ನಿಗದಿಪಡಿಸಿ, ಜನಪರ ಸರ್ಕಾರದ ಬದಲು ಜನ–ಕರ ವಸೂಲಿಗಾರ ಸರ್ಕಾರ 'ವಾಗುತ್ತಿದೆ ಎಂದರು.

600 ಚದರಯಡಿ ನಿವೇಶನದಲ್ಲಿ ವಸತಿ ಕಟ್ಟಡದ ಪ್ರತಿಮನೆಗೆ ಮಾಸಿಕ 120 ರೂಪಾಯಿವರೆಗೆ ಶುಲ್ಕ ವಿಧಿಸುತ್ತಿದೆ. ಆಸ್ತಿ ವಿಸ್ತೀರ್ಣ ಹೆಚ್ಚಾದಂತೆ ಬಳಕೆದಾರರ ಶುಲ್ಕವು ಹೆಚ್ಚಾಗಲಿದೆ. ನಾಲ್ಕು ಸಾವಿರ ಚದರಯಡಿ ಮತ್ತು ಅದಕ್ಕಿಂತ ಹೆಚ್ಚಿನ ವಿಸ್ತೀರ್ಣದ ಮನೆಗೆ ಪ್ರತಿ ಮಾಸಿಕ ತಲಾ 400 ರಂತೆ ವಾರ್ಷಿಕ 4 ಸಾವಿರದ 800 ರೂಪಾಯಿ ಶುಲ್ಕ ವಿಧಿಸಲು ಮುಂದಾಗಿರುವ ರಾಜ್ಯ ಸರ್ಕಾರ ನಡೆ ಅಕ್ಷಮ್ಯ ಎಂದು ಹೇಳಿದರು.

ಕಟ್ಟಡಗಳಿಗೆ ಪ್ರತಿವರ್ಷ ವಾರ್ಷಿಕ ಶೇ.5ರಷ್ಟು ಶುಲ್ಕ ಹೆಚ್ಚಾಗಿದೆ. ಜೊತೆಗ ' ಜನರೇಟರ್, ಲಿಫ್ಟ್, ಪರಿಶೀಲನೆ ಮತ್ತು ನವೀಕರಣಕ್ಕೆ 800 ರೂಪಾಯಿ ಇದ್ದ ದರ ಈಗ ಏಕಾಏಕಿ 5 ರಿಂದ 8 ಸಾವಿರ ರೂಪಾಯಿಗೆ ಏರಿಕೆಯಾಗಿದೆ ಎಂದು ಇದು ಖಂಡನಾರ್ಹ ಎಂದು ತಿಳಿಸಿದರು.

# ಕನ್ನಡಕ್ಕೆ ಅನುವಾದಿಸಲಾದ ಎಂಜಿನಿಯರಿಂಗ್ ಪುಸ್ತಕಗಳ ಬಿಡುಗಡೆ




**ಬೆಂಗಳೂರು, ಏ.1–** ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಮತ್ತು ವಿಟಿಯು ಬೆಳಗಾವಿ ವತಿಯಿಂದ ಮಂಗಳವಾರ ನಡೆದ ಸಮಾರಂಭದಲ್ಲಿ ಕನ್ನಡಕ್ಕೆ ಅನುವಾದಿಸಲಾದ ಎಂಜಿನಿಯರಿಂಗ್ ಪುಸ್ತಕಗಳ ಸಂಗ್ರಹವನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಬಿಡುಗಡೆ ಮಾಡಿದರು.

ಆಲ್ ಇಂಡಿಯಾ ಕೌನ್ಸಿಲ್ ಆಫ್ ಟೆಕ್ನಿಕಲ್ ಎಜುಕೇಶನ್ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಜಂಟಿ ಪ್ರಯತ್ನದೊಂದಿಗೆ ಇಂಜಿನಿಯರಿಂಗ್ ಮತ್ತು ಡಿಪ್ಲೊಮಾ ಮೊದಲ ವರ್ಷದ ಕನ್ನಡ ಭಾಷೆಗೆ ಅನುವಾದಗೊಂಡ ಪುಸ್ತಕಗಳನ್ನು ಬಿಡುಗಡೆ ಮಾಡಲಾಗಿದೆ.

ನಂತರ ಮಾತನಾಡಿದ ರಾಜ್ಯಪಾಲರು, " ಯಾವುದೇ ರಾಷ್ಟ್ರದ ಪ್ರಗತಿಯಲ್ಲಿ ಶಿಕ್ಷಣ ವ್ಯವಸ್ಥೆಯು ಪ್ರಮುಖ ಪಾತ್ರ ವಹಿಸುತ್ತದೆ ದೇಶವನ್ನು ನಾಗರಿಕಗೊಳಿಸಲು ಕೆಲಸ ಮಾಡುತ್ತದೆ. ಇದರ ಸ್ಪಷ್ಟ ಪರಿಣಾಮವು ಸಮಾಜ, ಸಂಸ್ಕೃತಿ, ರಾಜಕೀಯ ಮತ್ತು ಆರ್ಥಿಕತೆಯ ಮೇಲೆ ಪ್ರತಿಫಲಿಸುತ್ತದೆ. ಜರ್ಮನಿ, ಫ್ರಾನ್ಸ್, ಜಪಾನ್, ರಷ್ಯಾ ಮತ್ತು ಚೀನಾದಂತಹ ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ, ಶಿಕ್ಷಣ ಮಾಧ್ಯಮಗಳು ಸಾಮಾನ್ಯವಾಗಿ ಅವರ ಮಾತೃಭಾಷೆಯಾಗಿದೆ. ಈ ದೇಶಗಳಲ್ಲಿ, ಪ್ರಾಥಮಿಕ ಶಿಕ್ಷಣ, ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಮತ್ತು ಪೂರಕ ಶಿಕ್ಷಣವನ್ನು ಹೊಂದಿದೆ ಅವರ ಮಾತೃಭಾಷೆಯಲ್ಲಿ. ಸ್ಥಳೀಯ ಶಿಕ್ಷಣವು ಬೌದ್ಧಿಕ ಬೆಳವಣಿಗೆ , ಭಾಷೆ ಮತ್ತು ಪಾನೀಯ ಸಾಮರ್ಥ್ಯ ವನ್ನು ಹೊಂದಿದೆ" ಎಂದು ಹೇಳಿದರು.

"ಮದನ್ ಮೋಹನ್ ಮಾಳ ವೀಯ ಅವರು "ಜೀವನದ ಸರ್ವತೋಮುಖ ಅಭಿವೃದ್ಧಿಯು ಶಿಕ್ಷಣದ ಮೂಲ ಮಂತ್ರವಾಗಿದೆ, ಅಂತಹ ಶಿಕ್ಷಣದ ವ್ಯವಸ್ಥೆ ಇರಬೇಕು ವಿದ್ಯಾರ್ಥಿಯು ತನ್ನ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕ ಶಕ್ತಿಯನ್ನು ಸಂಪಾದಿಸಬಹುದು ಮತ್ತು ಅದು ಅವನ ಮಾತೃಭಾಷೆ ಯಲ್ಲಿದ್ದಾಗ ಮಾತ್ರ ಸಾಧ್ಯ" ಎಂದು ನಂಬಿದ್ದರು. ನಮ್ಮ ಹೊಸ ಶಿಕ್ಷಣ ನೀತಿಯಲ್ಲಿ , ಸ್ಥಳೀಯ ಭಾಷೆ ಮತ್ತು ಮಾತೃಭಾಷೆಯನ್ನು ಶಿಕ್ಷಣದ ಮುಖ್ಯ ಮಾಧ್ಯಮವಾಗಿ ಮಾಡಿದೆ ವಿಶೇಷ ಒತ್ತು ನೀಡಲಾಗಿದೆ. ಶಿಕ್ಷಣವನ್ನು ಹೆಚ್ಚು ಅಂತರ್ಗತ, ಪರಿಣಾಮಕಾರಿ ಮತ್ತು ಪ್ರಾಯೋಗಿಕವಾಗಿಸುವುದು ಇವರ ಮುಖ್ಯ ಉದ್ದೇಶವಾಗಿದೆ" ಎಂದು ಮಾಡಿದರು.

"ಉನ್ನತ ಶಿಕ್ಷಣ ಮತ್ತು ಎಂಜಿನಿಯರಿಂಗ್, ವೈದ್ಯಕೀಯ, ಕಾನೂನು ಮತ್ತು ಇತರ ತಾಂತ್ರಿಕ ಕೋರ್ಸ್‌ಗಳನ್ನು ಪ್ರಾದೇಶಿಕ ಭಾಷೆಗಳಲ್ಲಿ ಲಭ್ಯವಾಗುವಂತೆ ಮಾಡುತ್ತದೆ ಮಾಡಲು ಯೋಜಿಸಲಾಗಿದೆ. ಈ ಯೋಜನೆಯ ಮೂಲಕ, ವಿದ್ಯಾರ್ಥಿ ಗಳು ತಮ್ಮ ಸ್ವಂತ ಭಾಷೆಯಲ್ಲಿ ಅಧ್ಯಯನ ಮಾಡುವ ಸೌಲಭ್ಯವನ್ನು ಒದಗಿಸುವ ಮೂಲಕ ಗುಣಮಟ್ಟ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ತಾಂತ್ರಿಕ ಶಿಕ್ಷಣ ಪುಸ್ತಕಗಳನ್ನು ಸ್ಥಳೀಯ ಭಾಷೆಗೆ ಭಾಷಾಂತರಿಸುವುದು ಹಲವು ಕಾರಣಗಳಿಗಾಗಿ. ವಿದ್ಯಾರ್ಥಿಗಳು ತಾಂತ್ರಿಕ ವಿಷಯಗಳು ತಮ್ಮ ಮಾತೃಭಾಷೆಯಲ್ಲಿ ಸುಲಭವಾಗಿ ಪಡೆಯಬಹುದು , ಇದು ಶಿಕ್ಷಣದ ಗುಣಮಟ್ಟವನ್ನು ಸುಧಾರಿಸುತ್ತದೆ ಮತ್ತು ನಾವೀನ್ಯತೆ ಮತ್ತು ಸಂಶೋಧನೆಯನ್ನು ಉತ್ತೇಜಿಸುತ್ತದೆ" ಎಂದು ಅಭಿಪ್ರಾಯಪಟ್ಟರು.

" ಮಾತೃಭಾಷೆಯ ಮೂಲಕ ತಾಂತ್ರಿಕ ಶಿಕ್ಷಣದಲ್ಲಿ ಸರಳತೆ ಮತ್ತು ಸಮಾನತೆಯನ್ನು ಒದಗಿಸುವ ಉದ್ದೇಶದಿಂದ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನಿಂದ ಭಾರತೀಯ ಭಾಷೆಗಳಲ್ಲಿ ತಾಂತ್ರಿಕ ಪುಸ್ತಕಗಳ ಅನುವಾದದ ಕಾರ್ಯವನ್ನು ಮಾಡಲಾಗುತ್ತಿದೆ. ಇಂಜಿನಿಯ ರಿಂಗ್ ಮತ್ತು ಡಿಪ್ಲೊಮಾ ಮಟ್ಟದ ಪುಸ್ತಕಗಳನ್ನು ಕನ್ನಡ ಭಾಷೆಗೆ ಭಾಷಾಂತರಿಸುವ ಕೆಲಸವನ್ನು ಸಮನ್ವಯಗೊಳಿಸಲು ಕರ್ನಾಟಕ ರಾಜ್ಯದ 'ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ' ನೋಡಲ್ ಕೇಂದ್ರವಾಗಿ ಆಯ್ಕೆಮಾಡಲಾಗಿದೆ. ಈ ವಿಶ್ವವಿದ್ಯಾಲಯವು ತನ್ನ ಕೆಲಸವನ್ನು ಸಕ್ರಿಯವಾಗಿ ಮಾಡುತ್ತಿದೆ" ಎಂದು ಹೇಳಿದರು.

"ಪ್ರಾದೇಶಿಕ ಭಾಷೆಗಳಲ್ಲಿ ಪುಸ್ತಕಗಳನ್ನು ಅಳವಡಿಸಲು ಮತ್ತು ಭಾಷಾಂತರಿಸಲು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿಯ ಬದ್ಧತೆಯು ಸಾವಿರಾರು ವಿದ್ಯಾರ್ಥಿ ಗಳನ್ನು ಸಬಲೀಕರಣಗೊಳಿಸಿದೆ. ಭವಿಷ್ಯದಲ್ಲಿ ಕಲಿಕೆಗೆ ಇನ್ನು ಮುಂದೆ ಅಡ್ಡಿಯಾಗುವುದಿಲ್ಲ ಎಂದ ಅವರು , ಪ್ರಾದೇಶಿಕ ಭಾಷೆಗಳಲ್ಲಿ ಶಿಕ್ಷಣವನ್ನು ಉತ್ತೇಜಿಸುವ ದೂರದೃಷ್ಟಿಯ ಪ್ರಯತ್ನಗಳಿಗಾಗಿ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು ಮತ್ತು ವಿಟಿಯು ಬೆಳಗಾವಿಗೆ ಅಭಿನಂದಿಸಿ ದರು. ಸಚಿವರಾದ ಎಂ.ಸಿ.ಸುಧಾಕರ್ ಅವರು ಮಾತ ನಾಡಿ, ಪ್ರಾದೇಶಿಕ ಭಾಷೆಗಳಲ್ಲಿ ತಾಂತ್ರಿಕ ಶಿಕ್ಷಣವನ್ನು ಒದಗಿಸುವ ಮೂಲಕ , ಹೆಚ್ಚಿನ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣವನ್ನು ಪಡೆಯಬಹುದು. ವಿದ್ಯಾರ್ಥಿಗಳು ತಮ್ಮ ಮಾತೃಭಾಷೆ ಯಲ್ಲಿ ತಾಂತ್ರಿಕ ವಿಷಯಗಳನ್ನು ಅರ್ಥಮಾಡಿ ಕೊಂಡಾಗ , ಅವರು ನಾವೀನ್ಯತೆ ಮತ್ತು ಸಂಶೋಧನೆಗೆ ಕೊಡುಗೆ ನೀಡುವ ಸಾಧ್ಯತೆಯಿದೆ ಎಂದು ಹೇಳಿದರು.

ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅಧ್ಯಕ್ಷ ಪ್ರೊ.ಟಿ.ಜಿ. ಸೀತಾರಾಮ್, ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಕರ್, ವಿಟಿಯು ಕುಲಪತಿ ಪ್ರೊಫೆಸರ್ ಎಸ್. ವಿದ್ಯಾಶಂಕರ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

### ಜನರ ರಕ್ತ ಹೀರುತ್ತಿದೆ ದರ ಬೀಜಾಸುರ ಸರ್ಕಾರ

## ಘಜ್ನಿ, ಘೋರಿ ನಾಚುವಂತೆ ಜನರ ಮೇಲೆ ಸರ್ಕಾರದಿಂದ ದರ ಏರಿಕೆ ದಂಡಯಾತ್ರೆ; ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ

ನವದೆಹಲಿ : ರಾಜ್ಯದಲ್ಲಿ 'ದರಬೀಜಾಸುರ' ಸರಕಾರ ಜನರ ರಕ್ತ ಹೀರುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು; ಇಂದಿನಿಂದ ಕಾಂಗ್ರೆಸ್ ಕಂಪನಿ ಸರಕಾರ ಕಸದ ಮೇಲೆಯೂ ಸೆಸ್ ವಿಧಿಸುತ್ತಿದೆ. ಜನರ ರಕ್ತ ಹೀರುತ್ತಿದೆ ಎಂದು ಕಿಡಿಕಾರಿದ್ದಾರೆ.

ರಾಜ್ಯ ಸರಕಾರ ದಿನಕ್ಕೊಂದು ಸುಳ್ಳು ಹೇಳುತ್ತಿದೆ. ತಿಂಗಳಿಗೊಂದು ದರ ಏರಿಕೆ ಮಾಡುತ್ತಿದೆ. ಕರ್ನಾಟಕ ಈಸ್ಟ್ ಇಂಡಿಯಾ ಕಾಂಗ್ರೆಸ್ ಕಂಪನಿ ಸರಕಾರದ ಆಡಳಿತದ ವೈಖರಿ ಇದು. ಇಂದಿನಿಂದ ಕಾಂಗ್ರೆಸ್ ಕಂಪನಿ ಸರಕಾರ ಕಸದ ಮೇಲೆಯೂ ಸೆಸ್ ವಿಧಿಸುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದರ ಏರಿಕೆಗೆ ಪಂಚ ಗ್ಯಾರೆಂಟಿಯನ್ನು ನೆಪ ಮಾಡಿಕೊಂಡಿದೆ. ಆದರೆ ಸರ್ಕಾರದ ದುರುದ್ದೇಶ: ಜನರ ಲೂಟಿ ಮಾಡುವುದಷ್ಟೇ. ಭಾರತದ ಮೇಲೆ ಆಕ್ರಮಣ ನಡೆಸಿ ನಿರಂತರ ಲೂಟಿ ಮಾಡಿದ ಮಹಮ್ಮದ್ ಘಜ್ನಿ, ಮಹಮ್ಮದ್ ಘೋರಿ ಅವರಿಬ್ಬರೂ ನಾಚುವಂತೆ ಕನ್ನಡಿಗರ ಮೇಲೆ ರಾಜ್ಯ ಕಾಂಗ್ರೆಸ್ ಸರಕಾರ ದರ ಏರಿಕೆ ದಂಡಯಾತ್ರೆ ನಡೆಸುತ್ತಿದೆ ಎಂದು ಅವರು ಆರೋಪ ಮಾಡಿದ್ದಾರೆ. ದುರಾಡಳಿತದಿಂದ ಸಮೃದ್ಧ ಕರ್ನಾಟಕವನ್ನು ಬರ್ಬಾದ್ ಮಾಡಿರುವ ಕಾಂಗ್ರೆಸ್ ಕಂಪನಿ ಸರಕಾರ ದರಬೀಜಾಸುರ ರೂಪ ತಳೆದು ಜನರ ರಕ್ತ ಹೀರುತ್ತಿದೆ ಎಂದು ಗುರುತರ ಆರೋಪ ಮಾಡಿರುವ ಅವರು; ನೀರು, ಮೆಟ್ರೋ ರೈಲು, KSRTC ಬಸ್ ಟಿಕೆಟ್, ಹಾಲು (3 ಸಲ ದರ ಏರಿಕೆ), ವಿದ್ಯುತ್, ಮುದ್ರಾಂಕ, ಮಾರ್ಗದರ್ಶಿ ಮೌಲ್ಯ, ಅಬ್ಕಾರಿ ಸುಂಕ, ಸರ್ಕಾರಿ ಆಸ್ಪತ್ರೆಗಳಲ್ಲಿ ಹೊರರೋಗಿಗಳ ಶುಲ್ಕ, ಶವದ ಮರಣೋತ್ತರ ಪರೀಕ್ಷೆ ಶುಲ್ಕ, ವೈದ್ಯಕೀಯ ಪ್ರಮಾಣ ಪತ್ರದ ದರ, ಲ್ಯಾಬ್‌ನಲ್ಲಿ ಪರೀಕ್ಷೆ ಶುಲ್ಕ, ವೃತ್ತಿಪರ ತೆರಿಗೆ, ಬಿತ್ತನೆ ಬೀಜಗಳ ದರವನ್ನು ಏರಿಕೆ ಮಾಡಿದೆ. ಇದು ದರ ಬೀಜಾಸುರ ಕಾಂಗ್ರೆಸ್ ಸರಕಾರ ಎಂದು ದೂರಿದ್ದಾರೆ.



ಇಷ್ಟು ಸಾಲದೆಂಬಂತೆ ಜನರ ಮೇಲೆ ಏಪ್ರಿಲ್ 1ರಿಂದ ಕಸದ ಸೆಸ್ ಹೇರುತ್ತಿದೆ ದರ ಬೀಜಾಸುರ ಸರ್ಕಾರ, ಕಸ ಹೆಸರಿನಲ್ಲಿ ಕೋಟಿ ಕೋಟಿ ಸುಲಿಗೆ ಗುರಿ ಹಾಕಿಕೊಂಡಿದೆ ಎಂದಿರುವ ಸಚಿವರು; ಸರ್ಕಾರವನ್ನು ದರ ಬೀಜಾಸುರ ಸರ್ಕಾರ ಎಂದು ಕರೆದಿದ್ದಾರೆ ಹಾಗೂ ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಗೆ ಹೋಲಿಸಿ ಕರ್ನಾಟಕ ಈಸ್ಟ್ ಇಂಡಿಯಾ ಕಾಂಗ್ರೆಸ್, ಕಾಂಗ್ರೆಸ್ ಕಂಪನಿ ಸರ್ಕಾರ ಎಂದು ಮೂಡಿಸಿದ್ದಾರೆ ಎಂದು ಟೀಕಿಸಿದ್ದಾರೆ.



ಗದಗ ಮೆಡಿಕಲ್ ಕಾಲೇಜಿಗೆ ಕೆ.ಎಚ್. ಪಾಟೀಲ್ ಅವರ ಹೆಸರಿಡಲು ಸರ್ಕಾರ ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಸಚಿವರು, ಶಾಸಕರು ಮತ್ತು ಮುಖಂಡರು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿದರು.

## ರಾಜ್ಯದ ಜನತೆಗೆ ಬೆಲೆ ಏರಿಕೆ ಗ್ಯಾರಂಟಿ ದಯಪಾಲಿಸಿದ ಕಾಂಗ್ರೆಸ್ ಸರ್ಕಾರ: ಬಿ.ವೈ.ವಿಜಯೇಂದ್ರ ಟೀಕೆ

**ಬೆಂಗಳೂರು, ಏ, 1;** ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ನಂತರ ಕಳೆದ 20 ತಿಂಗಳಿಂದ ರಾಜ್ಯದ ಜನರಿಗೆ ಬೆಲೆ ಏರಿಕೆ ಗ್ಯಾರಂಟಿ ದಯಪಾಲಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲು, ವಿದ್ಯುತ್, ನೀರು, ಪೆಟ್ರೋಲ್,

> ಏ. 2 ರಂದು ಫ್ರೀಡಂ ಪಾರ್ಕ್‌ನಲ್ಲಿ ಸರ್ಕಾರದ ವಿರುದ್ಧ ಅಹೋರಾತ್ರಿ ಧರಣಿ ಹಾಗೂ ಏ. 7 ರಂದು ಮೈಸೂರಿನಿಂದ ಜನಾಕ್ರೋಶ ಯಾತ್ರೆ ಕೈಗೊಳ್ಳುತ್ತಿರುವುದಾಗಿ ಹೇಳಿದರು.

ಡೀಸೆಲ್ ದರ, ಸ್ಟ್ಯಾಂಪ್ ಶುಲ್ಕ, ಮೆಟ್ರೊ ದರ ಏರಿಸುವ ಮೂಲಕ ಜನಸಾಮಾನ್ಯರ ಬದುಕು ಹೊರೆಯಾಗುವಂತೆ ಮಾಡಿದ್ದಾರೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಎಂದರೆ ಒಂದು ಕೈಯಿಂದ ಕೊಡುವುದು, ಮತ್ತೊಂದು ಕೈಯಿಂದ ಕಿತ್ತುಕೊಳ್ಳುವುದಾಗಿದೆ, ಇಂತಹ ನೀತಿಯಿಂದ ರಾಜ್ಯದ ಜನತೆ ರೋಸಿ ಹೋಗಿದ್ದಾರೆ. ನಿರಂತರವಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಆಗುತ್ತಿದ್ದು, ಜನ ಸಾಮಾನ್ಯರ ಬದುಕು ಬಹಳ ದುಸ್ತರವಾಗಿದೆ, ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ ಖಂಡಿಸಿ ನಾಳೆ ಬೆಳಗ್ಗೆ 11 ಗಂಟೆಗೆ ನಗರದ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಲಾಗುವುದು ಎಂದು ಹೇಳಿದರು. ಬಿಜೆಪಿ ಶಾಸಕರು, ವಿಧಾನ ಪರಿಷತ್ನ ಹಾಲಿ ಹಾಗೂ ಮಾಜಿ ಸದಸ್ಯರು, ರಾಜ್ಯಾದ್ಯಂತ ಪಕ್ಷದ ಎಲ್ಲ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಕಾರ್ಯಕರ್ತರು ಧರಣಿಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಪರಿಶಿಷ್ಟ ಜಾತಿ, ಪಂಗಡಗಳ ಸಾಮಾಜಿಕ, ಶೈಕ್ಷಣಿಕ ಅಭಿವೃದ್ಧಿಗೆ ಮೀಸಲಿಟ್ಟ 38 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸುವ ಮೂಲಕ ಸಿದ್ದರಾಮಯ್ಯ ಶೋಷಿತ, ಪೀಡಿತ ಸಮುದಾಯಗಳಿಗೆ ಅನ್ಯಾಯ ಎಸಗಿದ್ದಾರೆ. ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರಿ ಕಾಮಗಾರಿಗಳಲ್ಲಿ ಮುಸ್ಲೀಮರಿಗೆ ಶೇ.4ರಷ್ಟು ಮೀಸಲಾತಿ ನೀಡಿರುವುದು ಸಂವಿಧಾನ ವಿರೋಧಿ ಮಾತ್ರವಲ್ಲದೆ, ಹಿಂದೂಗಳನ್ನು ಅಪಮಾನಿಸುವುದಾಗಿದೆ ಎಂದು



> **ಅರ್ಥಪೂರ್ಣ ಆಚರಣೆ**
>
> ನಾಡಿನ ಭಕ್ತರ ಪಾಲಿಗೆ ನಡೆದಾಡುವ ದೇವರಾಗಿದ್ದ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 118ನೇ ಜಯಂತಿಯನ್ನು ದೇಶ ಸೇರಿದಂತೆ ನಾಡಿನಾದ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಶ್ರೀಗಳು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ ಎಂದರು.

ತಿಳಿಸಿದರು. ಸರ್ಕಾರದ ಜನ ವಿರೋಧಿ ನೀತಿಗಳನ್ನು ಖಂಡಿಸಿ, ಏಪ್ರಿಲ್ 7ರಂದು ಚಾಮುಂಡಿ ತಾಯಿ ದರ್ಶನ ಪಡೆದು ಪಾದಯಾತ್ರೆ ಮೂಲಕ ಹೋರಾಟ ಆರಂಭಿಸಲಾಗುವುದು, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೋರಾಟಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

# ಬಹುದಿನಗಳ ನಂತರ ಸಿಎಂ ಸಿದ್ದರಾಮಯ್ಯ ಇಂದು ದೆಹಲಿಗೆ

**ಬೆಂಗಳೂರು, ಏ.1–** ರಾಜ್ಯ ವಿಧಾನ ಪರಿಷತ್‌ನಲ್ಲಿ ಖಾಲಿ ಇರುವ ನಾಲ್ಕು ಸ್ಥಾನಗಳನ್ನು ಭರ್ತಿ ಮಾಡಲು ಮುಂದಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಸಂಬಂಧ ವರಿಷ್ಠರೊಡನೆ ಚರ್ಚಿಸಲು ನಾಳೆ ದೆಹಲಿಗೆ ತೆರಳುವರು. ಕಾಲಿನ ಮೂಳೆ ಮುರಿತದಿಂದ ಕಳೆದ ಎರಡು ತಿಂಗಳಿಂದ ಬೆಂಗಳೂರನ್ನು ಬಿಟ್ಟು ಹೊರಡಗೆ ಎಲ್ಲೂ ಹೋಗದೆ ಇದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಹುದಿನಗಳ ನಂತರ ನಾಳೆ ದೆಹಲಿಗೆ ತೆರಳುತ್ತಿದ್ದಾರೆ.



ವಿಧಾನ ಪರಿಷತ್‌ನ ನಾಲ್ಕು ನಾಮನಿರ್ದೇಶನಗಳ ಸ್ಥಾನಗಳು ಖಾಲಿ ಇದ್ದು, ಇವುಗಳನ್ನು ಭರ್ತಿ ಮಾಡಲು ವರಿಷ್ಠರೊಂದಿಗೆ ಚರ್ಚಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ದೆಹಲಿ ಯಾತ್ರೆ ಕೈಗೊಂಡಿದ್ದಾರೆ. ನಾಳೆ ಬೆಳಗ್ಗೆ ಬೆಂಗಳೂರಿನಿಂದ ದೆಹಲಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ತೆರಳಲಿದ್ದು, ನಾಡಿದ್ದು ಗುರುವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಹಲವರನ್ನು ಭೇಟಿ ಮಾಡಿ ಪರಿಷತ್‌ನ ನಾಲ್ಕು ಸ್ಥಾನಗಳಿಗೆ ಯಾರನ್ನು ನಾಮನಿರ್ದೇಶನ ಮಾಡಬೇಕು ಎಂಬುದನ್ನು ಚರ್ಚಿಸಿ ಅಂತಿಮ ತೀರ್ಮಾನ ಮಾಡುವರು.

ಈ ಹಿಂದೆ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ಮುಖ್ಮಯಂತ್ರಿ ಸಿದ್ಧರಾಮಯ್ಯ ಅವರನ್ನು ಅವರ ಆರೋಗ್ಯ ವಿಚಾರಿಸಲು ಮುಖ್ಯಮಂತ್ರಿಗಳ ನಿವಾಸಕ್ಕೆ ಬಂದಿದ್ದ ಸಂದರ್ಭದಲ್ಲಿ ಪ್ರಾಥಮಿಕವಾಗಿ ಪರಿಷ್ತನ ನಾವ 'ನಿರ್ದೇಶನದ ಬಗ್ಗೆ ಚರ್ಚೆಗಳು ನಡೆದಿದ್ದವು. ಆರೋಗ್ಯ ಸುಧಾರಣೆ ನಂತರ ದೆಹಲಿಗೆ ಬನ್ನಿ ಅಲ್ಲಿಯೇ ಎಲ್ಲವನ್ನು ಅಂತಿಮಗೊಳಿಸೋಣ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿಗಳಿಗೆ ಹೇಳಿದ್ದರು. ಅದರಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ನಾಳೆ ದೆಹಲಿಗೆ ತೆರಳುತ್ತಿದ್ದು, ಅಲ್ಲಿಯೇ ಎರಡು ದಿನಗಳ ಕಾಲ ವಾಸ್ತವ್ಯ ಹೂಡಿ ಪರಿಷತ್ ನಾಮನಿರ್ದೇಶನ ಸದಸ್ಯರ ಪಟ್ಟಿಯನ್ನು ಅಂತಿಮಗೊಳಿಸುವರು.

> **ಡಿಸಿಎಂ ಡಿ.ಕೆ.ಶಿವಕುಮಾರ್ ದೆಹಲಿಗೆ**
>
> ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ದೆಹಲಿ ಭೇಟಿ ಬೆನ್ನಲ್ಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹ ನಾಳೆ ದೆಹಲಿಗೆ ತೆರಳುವರು. ದೆಹಲಿಯಲ್ಲಿ ನೂತನವಾಗಿ ನಿರ್ಮಿಸಿರುವ ಕರ್ನಾಟಕ ಭವನದ ಉದ್ಘಾಟನಾ ಕಾರ್ಯಮಕ್ರದಲ್ಲಿ ಮುಖ್ಯಮಂತ್ರಿಗಳ ಜತೆ ಭಾಗಿಯಾಗಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹ ದೆಹಲಿಗ ತೆರಳಲಿದ್ದಾರೆ. ದೆಹಲಿಗೆ ತೆರಳುವ ಡಿ.ಕೆ. ಶಿವಕುಮಾರ್ ಅವರೊಂದಿಗೂ ವರಿಷ್ಠರು ಪರಿಷತ್ನ ನಾಮನಿರ್ದೇಶನ ಸ್ಥಾನಗಳ ಭರ್ತಿ ಸಂಬಂಧ ಚರ್ಚೆ ನಡೆಸಲು ಎಂದು ಹೇಳಲಾಗಿದೆ.

**ಆಕಾಂಕ್ಷಿಗಳ ಲಾಬಿ**

ಮುಖ್ಯಮಂತ್ರಿಗಳ ದೆಹಲಿ ಯಾತ್ರೆ ಬೆನ್ನಲ್ಲೆ ವಿಧಾನಪರಿಷತ್ನ ನಾಮನಿರ್ದೇಶನ ಸದಸ್ಯರಾಗಲು ತುದಿಗಾಲ ಮೇಲೆ ನಿಂತಿರುವ ನೂರಕ್ಕೂ ಹೆಚ್ಚು ಕಾಂಗ್ರೆಸ್ ಮುಖಂಡರು ಪರಿಷತ್ ಸ್ಥಾನ ಗಿಟ್ಟಿಸಲು ಈಗಾಗಲೇ ಲಾಬಿ ನಡೆಸಿದ್ದು, ಮುಖ್ಯಮಂತ್ರಿಗಳ ದೆಹಲಿ ಭೇಟಿ ಮಾಹಿತಿ ಸಿಗುತ್ತಿದ್ದಂತೆಯೇ ಈ ಆಕಾಂಕ್ಷಿಗಳು ಸಹ ದೆಹಲಿ ಯಾತ್ರೆ ಕೈಗೊಂಡಿದ್ದಾರೆ.

**ಸಣ್ಣ ಸಮುದಾಯಗಳಿಗೆ ಆದ್ಯತೆ**

ಪರಿಷತ್‌ನಲ್ಲಿ ಖಾಲಿ ಇರುವ ನಾಲ್ಕು ಸ್ಥಾನಗಳಿಗೆ ಕಾಂಗ್ರೆಸ್ ಪಕ್ಷ ಪ್ರಬಲ ಜಾತಿ ಸಮುದಾಯಗಳಿಗೆ ಮಣೆ ಹಾಕದೆ ಅವಕಾಶ ವಂಚಿತ ಸಣ್ಣ ಸಣ್ಣ ಸಮುದಾಯಗಳ ಮುಖಂಡರುಗಳಿಗೆ ಪರಿಷತ್ ನಾಮನಿರ್ದೇಶನ ಮಾಡಬೇಕು ಎಂಬ ಒತ್ತಾಯವು ಕಾಂಗ್ರೆಸ್ಸಲ್ಲಿ ಕೇಳಿ ಬಂದಿವೆ. ಜೈನ ಸಮುದಾಯವು ಸಹ ತಮ್ಮ ಸಮುದಾಯದ ಮುಖಂಡರನ್ನು ನಾಮ ನಿರ್ದೇಶನ ಮಾಡುವಂತೆ ಬೇಡಿಕೆ ಇಟ್ಟಿದ್ದಾರೆ. ಇದೆಲ್ಲರದ ಮಧ್ಯೆ ಹಲವು ಮುಖಂಡರುಗಳು ಪರಿಷತ್ ನಾಮನಿರ್ದೇಶನಗೊಳ್ಳಲು ಹೈಕಮಾಂಡ್ ಮಟ್ಟದಲ್ಲಿ ತಮ್ಮ ಗಾಡ್ ಫಾದರ್ಗಳ ಮೂಲಕ ಲಾಬಿ ನಡೆಸಿದ್ದಾರೆ.

### ಕಲಬುರಗಿ ನಗರವನ್ನು ಸ್ಮಾರ್ಟ್‌ಸಿಟಿಯಾಗಿ ರೂಪಿಸಲು ಕ್ರಮ

## ಯೋಜನೆ ಹಮ್ಮಿಕೊಳ್ಳಲು ಪೂರ್ವಭಾವಿ ಸಭೆ

**ಬೆಂಗಳೂರು ಏ.1–** ಕಲಬುರಗಿ ನಗರವನ್ನು ನಾಗರಿಕಸ್ನೇಹಿಯಾಗಿಸಲು ಸ್ಮಾರ್ಟ್ ಸಿಟಿಯಾಗಿ ರೂಪಿಸುವ ಸಲುವಾಗಿ ಯೋಜನೆಗಳನ್ನು ಹಮ್ಮಿಕೊಳ್ಳಲು ಪೂರ್ವಭಾವಿಯಾಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಶಾಸಕರು, ಅಧಿಕಾರಿಗಳು ಹಾಗೂ ಸಂಸ್ಥೆ ಗಳೊಂದಿಗೆ ಚರ್ಚೆ ನಡೆಸಿದರು.



ತಮ್ಮ ಕಚೇರಿಗೆ ಆಗಮಿಸಿದ್ದ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರೊಂದಿಗೆ ಸಭೆ ನಡೆಸಿದ ಸಚಿವರು ನಗರದ ಸಮಗ್ರ ಅಭಿವೃದ್ಧಿಗೆ ಪೂರಕವಾಗುವಂತೆ ಕಾರ್ಯಕ್ರಮಗಳನ್ನು ರೂಪಿಸುವ ನಿಟ್ಟಿನಲ್ಲಿ ಹಲವಾರು ಸಲಹೆ, ಸೂಚನೆಗಳನ್ನು ನೀಡಿದರು. ವಿಡಿಯೋ ಸಂವಾದದಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ ಹಾಗೂ ಕನಿಝಾ ಫಾತಿಮಾ ಹಾಗೂ ಕಲಬುರಗಿ ನಗರ ಪಾಲಿಕೆಯ ಆಯುಕ್ತರು, ನಗರ ಯೋಜನಾ ಸಂಸ್ಥೆಯಾದ ಐಐ ಹೆಚ್‌ಎಸ್ ಪ್ರತಿನಿಧಿಗಳು ಭಾಗವಹಿಸಿದ್ದರು. ನಗರಕ್ಕೆ ಸುಸ್ಥಿರ ನೀರು ಸರಬರಾಜು, ಉತ್ತಮ ರಸ್ತೆ, ಉದ್ಯಾನವನ, ತ್ಯಾಜ್ಯ ಮರುಬಳಕೆ, ತ್ಯಾಜ್ಯ ವಿಲೇವಾರಿ, ಸುಗಮ ವಾಹನ ಸಂಚಾರ, ಆಕರ್ಷಕ ಹಾಗೂ ಅನುಕೂಲಕರ ಬಸ್ ತಂಗುದಾಣಗಳ ನಿರ್ಮಾಣ ಮುಂತಾದ ಮೂಲಭೂತ ಸೌಲಭ್ಯಗಳನ್ನು ಉತ್ತಮ ಪಡಿಸಿ ಕಲಬುರಗಿ ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿ ಪರಿವರ್ತನೆ ಮಾಡುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

### ಕಾಂಗ್ರೆಸ್ ಸರ್ಕಾರ ಮತ್ತೊಂದು ಶಾಕ್

## ರಾಜ್ಯದಲ್ಲಿ ಲೀಟರ್ ಡೀಸೆಲ್ ಬೆಲೆ 2 ರೂ. ಏರಿಕೆ

**ಬೆಂಗಳೂರು,ಏ.1–** ರಾಜ್ಯ ಸರ್ಕಾರ ಪ್ರತಿ ಲೀಟರ್ ಡೀಸೆಲ್ ಬೆಲೆಯನ್ನು 2 ರೂ. ಏರಿಕೆ ಮಾಡಿದೆ. ಈಗಾಗಲೇ ಬೆಲೆ ಏರಿಕೆಯಿಂದ ತತ್ತರಿಸುವ ಜನತೆಗೆ ಕಾಂಗ್ರೆಸ್ ಸರ್ಕಾರ ಮತ್ತೊಂದು ಶಾಕ್ ನೀಡಿದ್ದು ಇಂದು ಮಧ್ಯರಾತ್ರಿಯಿಂದಲೇ ಪರಿಷ್ಕೃತ ದರ ಜಾರಿಯಾಗಲಿದೆ. ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು 18.44% ರಿಂದ 21.17 % ಗೆ ಏರಿಕೆ ಮಾಡಲಾಗಿದೆ. ಸದ್ಯ ರಾಜ್ಯದಲ್ಲಿ ಪ್ರತಿ ಲೀಟರ್ ಡೀಸೆಲ್‌ಗೆ 88.93 ರೂ. ದರವಿದೆ. ತೆರಿಗೆ ಏರಿಕೆಯಿಂದ ದರ 90.93 ರೂ.ಗೆ ಆಗಲಿದೆ. ಪೆಟ್ರೋಲ್ ಮೇಲೆ ಮಾರಾಟ ತೆರಿಗೆಯನ್ನು ಏರಿಸದ ಕಾರಣ ಪ್ರತಿ ಲೀಟರ್ ಪೆಟ್ರೋಲ್ ದರ 102. 84 ರೂ. ಇರಲಿದೆ. ಸರಕು ಸಾಗಾಣಿಕೆ ಮಾಡುವ ವಾಹನಗಳಾದ ಟ್ರಕ್, ಲಾರಿಗಳು ಡೀಸೆಲ್ ಬಳಸುವ ಕಾರಣ ಮುಂದಿನ ದಿನಗಳಲ್ಲಿ ಇದರ ನೇರ ಪರಿಣಾಮ ದಿನ ಬಳಕೆಯ ವಸ್ತುಗಳ ಮೇಲೆ ತಟ್ಟಲಿದೆ. ಇದರಿಂದಾಗಿ ದಿನ ಬಳಕೆ ತರಕಾರಿ, ಆಹಾರ ವಸ್ತುಗಳ ಬೆಲೆಯೂ ಏರಿಕೆ ಆಗಲಿದೆ



ನವದೆಹಲಿಯಲ್ಲಿರುವ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರು ನವದೆಹಲಿಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಮಾಡಿ ಬುಧವಾರ ನಡೆಯಲಿರುವ ಹೊಸ ಕರ್ನಾಟಕ ಭವನ ಕಟ್ಟಡ ಉದ್ಘಾಟನಾ ಸಮಾರಂಭಕ್ಕೆ ಆಹ್ವಾನಿಸಿದರು.

# ಸರ್ಕಾರದಿಂದ ಬೆಲೆ ಏರಿಕೆ ವಿರುದ್ಧ ಇಂದು ಅಹೋರಾತ್ರಿ ಧರಣಿ ಸತ್ಯಾಗ್ರಹಕ್ಕೆ ಯಡಿಯೂರಪ್ಪ ಸಜ್ಜು

**ಬೆಂಗಳೂರು, ಏ.1–** ರಾಜ್ಯ ಸರಕಾರವು ಜನವಿರೋಧಿ ಬೆಲೆ ಏರಿಕೆಯನ್ನು ಕೂಡಲೇ ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿ ಬಿಜೆಪಿ ನಾಳೆ ಅಹೋರಾತ್ರಿ ಧರಣಿ ಸತ್ಯಾಗ್ರಹ ಮಾಡಲಿದ್ದು, ನಾನು ಅದರಲ್ಲಿ ಪಾಲ್ಗೊಳ್ಳುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರು ಪ್ರಕಟಿಸಿದರು.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಎಲ್ಲ ಬೆಲೆ ಏರಿಕೆಯಿಂದ ಜನಸಾಮಾನ್ಯರಿಗೆ ಉಸಿರು ಕಟ್ಟುವ ಪರಿಸ್ಥಿತಿ ಬಂದಿದೆ. ಫ್ರೀಡಂ ಪಾರ್ಕಿನಲ್ಲಿ ಪ್ರತಿಭಟನೆ ಪ್ರಾರಂಭ ಮಾಡುತ್ತಿದ್ದೇವೆ. ನೋವು ಅನುಭವಿಸುತ್ತಿರುವ ಎಲ್ಲರೂ ಪಕ್ಷಭೇದ ಮರೆತು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಹಾಗೂ ಹೋರಾಟ ಯಶಸ್ವಿ ಮಾಡುವಂತೆ ವಿನಂತಿಸಿದರು. ಸಿಎಂ ಕುರ್ಚಿಗಾಗಿ ಕಾಂಗ್ರೆಸ್ಸಿನಲ್ಲಿ ಮುಸುಕಿನ ಗುದ್ದಾಟ ನಡೆದಿದೆ. ಮುಖ್ಯಮಂತ್ರಿ ಯಾರಾಗಬೇಕು ಎಂಬುದು ಅವರಿಗೆ ಮುಖ್ಯವೇ ಹೊರತು ಜನರು ಪ್ರಮುಖರಲ್ಲ ಎಂದು ಟೀಕಿಸಿದರು. ಬಿಜೆಪಿಯ ಹೋರಾಟ ಇನ್ನೂ ಅನೇಕ ದಿನ ನಡೆಯಲಿದೆ. ಮೈಸೂರಿನಲ್ಲಿ ನಡೆಯುವ ಹೋರಾಟದಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರೂ ಭಾಗವಹಿಸುತ್ತಾರೆ ಎಂದು ವಿವರಿಸಿದರು.

ಮಾಧ್ಯಮ ಸ್ನೇಹಿತರಿಗೂ ಬೆಲೆ ಏರಿಕೆ ಬಿಸಿ ತಟ್ಟಿದೆ ಎಂದು ಭಾವಿಸುತ್ತೇನೆ. ಇಂಥ ಸಂದರ್ಭದಲ್ಲಿ ಮಾಧ್ಯಮ ಸ್ನೇಹಿತರು ನಮ್ಮ ಹೋರಾಟದಲ್ಲಿ ಗಟ್ಟಿಯಾಗಿ ನಿಂತಾಗ ಈ ಸರಕಾರ ಒಂದು ಹೆಜ್ಜೆ ಹಿಂದಿಡಬಹುದು ಎಂಬ ನಂಬಿಕೆ ಇದೆ ಎಂದು ತಿಳಿಸಿದರು. ಯತ್ನಾಳ್ ಅವರ ಉಚ್ಚಾಟನೆ ವಿಚಾರವಾಗಿ ಯಾವುದೇ ಮಾತನಾಡುವುದಿಲ್ಲ ಎಂದು ಅವರು ಪ್ರಶ್ನೆಗೆ ಉತ್ತರ ನೀಡಿದರು.

ಅಜೀರ್ಣ ಆಗುವಷ್ಟು ಬಹುಮತವನ್ನು ಜನರು ಕಾಂಗ್ರೆಸ್ ಸರಕಾರಕ್ಕೆ ಕೊಟ್ಟಾಗ ಒಂದು ರೀತಿ ತುಘಲಕ್ ದರ್ಬಾರ್ ನಡೆಸಿ, ಜನಹಿತವನ್ನು ಮರೆತು, ಸಾಮಾನ್ಯ ಜನರು ಬದುಕಲಾಗದಷ್ಟು, ಉಸಿರು ಕಟ್ಟುವ ಪರಿಸ್ಥಿತಿಯನ್ನು ತಂದದ್ದು ಸಿದ್ದರಾಮಯ್ಯ ಸರಕಾರದ ಸಾಧನೆ ಎಂದು ಅವರು ಟೀಕಿಸಿದರು. ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಶೇ 4 ಮೀಸಲಾತಿ ನೀಡುವ ಅಲ್ಪಸಂಖ್ಯಾತರ ತುಷ್ಟೀಕರಣ ನೀತಿಯನ್ನು ಆಕ್ಷೇಪಿಸಿದ ಅವರು, ಉಳಿದ ಹಿಂದೂಗಳೇನು ಅಪರಾಧ ಮಾಡಿದ್ದಾರೆ ಎಂದು ಕೇಳಿದರು. ನಾವು ಮುಸ್ಲಿಮರ ವಿರೋಧಿಗಳಲ್ಲ ಎಂದು ತಿಳಿಸಿದರು. ಎಲ್ಲರನ್ನೂ ಸರಿ ಸಮಾನರಾಗಿ ನೋಡುವುದು ರಾಜ್ಯದ ಮುಖ್ಯಮಂತ್ರಿಯ ಕರ್ತವ್ಯ. ಅದನ್ನು ಮಾಡದೇ ಹಿಂದೂಗಳಿಗೆ ದ್ರೋಹ ಮಾಡಿದ್ದಾರೆ ಎಂದು ಆಕ್ಷೇಪಿಸಿದರು. ಪ್ರತಿ ತಿಂಗಳು ಒಂದಲ್ಲ ಒಂದು ರೀತಿ ಬೆಲೆ ಹೆಚ್ಚಿಸುತ್ತಿದ್ದಾರೆ. ಪೆಟ್ರೋಲ್, ಬಸ್ ಪ್ರಯಾಣದರ ಹೆಚ್ಚಿಸಿದ್ದಾರೆ. ಸಾಮಾನ್ಯ ಜನರು ಬಳಸುವ ಹಾಲಿನ ದರವನ್ನು ಇನ್ನೆಂದೂ ಇಲ್ಲದ ರೀತಿಯಲ್ಲಿ ಒಂದೇಬಾರಿಗೆ ಒಂದು ಲೀಟರ್‌ಗೆ 4 ರೂ. ಹೆಚ್ಚಿಸಿದ್ದಾರೆ. ಒಟ್ಟಾರೆಯಾಗಿ ಒಂದೇ ವರ್ಷದಲ್ಲಿ ಹಾಲಿಗೆ ಒಂದು ಲೀಟರಿಗೆ 9 ರೂ. ಹೆಚ್ಚಿಸಿದ್ದಾರೆ ಎಂದು ವಿವರಿಸಿದರು.

ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಿಸಿದ್ದಾರೆ. ಈ ಸರಕಾರ ಬಂದ ಬಳಿಕ ಎರಡನೇ ಬಾರಿ ವಿದ್ಯುತ್ ದರ ಹೆಚ್ಚಿಸುತ್ತಿದ್ದಾರೆ. ಇದರಿಂದ ಸಣ್ಣ, ಮಧ್ಯಮ



ವರ್ಗದ ಜನರು ಜೀವನ ಮಾಡಲು ಸಾಧ್ಯವಿಲ್ಲದೆ ಉಸಿರು ಕಟ್ಟುವ ಪರಿಸ್ಥಿತಿ ಬಂದಿದೆ ಎಂದರು.

ಹಿಂದೆ ರೈತರು ಟ್ರಾನ್ಸ್‌ಫಾರ್ಮರ್ ಹಾಕಿಸಲು 30 ಸಾವಿರ ವೆಚ್ಚ ಆಗುತ್ತಿತ್ತು. ಈಗ 2.5 ಲಕ್ಷ ಏರಿಸಿದ್ದಾರೆ. ಸ್ಟಾಂಪ್ ಡ್ಯೂಟಿ, ಎಸ್.ಆರ್.ವ್ಯಾಲ್ಯೂ, ಗೈಡೆನ್ಸ್ ವ್ಯಾಲ್ಯೂ– ಇವನ್ನು ಶೇ 100ರಿಂದ ಶೇ.1000ದಷ್ಟು ಏರಿಸಿದ್ದಾರೆ. ದಿನಬಳಕೆಯ ಪ್ರತಿ ವಸ್ತುವಿನ ಬೆಲೆಯನ್ನು ಏರಿಸುತ್ತಿರುವ ಕಾಂಗ್ರೆಸ್ ಸರಕಾರ, ಜನರನ್ನು ನೆಮ್ಮದಿಯಿಂದ ಬದುಕಲು ಬಿಡುತ್ತಿಲ್ಲ ಎಂದು ದೂರಿದರು.



ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಪದ್ಮನಾಭನಗರ ವಿಧಾನಸಭಾ ಕ್ಷೇತ್ರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಮಂಗಳವಾರ ಉದ್ಘಾಟಿಸಿದರು.

## ನನ್ನ ಉಚ್ಚಾಟನೆಯಾಗಲ್ಲ, ಹಿಂದುತ್ವಕ್ಕಾಗಿ ಹೊಸ ಪಕ್ಷ ಬೇಕಿಲ್ಲ–ರಮೇಶ್ ಜಾರಕಿಹೊಳಿ



**ಬೆಳಗಾವಿ, ಏ.1–** ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿ ಉಚ್ಚಾಟನೆ ಬಳಿಕ ತಮ್ಮನ್ನೂ ಉಚ್ಚಾಟಿಸಲಾಗುವುದು ಎಂಬ ವದಂತಿಗೆ ರೆಬಲ್ ಶಾಸಕ ರಮೇಶ್ ಜಾರಕಿಹೊಳಿ ಅವರು ಗರಂ ಆದ ಪ್ರಸಂಗ ನಡೆದಿದೆ. ಸುದ್ದಿಗೋಷ್ಠಿಯಲ್ಲಿ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಯತ್ನಾಳ್ ಬಳಿಕ ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ ಉಚ್ಚಾಟನೆಯ ಸರದಿ ಎಂಬ ಸುದ್ದಿ ಸುಳ್ಳು. ಗಾಳಿಯಲ್ಲಿ ಗುಂಡು ಹೊಡೆಯಬೇಡಿ ಎಂದು ಆಕ್ರೋಶಗೊಂಡರು. ನಮ್ಮ ತಂಡದವರು ಯಾರೂ ಬೇರೆ ಪಕ್ಷಕ್ಕೆ ಹೋಗಲ್ಲ ಎಂದೂ ಇದೇ ವೇಳೆ ಸ್ಪಷ್ಟಪಡಿಸಿದರು. ಇನ್ನು ಉಚ್ಚಾಟನೆ ಬಳಿಕ ಸಿಡಿದೆದ್ದಿರುವ ಯತ್ನಾಳ್ ಅವರು ಬಿಜೆಪಿ ಹಿಂದುತ್ವದ ಪಕ್ಷವಾಗಿ ಉಳಿದಿಲ್ಲ. ಪರ್ಯಾಯವಾಗಿ ಹೊಸ ಪಕ್ಷ ಕಟ್ಟುವೆ ಎಂಬ ಮಾತಿಗೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ ರಮೇಶ್ ಜಾರಕಿಹೊಳಿ, ಹಿಂದುತ್ವಕ್ಕಾಗಿ ಹೊಸ ಪಕ್ಷ ಬೇಕಾಗಿಲ್ಲ. ಯತ್ನಾಳ್ ಅವರನ್ನು ಉಚ್ಚಾಟನೆ ಮಾಡಿದ್ದು ನೋವು ತಂದಿದೆ. ಪಕ್ಷ ಮತ್ತೊಮ್ಮೆ ಅವರನ್ನು ಬರ ಮಾಡಿಕೊಳ್ಳಲಿದೆ. ಬಿಜೆಪಿಯಲ್ಲೇ ಯತ್ನಾಳ್ ಮುಂದುವರಿಯಲಿದ್ದಾರೆ. ಎಲ್ಲವೂ ಸರಿಯಾಗಲಿದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

## ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಚರ್ಚೆ ನಡೆದಿಲ್ಲ–ಪ್ರಿಯಾಂಕ್ ಖರ್ಗೆ ಸ್ಪಷ್ಟನೆ

**ಬೆಂಗಳೂರು, ಏ.1–** ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಕೆಳಗಿಸಬೇಕು ಎಂದು ಈಗಾಗಲೇ ಸಿಎಂ ಸಿದ್ದರಾಮಯ್ಯ ಬಣ ಸಚಿವರು ಕಸರತ್ತು ನಡೆಸುತ್ತಿದ್ದಾರೆಂಬ ಸುದ್ದಿ ಇದೆ. ಅತ್ತ ಸಚಿವ ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ತಮಗೆ ನೀಡುವಂತೆ ಈಗಾಗಲೇ ಲಾಬಿ ಮಾಡಿದ್ದು, ಅವರಿಗೆ ಆ ಹುದ್ದೆ ಸಿಗಲಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಆದರೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಸ್ಫೋಟಕ ಹೇಳಿಕೆ ನೀಡಿದ್ದು, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಕೇವಲ ಊಹಾಪೋಹ ಎನ್ನುವ ಮೂಲಕ ಜಾರಕಿಹೊಳಿಯವರಿಗೆ ನೀಡಿದರು.



ಡಿಕೆಶಿ ಅವರ ನಿವಾದ ಬಳಿ ಪ್ರಕ್ರಿಯೆ ನೀಡಿದ ಅವರು ಬದಲಾವಣೆ ಎಂಬುವುದು ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಸುದ್ದಿ ಅಷ್ಟೇ.

ಎಲ್ಲವೂ ಗಾಳಿ ಸುದ್ದಿ. ಅಲ್ಲದೇ ಉತ್ತರ ಕರ್ನಾಟಕದ ನಾಯಕರ್ನೋರ್ವರಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಲು ಹೈ ಕಮಾಂಡ್ ಮುಂದಾಗಿದೆ ಎಂಬ ಮಾತನ್ನೂ ತಳ್ಳಿ ಹಾಕಿದರು. ಸಂಪುಟ ಪುನರ್ ರಚನೆ, ಎಂಎಲ್‌ಸಿ, ನಾಮ ನಿರ್ದೇಶನ ಮತ್ತು ಪಕ್ಷಕ್ಕೆ ಸಂಬಂಧಿಸಿದ ಅನೇಕ ವಿಷಯಗಳ ಕುರಿತು ಈಗಾಗಲೇ ಹೈಕಮಾಂಡ್‌ಗೆ ವರದಿ ಹೋಗಿದೆ. ಸಿಎಂ, ಡಿಸಿಎಂ ದಿಲ್ಲಿಗೆ ಹೋಗುತ್ತಿದ್ದು, ನಂತರ ಎಲ್ಲವೂ ಮಾಹಿತಿ ಹೊರ ಬೀಳಲಿದೆ ಎಂದರು.

### ಡಾ. ಶಿವಕುಮಾರ ಸ್ವಾಮೀಜಿ 118ನೇ ಜಯಂತಿ

## ಶಿಕ್ಷಣದ ಮೂಲಕ ಸಮಾಜದ ಅಭಿವೃದ್ಧಿ ಸಿದ್ಧಗಂಗಾ ಸ್ವಾಮೀಜಿ ಪರಮಗುರಿ: ಎಚ್.ಎಂ.ರೇವಣ್ಣ



**ಬೆಂಗಳೂರು, ಏ.1–** ತುಮಕೂರಿನ ಸಿದ್ಧಗಂಗಾ ಮಠದ ಡಾ. ಶಿವಕುಮಾರ ಸ್ವಾಮೀಜಿ ಚಿಂತನೆಗಳು ಜನಕೇಂದ್ರಿತವಾಗಿದ್ದು, ಶಿಕ್ಷಣದ ಮೂಲಕ ಅಭಿವೃದ್ಧಿ ಹೊಂದಿದ ಸಮಾಜ ನಿರ್ಮಿಸುವುದು ಅವರ ಪರಮಗುರಿಯಾಗಿತ್ತು ಎಂದು ಸರ್ಕಾರದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ ಹೇಳಿದ್ದಾರೆ.

ರಾಜಾಜಿನಗರದಲ್ಲಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಟ್ರಸ್ಟ್ ನಿಂದ ಡಾ. ಶಿವಕುಮಾರ ಸ್ವಾಮೀಜಿ ಅವರ 118 ನೇ ಜಯಂತಿ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಸ್ವಾಮೀಜಿ ರೈತರು ಮತ್ತು ಜಾನುವಾರಗಳ ಸಂಕಷ್ಟಗಳ ನಿವಾರಣೆಗೆ ಆಸಕ್ತರಾಗಿದ್ದರು.

ಸಿದ್ದಗಂಗೆಯಲ್ಲಿ ಬಹುದೊಡ್ಡ ಜಾತ್ರೆ ನಡೆಯುತ್ತಿತ್ತು. ಅಲ್ಲಿ ರೈತರು, ರಾಸುಗಳಿಗೆ ಯಾವ ರೀತಿ ಸಹಾಯ ಮಾಡಬಹುದು ಎಂಬ ಕಾಳಜಿಯನ್ನು ಅವರು ಹೊಂದಿದ್ದರು.

ರೈತಾಪಿ ಜನರಿಗೆ ಬೇಕಾಗಿರುವ ಸೌಲಭ್ಯಗಳನ್ನು ಕಲ್ಪಿಸುತ್ತಿದ್ದರು. ಗ್ರಾಮೀಣ ಪ್ರದೇಶದಲ್ಲಿ ರಾತ್ರಿ ಜಗಜ್ಯೋತಿ ಬಸವೇಶ್ವರರ ನಾಟಕ ನೋಡಿ ಮಹಾ ಮಂಗಳಾರತಿ ಆದ ನಂತರ ಅಲ್ಲಿಂದ ಹೊರಡುತ್ತಿದ್ದರು. 18 ಸಾವಿರ ಮಕ್ಕಳಿಗೆ ವಿದ್ಯಾದಾನ ಮಾಡುತ್ತಿರುವ ರಾಜ್ಯದ ಅತಿದೊಡ್ಡ ತ್ರಿವಿಧ ದಾಸೋಹ ಮಠ ನಮ್ಮದು ಎಂಬ ಎಂದರು.

ಡಾ. ವೀರಪ್ಪ ಮೊಯ್ಲಿ ಮುಖ್ಯಮಂತ್ರಿಯಾಗಿದ್ದಾಗ ತುಮಕೂರಿನ ಮಹಿಳಾ ಕಾಲೇಜಿನ ಜಾಗವನ್ನು ಕಬಳಿಸಲು ಕೆಲವರು ಪ್ರಯತ್ನಿಸುತ್ತಿರುವ ಬಗ್ಗೆ ಸ್ವಾಮೀಜಿ ಅವರು ನನಗೆ ಮಾಹಿತಿ ನೀಡಿದರು. ಆಗ ಕಾಲೇಜಿನ ಜಾಗವನ್ನು ಮಠಕ್ಕೆ ಉಳಿಸಿಕೊಟ್ಟಿರುವುದು ತಮಗೆ ಅತ್ಯಂತ ಸಂತಸ ತರುವ ಸಂಗತಿ. ಚಲನಚಿತ್ರ ನಿರ್ಮಾಪಕ ಮತ್ತು ಲೇಖಕ ಬಿ.ಕೆ. ಶ್ರೀನಿವಾಸ್ [ಬೆಂಕೋಶ್ರೀ] ಮಾತನಾಡಿ, ಡಾ. ಶಿವಕುಮಾರ ಸ್ವಾಮೀಜಿ ಅವರ ಜಯಂತಿ ಅತ್ಯಂತ ಅರ್ಥಪೂರ್ಣವಾಗಬೇಕು. ಅದೇ ಮಾತು, ಅದೇ ವಚನ, ಅದೇ ರೀತಿಯ ಕಾರ್ಯಕ್ರಮಗಳು ಸಲ್ಲದು. ಈಗಿನ ಕಾಲದ ಮಕ್ಕಳು ಒಳಗೊಂಡಂತೆ ಎಲ್ಲರಿಗೂ ಸಲ್ಲುವ ಶಾಶ್ವತ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಇಂತಹ ಸಂದರ್ಭದಲ್ಲಿ ದಿವ್ಯಾಂಗರು, ಅಶಕ್ತರು, ನಿರಾಶ್ರಿತರಿಗೆ ನೆರವು ನೀಡುವ ಪರಿಪಾಠ ಬೆಳೆಸಿಕೊಳ್ಳಬೇಕು. ತನ್ಮೂಲಕ ಸ್ವಾಮೀಜಿ ಹೆಸರನ್ನು ಶಾಶ್ವತವಾಗಿ ಉಳಿಯುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಬೇಲಿಮಠದ ಶಿವರುದ್ರ ಮಹಾಸ್ವಾಮೀಜಿ, ಕರ್ನಾಟಕ ಸಂಸ್ಕೃತ ವಿವಿ ವಿಶ್ರಾಂತ ಕುಲಪತಿ ಪ್ರೊ. ಮಲ್ಲೇಂಪುರ ಜಿ. ವೆಂಕಟೇಶ್, ಟ್ರಸ್ಟ್ ಅಧ್ಯಕ್ಷ ಟಿ. ವೆಂಕಟೇಶ್ ಗೌಡ, ಉಪಾಧ್ಯಕ್ಷ ಕ್ರಾಂತಿರಾಜು, ಸಲಹೆಗಾರ ಫಾಲನೇತ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

## 3 ಎ, 3 ಬಿ ವರ್ಗದವರಿಗೂ ಮೀಸಲಾತಿಗೆ ನಿಖಿಲ್ ಕುಮಾರಸ್ವಾಮಿ ಆಗ್ರಹ

**ಬೆಂಗಳೂರು, ಏ.1–** 134 ಶಾಸಕರನ್ನು ಹೊಂದಿ ರುವ ರಾಜ್ಯ ಕಾಂಗ್ರೆಸ್ ಗುತ್ತಿಗೆ ಮೀಸಲಾತಿ ವಿಚಾರದಲ್ಲಿ ತಾರತಮ್ಯ ಮಾಡುತ್ತಿದೆ. 3 ಎ, 3ಬಿ ಎರಡು ವರ್ಗ ದವರಿಗೂ ಮೀಸಲಾತಿ ಸೌಲಭ್ಯ ಕಲ್ಪಿಸಬೇಕು ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಮುದಾಯದವರು ಏನು ದ್ರೋಹ ಮಾಡಿದ್ದಾರೆ. ಚುನಾವಣೆಯಲ್ಲಿ ಉಳಿದ ಸಮುದಾಯಗಳು ನಿಮ್ಮೊಂದಿಗೆ ನಿಲ್ಲಲಿಲ್ಲ. ಗುತ್ತಿಗೆಯಲ್ಲಿ ಶೇ 4 ರಷ್ಟು ಮೀಸಲಾತಿಯನ್ನು 2 ಬಿ ವರ್ಗದವರಿಗೆ ಕೊಟ್ಟಿದ್ದಿರಲ್ಲಾ. ಆರ್ಥಿಕವಾಗಿ ಎಲ್ಲರಿಗೂ ಸಮಾನ ಅವಕಾಶ ಕೊಡಬೇಕು. ನಿಮ್ಮ ನಾಯಕರು ಸಂವಿಧಾನದವನನ್ನು ಉಳಿಸುತ್ತೇವೆ ಎಂದು ಸಂವಿಧಾನದ ಪುಸ್ತಕವನ್ನು ಕೈಯಲ್ಲಿ ಹಿಡಿದು ಗಂಟೆ ಅಲ್ಲಾಡಿಸಿದಂಗೆ ಅಲ್ಲಾಡಿಸುವುದನ್ನ ನೋಡಿದ್ದೇವೆ. ಈ ರೀತಿ ಓಲೈಕೆ ರಾಜಕೀಯ ಮಾಡಿ ಏಕ ಸಮುದಾಯವನ್ನು ಮೆಚ್ಚಿಸುವುದಕ್ಕೆ ಈ ತೀರ್ಮಾನ ತೆಗೆದು ಕೊಂಡಿರುವುದು ಸರಿಯಲ್ಲ ಎಂದರು.

ಗುತ್ತಿಗೆಯಲ್ಲಿ ಶೇ 4 ರಷ್ಟು ಮೀಸಲಾತಿಯನ್ನು ಒಂದು ಸಮುದಾಯಕ್ಕೆ ಕೊಡಬೇಡಿ ಎಂದು ನಾವು ವಿರೋಧಿಸುತ್ತಿಲ್ಲ. 3ಎ, 3ಬಿ ಹಾಗೂ ಆರ್ಥಿಕವಾಗಿ



ಹಿಂದುಳಿದ ವರ್ಗದ ಎಲ್ಲರಿಗೂ ಸಮಾನತೆಯಿಂದ ಮೀಸಲಾತಿ ಇದೆ ಎಂದರು.

ಬುಧವಾರ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ಅಹೋರಾತ್ರಿ ಪ್ರತಿಭಟನೆ ಮಾ ಡುತ್ತಿದೆ, ನಮ್ಮ ಹೋರಾಟದ ರೂಪುರೇಷೆಗಳನ್ನು ಶೀಘ್ರದಲ್ಲೇ ಸಿದ್ಧಪಡಿಸುತ್ತೇವೆ. ನಮ್ಮಲ್ಲಿ ಯಾವುದೇ ರೀತಿಯ ಗೊಂದಲವಿಲ್ಲ ಎಂದು ಹೇಳಿದರು. ಹನಿಟ್ರ್ಯಾಪ್ ಬಗ್ಗೆ ಪ್ರಭಾವಿ ಸಚಿವರೇ ಹೇಳಿದ್ದಾರೆ. ಇದರ ಹಿಂದೆ ಯಾರೇ ಇರಲಿ ತನಿಖೆ ಮಾಡಿ ಅಂತ ಹೇಳಿದ್ರು, ಆದರೆ ಸಿನಿಮಾ ತೋರಿಸಿದ್ದೆ ಬೇರೆ, ಟೀಸರ್ ನೋಡ್ತಿರೋದೇ ಬೇರೆ.

ಕಳೆದ ಎರಡು ವರ್ಷಗಳಲ್ಲಿ ನಡೆದ ಪ್ರಕರಣಗಳಲ್ಲಿ ಹೇಗೆ ತನಿಖೆಯಾ ಯಿತು. ಈ ಪ್ರಕರಣದಲ್ಲಿ ಯಾಕೆ ತನಿಖೆಗೆ ವೇಗ ಸಿಗುತ್ತಿಲ್ಲ . ಸರ್ಕಾರ ಪಾರದರ್ಶಕ ತನಿಖೆ ನಡೆಸಿ ಹನಿಟ್ರ್ಯಾಪ್, ಕೊಲೆ ಸುಫಾರಿ ಯಾರು ಎಂಬುದನ್ನ ಜನತೆಯ ಮುಂದಿಡಬೇಕು ಎಂದು ನಿಖಿಲ್ ಕುಮಾರಸ್ವಾಮಿ ತೋರಿಸಿ ದರು.

### ಸಂವಿಧಾನದ 371–ಜೆ ನೇಮಕಾತಿ ಮುಂಬಡ್ತಿಗಳು ನನೆಗುದಿಗೆ

## ಶೀಘ್ರವೇ ಸಚಿವ ಪ್ರಿಯಾಂಕ್ ಖರ್ಗೆ ಜೊತೆ ಸಮಾಲೋಚನೆ: ಡಾ.ಲಕ್ಷ್ಮಣ ದಸ್ತಿ

**ಕಲಬುರಗಿ, ಏ.1–** ಕಲ್ಯಾಣ ಕರ್ನಾಟಕ ಪ್ರದೇಶದ ರಚನಾತ್ಮಕ ಪ್ರಗತಿಗೆ ಮತ್ತು ಕಲ್ಯಾಣ ಕರ್ನಾಟಕದ ನಿರುದ್ಯೋಗಿಗಳಿಗೆ ರಾಜ್ಯ ಸರ್ಕಾರದ ನೌಕರಿಗಳಲ್ಲಿ ನೇಮಕಾತಿ ಮತ್ತು ಮುಂಬಡ್ತಿಗಳಲ್ಲಿ 371ನೇ(ಜೆ) ಕಲಂ ಅನ್ವಯ ಮೀಸಲಾತಿ ನೀಡಿ ಭಾರತ ಸರ್ಕಾರ ಆದೇಶ ಹೊರಡಿಸಿ ದಶಕ ಗತಿಸಿದ್ದು, ಅದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯು, ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಸಚಿವರೂ ಆಗಿರುವ 371(ಜೆ) ಸಚಿವ ಸಂಪುಟ ಉಪಸಮಿತಿ ಅಧ್ಯಕ್ಷ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದು ಸಮಿತಿ ಅಧ್ಯಕ್ಷ ಡಾ.ಲಕ್ಷ್ಮಣ ದಸ್ತಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ, ಕೇಂದ್ರ ಸರ್ಕಾರದ ಆದೇಶದಂತೆ ಈ ಹಿಂದೆ 2014ರಲ್ಲಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ನಿಯಮಗಳನ್ನು ರೂಪಿಸಿ ಸರ್ಕಾರಿ ನೌಕರಿಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ನಾಲ್ಕನೇ ದರ್ಜೆ ನೌಕರಿಗಳಲ್ಲಿ ಶೇ.85ರಷ್ಟು, ಮೂರನೇ ದರ್ಜೆಯ ನೌಕರಿಗಳಲ್ಲಿ ಶೇಕಡಾ 80ರಷ್ಟು ಒಂದನೇ ಮತ್ತು ಎರಡನೇ ದರ್ಜೆ ನೌಕರಿಗಳಲ್ಲಿ ಶೇಕಡಾ 75ರಷ್ಟು ಮೀಸಲಾತಿ ನಿಗದಿ ಮಾಡಲಾಗಿದೆ. ಅದರಂತೆ, ರಾಜ್ಯಮಟ್ಟದ ಕಚೇರಿಗಳಲ್ಲಿ ಅಂದರೆ ಸೆಕ್ರೆಟರಿಯೇಟ್‌ಗಳಲ್ಲಿ ಶೇಕಡಾ 8ರಷ್ಟು ಮೀಸಲಾತಿ ನೀಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ. ಇದಕ್ಕೆ ಪೂರಕವಾಗಿ ಮುಂಬಡ್ತಿಯಲ್ಲಿಯೂ ಸಹ ಅನ್ವಯವಾಗುವಂತೆ ಆದೇಶಿಸಲಾಗಿದೆ. ಆದರೆ, ಸರ್ಕಾರದ ಬಹುತೇಕ ಇಲಾಖೆಗಳ ಅನುಷ್ಠಾನಾಧಿಕಾರಿಗಳು



ನೇಮಕಾತಿ ಮುಂಬಡ್ತಿ ಗಳಲ್ಲಿ 371ನೇ(ಜೆ) ಕಲಂ ಅನ್ವಯ ಕಟ್ಟುನಿಟ್ಟಾಗಿ ನೇಮಕಾತಿಗಳು ಮಾಡುತ್ತಿಲ್ಲ. ವಿನಾಕಾರಣ ಮೀನ–ಮೇಷ ಎಣಿಸುತ್ತಿದ್ದಾರೆ. ಅಷ್ಟೇ ಅಲ್ಲದೆ, ಮುಂಬಡ್ತಿ ಒಂದು ಸಹಜ ಪ್ರಕ್ರಿಯೆಯಾಗಿದ್ದರೂ ಸಹ ಸುಮಾರು ಹತ್ತಾರು ವರ್ಷಗಳಿಂದಲೂ ಸಹ ನಿಜವಾದ ಫಲಾನುಭವಿ ಗಳಿಗೆ ಮುಂಬಡ್ತಿ ನೀಡದೆ, ಆಯಾ ಇಲಾಖೆಯ ಅನುಷ್ಠಾನಾಧಿಕಾರಿಗಳು, 371ನೇ(ಜೆ) ಕಲಂ ನಿಯಮವನ್ನು ಗಾಳಿಗೆ ತೂರಿ ರಾಜಾರೋಷವಾಗಿ ನಿಲಕ್ಷ ಧೋರಣೆ ಅನುಸರಿಸುತ್ತಿದ್ದಾರೆ.

ಉಚ್ಚ ನ್ಯಾಯಾ ಲಯವೂ ಸಹ 371ನೇ(ಜೆ) ಕಲಂ ಅನ್ವಯ ನಿಯಮಗಳು ಜಾರಿಯಾಗಿರುವ 2014ನೇ ಸಾಲಿನಿಂದಲೇ ಮುಂಬಡ್ತಿಗಳು ನೀಡಬೇಕೆಂದು ಆದೇಶ ನೀಡಿದ್ದರೂ ಸಹ ಅನುಷ್ಠಾನಾಧಿಕಾರಿಗಳು ನ್ಯಾಯಾಲಯದ ಆದೇಶಕ್ಕೂ ಪಾಲಿಸುತ್ತಿಲ್ಲ. ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕಳೆದ ಮೂರು ತಿಂಗಳ ಪೂರ್ವದಲ್ಲಿ ಸಭೆ ಮಾಡಿ 371ನೇ(ಜೆ) ಕಲಂ ಅನ್ವಯ ನೇಮಕಾತಿಗಳು, ಕಟ್ಟುನಿಟ್ಟಾಗಿ ನಡೆಸಬೇಕು, ನೇಮಕಾತಿಯಾದ ಆಯಾ ಇಲಾಖೆಯ ಅಭ್ಯರ್ಥಿಗಳಿಗೆ ಆದೇಶ ನೀಡಬೇಕು, ಅದರಂತೆ ಮುಂಬಡ್ತಿಗಳು ಸಹ ಸಹಜ ಪ್ರಕ್ರಿಯೆಯಂತೆ ನಡೆಯಬೇಕೆಂದು ಆದೇಶ ನೀಡಿದರೂ ಸಹ ಅನುಷ್ಠಾನಾಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

371ನೇ(ಜೆ) ಅನುಚ್ಛೇದ ಅನುಷ್ಠಾನ ಸಮಿತಿಯ ಸಂಪುಟ ಉಪ ಸಮಿತಿಯ ಆಧ್ಯಕ್ಷರು ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್, ಅರಣ್ಯ ಸಚಿವ ಈಶ್ವರ ಖಂಡ್ರೆ ಅವರೂ ಸೇರಿದಂತೆ ಕಲ್ಯಾಣದ ಸಚಿವರು ಸಂಬಂಧಪಟ್ಟ ಅನುಷ್ಠಾನಾಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದರೂ ಸಹ ಕಲ್ಯಾಣದ ಪಾಲಿನ ನೇಮಕಾತಿಗಳು ಮತ್ತು ಮುಂಬಡ್ತಿಗಳು ನಡೆಯದೇ ನೆನೆಗುದಿಗೆ ಬಿದ್ದಿರುವುದು ವಿಷಾದದ ಸಂಗತಿಯಾಗಿದೆ.

## ಮೆಟ್ರೋ ದರ ಹೆಚ್ಚಳ:ಸಾರ್ವಜನಿಕ ಹಿತಾಸಕ್ತಿ ಅರ್ಜಿ ಹೈಕೋರ್ಟ್‌ನಲ್ಲಿ ವಜಾ

**ಬೆಂಗಳೂರು, ಏ.1–** ನಮ್ಮ ಮೆಟ್ರೋ ಪ್ರಯಾಣ ದರವನ್ನು ಹೆಚ್ಚಳ ಮಾಡಿದ್ದ ಬಿಎಂಆರ್‌ಸಿಎಲ್ ಕ್ರಮ ಪ್ರಶ್ನಿಸಿ ಸಲ್ಲಿಸಿದ್ದ ಹೈಕೋರ್ಟ್ ವಜಾಗೊಳಿಸಿ ಆದೇಶಿದೆ.



ಬಿಎಂಆರ್‌ಸಿಎಲ್ ನಿಯಮ ಬಾಹಿರವಾಗಿ ಶೇ.71ರವರೆಗೂ ದರ ಏರಿಕೆ ಮಾಡಿರುವುದನ್ನು ಪ್ರಶ್ನಿಸಿ ಬೆಂಗಳೂರಿನ ಸನತ್ ಕುಮಾರ್ ಶೆಟ್ಟಿ, ಚೈತನ್ಯ ಸುಬ್ರಹ್ಮಣ್ಯ ಮತ್ತು ಚೇತನ್ ಗಾಣಿಗೇರ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು.

ಈ ಅರ್ಜಿಯ ವಿಚಾರಣೆ ನಡೆಸಿದ್ದ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರಿದ್ದ ವಿಭಾಗೀಯ ಪೀಠ, ಮೆಟ್ರೋ ರೈಲ್ವೆ (ಕಾರ್ಯಾಚರಣೆ ಮತ್ತು ನಿರ್ವಹಣೆ) ಕಾಯಿದೆ 2002ರ ಸೆಕ್ಷನ್ 33ರ ಅಡಿಯಲ್ಲಿ ಶುಲ್ಕ ನಿಗದಿಗೆ ಅವಕಾಶವಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿ ಅರ್ಜಿ ವಜಾಗೊಳಿಸಿದೆ.

ಮೆಟ್ರೋ ಆಡಳಿತವು ಕಾಲಕಾಲಕ್ಕೆ ದರವನ್ನು ನಿಗದಿ ಪಡಿಸಲು ಅಧಿಕಾರವಿದೆ. ದರ ನಿಗದಿ ಸಮಿತಿ ರಚನೆ ಮಾಡಲಾಗಿದ್ದು, ಸಮಿತಿ ಶಿಫಾರಸ್ಸಿನಂತೆ ಬೆಲೆ ಏರಿಕೆ ಮಾಡಲಾಗಿದೆ. ಬೆಲೆ ಏರಿಕೆ ಸಂಬಂಧ ರಚನೆಯಾಗಿದ್ದ ತಜ್ಞರ ಸಮಿತಿ ಎಲ್ಲ ಆಯಾಮಗಳಲ್ಲಿ ಅಧ್ಯಯನ ಮಾಡಿ ಬೆಲೆ ಏರಿಕೆಗೆ ಶಿಫಾರಸ್ಸು ಮಾಡಿದೆ.

ಇಂಥ ತಜ್ಞರು ಪರಿಶೀಲಿಸಿ ಆದೇಶಿಸಿರುವ ಅಂಶಗಳನ್ನು ನ್ಯಾಯಾಲಯ ಮರು ಪರಿಶೀಲನೆ ನಡೆಸಲು ಅವಕಾಶ ಇಲ್ಲ ಎಂದು ನ್ಯಾಯಪೀಠ ತಿಳಿಸಿದೆ.

## ಹಾಲು, ವಿದ್ಯುತ್ ದರ ಏರಿಕೆ: ಏಪ್ರಿಲ್ ಮೊದಲ ದಿನ ಆಯ್ಕೆ: ಪಿ.ಸಿ.ಮೋಹನ್ ವ್ಯಂಗ್ಯ

**ಬೆಂಗಳೂರು, ಏ.1–** ಕರ್ನಾಟಕ ರಾಜ್ಯ ಸರ್ಕಾರ ಇಂದು ಏಪ್ರಿಲ್.1ರಿಂದ ಹಾಲಿನ ದರ, ವಿದ್ಯುತ್ ಪ್ರತಿ ಯೂನಿಟ್ ದರ ಏರಿಕೆ ಮಾಡಿದೆ. ಇದಲ್ಲದೇ ಬೆಂಗಳೂರಿನ ಜನರ ಮೇಲೆ ಕಸದ ಸೆಸ್ ವಿಧಿಸಿದೆ.

ಕನಿಷ್ಠ 10 ರಿಂದ 400 ರೂಪಾಯಿ ವಿಧಿಸಲು ಮುಂದಾಗಿದೆ. ಇದಕ್ಕೆ ವಿಪಕ್ಷ ನಾಯಕರು ಸೇರಿದಂತೆ ಅನೇಕರು ಆಕ್ಷೇಪಿಸಿದ್ದಾರೆ. ಕಸದ ಸೆಸ್ ವಿಧಿಸಲು ಸರ್ಕಾರ ಏಪ್ರಿಲ್ ಮೊದಲ ದಿನ ಆಯ್ಕೆ ಮಾಡಿಕೊಂಡಿದೆ ಎಂದು ಬಿಜೆಪಿ ಸಂಸದ ಪಿ.ಸಿ.ಮೋಹನ್ ವ್ಯಂಗ್ಯವಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಟ್ವಿಟ್ ಮಾಡಿರುವ ಸಂಸದ ಪಿ.ಸಿ.ಮೋಹನ್ ಅವರು, ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಬೆಂಗಳೂರಿನ ಮೇಲೆ ಹೊಸ ಕಸದ ಸೆಸ್ ವಿಧಿಸಲು ಏಪ್ರಿಲ್ ಮೂರ್ಖರ ದಿನವನ್ನು ಆರಿಸಿಕೊಂಡಿದೆ. ಏಕೆಂದರೆ ಜನರು ಮತ್ತೊಮ್ಮೆ ಮೂರ್ಖರಾಗಿದ್ದೇವೆ ಎಂದು ನೆನಪಿಸಲು ಸರ್ಕಾರ ಹೀಗೆ ಮಾಡಿದೆ ಎಂದು ಅವರು ದೂರಿದ್ದಾರೆ.

ಕಟ್ಟಡಗಳ ವಿಸ್ತೀರ್ಣ ಆದಾರದಲ್ಲಿ ಕಸ ನಿರ್ವಹಣೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು (ಬಿಬಿಎಂಪಿ) ಶುಲ್ಕ ವಿಧಿಸಿದೆ. ಇದರಿಂದ ವರ್ಷಕ್ಕೆ ರೂ.600 ಕೋಟಿ ಸಂಗ್ರಹಿಸುವ ಗುರಿಯನ್ನು ಹೊಂದಿದೆ ಎಂದು ಸಂಸದರು ಸರ್ಕಾರ ನಡೆಯನ್ನು ಖಂಡಿಸಿದರು. ಇದೇ ವಿಚಾರವಾಗಿ ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ ಅವರು, ರಾಜ್ಯದಲ್ಲಿ ದರ ಬೀಜಾಸುರ ಸರ್ಕಾರ ಇದೆ. ದಿನಕ್ಕೊಂದು ಸುಳ್ಳು ಹೇಳಿಕೊಂಡು ಅಗತ್ಯ ವಸ್ತುಗಳ ದರ ಏರಿಕೆ ಮಾಡುತ್ತಿದೆ. ಈಸ್ಟ್ ಇಂಡಿಯಾ ಕಂಪನಿಯಂತೆ ಕಾಂಗ್ರೆಸ ಕಂಪನಿಯು ಕಸ ನಿರ್ವಹಣೆ ಹೆಸರಿನಲ್ಲಿ ಸೆಸ್ ವಿಧಿಸುತ್ತಾ, ಕೋಟಿ ಕೋಟಿ ಸುಲಿಗೆಗೆ ಮುಂದಾಗಿದೆ. ಪಂಚ ಯೋಜನೆಗಳನ್ನು ಜಾರಿಗೆ ತಂದ ಸರ್ಕಾರವು ಅದನ್ನು ಮುಂದಿಟ್ಟುಕೊಂಡು ದರ ಏರಿಕೆ ಮಾಡುತ್ತಿದೆ ಎಂದರು.

2025ರ ಆರ್ಥಿಕ ವರ್ಷದಿಂದ ಹಾಲಿನ ದರ ಪ್ರತಿ ಲೀಟರ್ 4ರೂಪಾಯಿ ಏರಿಕೆ ಆಗಿದೆ. ಇದರಿಂದ ಮೊಸರಿನ ಬೆಲೆ ಸಹ ಅದರಷ್ಟೇ ದುಬಾರಿಯಾಗಿದೆ. ಇದರೊಂದಿಗೆ ಹಾಲಿನ ಇತರ



ಎಲ್ಲ ಉತ್ಪನ್ನಗಳ ದರ ಏರಿಕೆ ಆಗಿದ್ದು, ಗ್ರಾಹಕರಿಗೆ ಬೆಲೆ ಏರಿಕೆ ಬರೆ ದೊರೆತಿದೆ.ವಿದ್ಯುತ್ ದರ ಏರಿಕೆ ಮಾಡಿರುವ ಸರ್ಕಾರ ಅನುಷ್ಠಾನಕ್ಕೆ ತಂದಿದೆ. ಪ್ರತಿ ಯೂನಿಟ್ ದರ ಮುಂದಿನ ಮೂರು ವರ್ಷಕ್ಕೆ ಹೆಚ್ಚಿಸಿದ ಆದೇಶಿಸಿದೆ. ಈ ವರ್ಷ ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಬೆಂಗಳೂರಿನಲ್ಲಿ ಕುಡಿಯುವ ನೀರಿನ ದರ ಏರಿಕೆಗೆ ಸರ್ಕಾರ ಮುಂದಾಗಿದೆ. ಒಟ್ಟಾರೆ, ಪಂಚ ಗ್ಯಾರಂಟಿ ಯೋಜನೆಗಳಿಗೆ, ನೌಕರರ ಗ್ಯಾಚುಟಿ, ವೇತನ ಮುಂತಾದವುಗಳಿಗೆ ಹಣ ಹೊಂದಿಸಲು ಸರ್ಕಾರ ಮುಂದಾಗಿದೆ. ಒಂದು ಕೈಲಿ ಕೊಟ್ಟು, ಮತ್ತೊಂದು ಕೈಲಿ ದರ ಹೆಚ್ಚಿಸಿ ಕಿತ್ತುಕೊಳ್ಳುತ್ತಿದೆ ಎಂದು ಮಹಿಳೆಯರು ದೂರಿದ್ದಾರೆ.

## ಜಾಮೀನು ಕೋರಿ ಹೈಕೋರ್ಟ್‌ಗೆ ನಟಿ ರನ್ಯಾರಾವ್ ಅರ್ಜಿ

**ಬೆಂಗಳೂರು, ಏ.1–** ಗೋಲ್ಡ್ ಸ್ಮಗ್ಲಿಂಗ್ ಪ್ರಕರಣದಲ್ಲಿ ಜಾಮೀನು ಕೋರಿ ಹೈಕೋರ್ಟ್‌ಗೆ ನಟಿ ರನ್ಯಾ ರಾವ್ ಅರ್ಜಿ ಸಲ್ಲಿಕೆ ಮಾಡಿದ್ದಾರೆ.

ಹೌದು, ಸೆಷನ್ಸ್ ಕೋರ್ಟ್ ಜಾಮೀನು ಅರ್ಜಿ ತಿರಸ್ಕರಿಸಿದ ಹಿನ್ನೆಲೆ ರನ್ಯಾರಾವ್ ಪರ ವಕೀಲರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಬೇಲ್ ಸಿಗುವ ನಿರೀಕ್ಷೆಯಲ್ಲಿದ್ದ ಚಿನ್ನದ ಬೆಡಗಿಗೆ ಶಾಕ್ ಎದುರಾಗಿದೆ, ಗೋಲ್ಡ್ ಸ್ಮಗ್ಲಿಂಗ್ ಪ್ರಕರಣದಲ್ಲಿ ನಟಿ ರನ್ಯಾಗೆ ಜೈಲೇ ಗತಿಯಾಗಿದ್ದು, ನಟಿ ಬೇಲ್ ಅರ್ಜಿ ವಜಾಗೊಳಿಸಿದ 64ನೇ ಸೆಷನ್ಸ್ ಕೋರ್ಟ್ ಆದೇಶ ಹೊರಡಿಸಿದೆ.ನಟಿಗೆ ಬೇಲ್ ನೀಡದಂತೆ ವಾದಿಸಿದ್ದ ಆಖಖ ಪರ ವಕೀಲರು ಆರೋಪಿ ಪ್ರಭಾವಿಯಾಗಿದ್ದು, ಬೇಲ್ ನೀಡಿದ್ರೆ ಸಾಕ್ಷಿ ನಾಶ ಸಾಕ್ಷಿಗಳಿಗೆ ಬೆದರಿಕೆ ಸಾಧ್ಯತೆ ಎಂದು ವಾದ ಮಾಡಿದ್ದರು.




ಈ ಹಿನ್ನೆಲೆ ಅವರು ಹೈಕೋರ್ಟ್ ಮೊರೆ ಹೋಗಿದ್ದಾರೆ.ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ಬಳಿ ಇರುವ ಕೆಂಪೇಗೌಡ ಅಂತ ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಆರೋಪಿ ರನ್ಯಾ ರಾವ್ ಅವರನ್ನು ಬಂಧಿಸಲಾಗಿತ್ತು..ರನ್ಯಾ ರಾವ್ ಬಳಿ ಒಟ್ಟು 14.8 ಕೆಜಿ ಚಿನ್ನ ಸಿಕ್ಕಿರುವ ಮಾಹಿತಿ ಇದ್ದು ರಾಜ್ಯದ ಇತಿಹಾಸದಲ್ಲಿ ಅತಿ ದೊಡ್ಡ ಚಿನ್ನದ ಅಕ್ರಮ ಸಾಗಣೆ ಪ್ರಕರಣ ಎನ್ನಲಾಗಿದೆ. ರನ್ಯಾ ರಾವ್ ಡಿಜಿಪಿ ಡಾ. ಕೆ. ರಾಮಚಂದ್ರರಾವ್ ಅವರ ಮಲಮಗಳಾಗಿದ್ದಾರೆ.

## ಗುಡುಗು–ಮಿಂಚು ಸಹಿತ ಮಳೆಯಾಗುವ ಮುನ್ಸೂಚನೆ

**ಬೆಂಗಳೂರು, ಏ. 1–** ಕರಾವಳಿ ಹಾಗೂ ಉತ್ತರ ಒಳನಾಡಿನ ಕೆಲವೆಡೆ ಇಂದು ಮಳೆಯಾಗಿದೆ.

ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವೆಡೆ ಗುಡುಗು–ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಇದೇ 2, 3 ಹಾಗೂ 4 ರಂದು ಕರಾವಳಿ ಹಾಗೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಬೆಂಗಳೂರು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ರಾಜ್ಯದ ಹಲವೆಡೆ ಗುಡುಗು–ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರಕನ್ನಡ, ದಕ್ಷಿಣ



ಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು, ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ.




ತುಮಕೂರಿನಲ್ಲಿ ಮಂಗಳವಾರ ದಿವಂಗತ ಶಿವಕುಮಾರ ಸ್ವಾಮೀಜಿಯವರ 118ನೇ ಜಯಂತಿ ಪ್ರಯುಕ್ತ ಸಿದ್ದಗಂಗಾ ಮಠದಲ್ಲಿ ವಿದ್ಯಾರ್ಥಿಗಳು ಮೆರವಣಿಗೆ ನಡೆಸಿ ಗೌರವ ಸಲ್ಲಿಸಿದರು.

### 168.5 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಸಚಿವರ ಚಾಲನೆ

## ಮೂರು ಪಟ್ಟಣಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ: ಖಂಡ್ರೆ

**ಬೀದರ್, ಏ.1–** ಅಮೃತ ಯೋಜನೆ ಮೂಲಕ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ(ಬಿ) ಪಟ್ಟಣಗಳಿಗೆ ಶಾಶ್ವತ ಕುಡಿಯುವ ನೀರು ಪೂರೈಕೆ ಆಗಲಿದ್ದು, ಈ ಯೋಜನೆ ಮೂಲಕ ಮೂರು ಪಟ್ಟಣಗಳಿಗೆ ಪ್ರತಿನಿತ್ಯ ಶುದ್ಧ ಕುಡಿಯುವ ನೀರು ಸರಬರಾಜು ಆಗುತ್ತದೆ. ಜನಸಂಖ್ಯೆ ಹೆಚ್ಚಾದರೂ ಕೂಡ ನೀರು ಪೂರೈಕೆಯಲ್ಲಿ ಸಮಸ್ಯೆ ಆಗದಂತೆ ಮುಂದಾಲೋಚನೆಯ ಕ್ರಿಯಾ ಯೋಜನೆ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.



ಹುಮನಾಬಾದ್‌ನಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ (ಬಿ) ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ 168.45 ಕೋಟಿ ವೆಚ್ಚದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆ ಹಾಗೂ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಹುಮನಾಬಾದ ತಾಲೂಕಿನ ನಿಂಬೂರ ಗ್ರಾಮದಲ್ಲಿನ ಸಬ್ ಸ್ಟೇಷನ್ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಶಂಕುಸ್ಥಾಪನೆ ನೆರವೇರಿಸಿದರು. ಶಾಸಕ ಡಾ.ಸಿದ್ದು ಪಾಟೀಲ್ ಮತ್ತಿತರರಿದ್ದರು.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ (ಬಿ) ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ 168.45 ಕೋಟಿ ವೆಚ್ಚದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆ ಹಾಗೂ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಹುಮನಾಬಾದ ತಾಲೂಕಿನ ನಿಂಬೂರ ಗ್ರಾಮದಲ್ಲಿನ ಸಬ್ ಸ್ಟೇಷನ್ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ, ಈಗಾಗಲೇ ಈ ಯೋಜನೆ ಭಾಲ್ಕಿ ಪಟ್ಟಣದಲ್ಲಿ ಮಾಡಲಾಗಿದ್ದು, ಆ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ. ಅದೇ ಮಾದರಿಯಲ್ಲಿ ಈ ಭಾಗದ ಜನರ ನೀರಿನ ಬೇಡಿಕೆ ಈಡೇರಿಕೆಗೆ ಈ ಯೋಜನೆ ಸಹಕಾರಿಯಾಗಿದೆ. ಮಾಜಿ ಸಚಿವ ರಾಜಶೇಖರ ಪಾಟೀಲ ಅವಧಿಯಲ್ಲಿ ಈ ಯೋಜನೆ ಬಂದಿದ್ದು, ಇದೀಗ ಯೋಜನೆ ಅನುಷ್ಠಾನ ಆಗುತ್ತಿದೆ. ಈ ಭಾಗದ ಅಭಿವೃದ್ಧಿಗಾಗಿ ದಿ. ಬಸವರಾಜ ಪಾಟೀಲ, ದಿ. ಮಿರಾಜೋದ್ದಿನ್ ಪಟೇಲ ಕೆಲಸ ಮಾಡಿದ್ದಾರೆ. ಇದೀಗ ಶಾಸಕರಾಗಿ ಸಿದ್ದು ಪಾಟೀಲ ಕೂಡ ಅಭಿವೃದ್ಧಿ ಯೋಜನೆಗೆ ಮುಂದಾಗಿದ್ದಾರೆ. ಒಟ್ಟಾರೆ, ಜನರ ನಿರೀಕ್ಷೆ ಅನುಸಾರ ಅಭಿವೃದ್ಧಿ ಕೆಲಸಗಳು ಕ್ಷೇತ್ರದಲ್ಲಿ ನಡೆಯಬೇಕು ಎಂದರು.

ಅಮೃತ ಯೋಜನೆ ಮೂಲಕ ಹುಮನಾಬಾದ ಪಟ್ಟಣದ 7,500 ಕುಟುಂಬಗಳಿಗೆ, ಚಿಟಗುಪ್ಪ ಐದು 5 ಸಾವಿರ ಮತ್ತು ಹಳ್ಳಿಖೇಡ(ಬಿ) ಪಟ್ಟಣದ 4,500 ಕುಟುಂಬಗಳ ಮನೆ ಬಾಗಿಲಿಗೆ ಕುಡಿಯುವ ನೀರು ಸರಬರಾಜು ಆಗಲಿದೆ. ಕೇಂದ್ರದಿಂದ ಶೇ.50, ರಾಜ್ಯದಿಂದ ಶೇ.40 ಹಾಗೂ ಸ್ಥಳೀಯ ಆಡಳಿತದಿಂದ ಶೇ.10ರಷ್ಟು ಅನುದಾನ ಒದಗಿಸಲಾಗುತ್ತಿದೆ. ಕೇಂದ್ರಕ್ಕೆ ಅತೀ ಹೆಚ್ಚು ತೆರಿಗೆ ಪಾವತಿ ಮಾಡುವ ರಾಜ್ಯಗಳಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದ್ದು, ಹೆಚ್ಚಿನ ಅನುದಾನ ಕೇಂದ್ರ ರಾಜ್ಯಕ್ಕೆ ನೀಡಬೇಕು ಎಂದು ಒತ್ತಾಯಿಸಿದರು.

ಶಾಸಕ ಡಾ. ಸಿದ್ದು ಪಾಟೀಲ ಮಾತನಾಡಿ, ಪ್ರತಿಯೊಂದು ಮನೆಗೆ ಶುದ್ಧ ಕಡಿಯುವ ನೀರು ಪೂರೈಕೆ ಆಗಬೇಕು ಎಂಬುವುದು ಪ್ರಧಾನಿ ನರೇಂದ್ರ ಮೋದಿ ಅವರ ಕನಸಾಗಿದೆ. ಗ್ರಾಮೀಣ ಭಾಗದಲ್ಲಿ ಜೆಜೆಎಂ, ಪಟ್ಟಣ ಪ್ರದೇಶದಲ್ಲಿ ಅಮೃತ ಯೋಜನೆ ಮೂಲಕ ಜನರ ಮನೆಗೆ ನೀರು ಹರಿಸುವ ಕೆಲಸ ನಡೆದಿದೆ. ಕ್ಷೇತ್ರಕ್ಕೆ ಅನುದಾನ ತರಬೇಕಾದರೆ ಸಂಬಂಧಿಸಿದ ಸಚಿವರ ಮನೆಗೆ ಸುತ್ತಾಡಬೇಕಾಗುತ್ತದೆ. ಈ ಮಧ್ಯದಲ್ಲಿ ಕ್ಷೇತ್ರಕ್ಕೆ ದೊಡ್ಡ ಮೊತ್ತದ ಯೋಜನೆ ಬಂದಿರುವುದು ಸಂತಸ ಮೂಡಿಸಿದೆ ಎಂದರು.

## ಕಾದು ನೋಡಿ ಹೊಸ ಹೊಸ ಸುದ್ದಿ ಹೇಳ್ತೀನಿ: ಸತೀಶ್ ಜಾರಕಿಹೊಳಿ

**ಹುಬ್ಬಳ್ಳಿ, ಏ.1–** ರಾಜ್ಯ ಕಾಂಗ್ರೆಸ್‌ನಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸಿಎಂ ಸಿದ್ದರಾಮಯ್ಯ ಅವರ ಬಣ ಸಚಿವರು ತೀವ್ರ ಕಸರತ್ತು ನಡೆಸಿದ್ದು, ಈಗಾಗಲೇ ಸತೀಶ್ ಜಾರಕಿಹೊಳಿ ಅವರು ತಮಗೆ ಕೆಪಿಸಿಸಿ ಪಟ್ಟ ನೀಡುವಂತೆ ಹೈಕಮಾಂಡ್‌ಗೆ ಒತ್ತಡ ಹಾಕಿದ್ದಾರೆಂದು ಹೇಳಲಾಗುತ್ತಿದೆ. ಅಲ್ಲದೇ ನಿನ್ನೆಯಷ್ಟೇ ಸಚಿವ ಡಾ.ಜಿ ಪರಮೇಶ್ವರ್, ಸತೀಶ್ ಜಾರಕಿಹೊಳಿ ಅವರು ಸಚಿವ ಕೆ.ಜೆ.ಜಾರ್ಜ್ ಅವರ ಸರ್ಕಾರಿ ನಿವಾಸದಲ್ಲಿ ರಹಸ್ಯ ಸಭೆ ಮಾಡಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಮಹತ್ವದ ಮಾತುಕತೆ ನಡೆಸಿದ್ದಾರಂತೆ. ಹೈಕಮಾಂಡ್ ಮೇಲೆ ಒತ್ತಡ ಹೇರುವ ಬಗ್ಗೆ ಚರ್ಚಿಸಿದ್ದಾರೆಂಬ ಸುದ್ದಿ ಹರಿದಾಡುತ್ತಿದೆ.

ನಿನ್ನೆಯ ರಹಸ್ಯ ಸಭೆ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸತೀಶ್ ಅವರು, ಇದೀಗ ಯುಗಾದಿ ಹಬ್ಬ ಮುಗಿದಿದೆ. ರಂಜಾನ್ ಎಲ್ಲರೂ ಖುಷಿ ಖುಷಿಯಾಗಿದ್ದಾರೆ. ಜಾರ್ಜ್ ಅವರ ಭೇಟಿಗೆ ಯಾವುದೇ ರಾಜಕೀಯ ಲೇಪನ ಬೇಡ. ಇಲಾಖೆಗೆ ಸಂಬಂಧಿಸಿದ ಕೆಲಸಗಳಿರುತ್ತವೆ ಹೋಗಿದ್ವಿ. ಹೀಗಾಗಿ ಎಲ್ಲದಕ್ಕೂ ರಾಜಕೀಯ ಬೆರೆಸಲು ಆಗಲ್ಲ. ಅಭಿವೃದ್ಧಿ ವಿಚಾರವಾಗಿ ಭೇಟಿಯಾಗಿ ಮಾತನಾಡಿದ್ದೆ. ಕೆಪಿಸಿಸಿ ಅಧ್ಯಕ್ಷ ಬದಲಾವಣೆಯ ಕುರಿತ ನಿರ್ಣಯ ನಾವು ತೆಗೆದುಕೊಳ್ಳಲು ಆಗಲ್ಲ. ಅದು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರಕ್ಕೆ ಬಿಟ್ಟದ್ದು. ಇನ್ನೂ ಸಾಕಷ್ಟು ಸಮಯವಿದೆ, ಕಾದು ನೋಡೋಣ. ಈಗಲೇ ಎಲ್ಲವೂ ಹೇಳಲು ಆಗಲ್ಲ. ಮುಂದೆ ಹೊಸ..



ಹೊಸ ಸಂಗತಿಗಳನ್ನು ಹೇಳ್ತೇನೆ. ಇನ್ನು ಹನಿಟ್ರ್ಯಾಪ್‌ಗೆ ಸಂಬಂಧಪಟ್ಟಂತೆ ರಾಜಣ್ಣ, ರಾಜೇಂದ್ರ ಪೊಲೀಸರಿಗೆ ದೂರು ನೀಡಿದ್ದು, ಅದು ಪೊಲೀಸ್ ತನಿಖೆ ಮಾಡಬೇಕು. ನಾವೇನು ಹೇಳೋದು. ತನಿಖೆ ಮಾಡಲಿ ಕಾದು ನೋಡೋಣ. ಈ ಹನಿಟ್ರ್ಯಾಪ್ ಹಿಂದೆ ಮಹಾಯನಾಯಕ ಯಾರು, ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಅವೆಲ್ಲ ನಮಗೆ ಹೇಗೆ ಗೊತ್ತು? ನಾವು ಯಾರು ಅಂತ ಹೇಳಲಿಕ್ಕೆ ಆಗುತ್ತೆ, ತನಿಖಾ ಏಜೆನ್ಸಿ ಅವರೇ ಹೇಳ್ಬೇಕು. ನಾವು ಹೇಳೋಕೆ ಆಗಲ್ಲ. ಸಮಯ ಬಂದಾಗ ಹೇಳೋಣ ಎಂದು ಸತೀಶ್ ಜಾರಕಿಹೊಳಿ ಹೇಳಿದರು.


ದಲಿತ ಸಚಿವರ ಮಾತಿಗೆ ಹೈಕಮಾಂಡ್‌ನೇ ಎಲ್ಲ ಎಂಬ ವಿಚಾರವಾಗಿ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಅದೆಲ್ಲ ಇವತ್ತೂ ಬೇಡ, ಇವತ್ತು ಒಂದು ದಿನ ವಿಶ್ರಾಂತಿ ಪಡೆಯೋಣ. ಅವಕಾಶ ಸಿಕ್ಕಾಗ ಹೇಳಿ ಹೇಳುತ್ತೇವೆ ಎಂದರು.

## ಅಕಾಡೆಮಿ ಚಕೋರದಿಂದ ಭಾವೈಕ್ಯತೆ ಕವಿಗೋಷ್ಠಿ: ಸಾಹಿತಿಗಳ ಬರಹ ಹಾದಿ ತಪ್ಪುತ್ತಿವೆ–ಡಾ.ಸದಾನಂದ ಪೆರ್ಲ ಕಳವಳ

**ಕಲಬುರಗಿ, ಏ.1–** ಇಂದು ಕೆಲವು ಸಾಹಿತಿಗಳ ಬರಹ ಹಾದಿ ತಪ್ಪಿವೆ. ಒಂದು ಸಮುದಾಯ ಓಲೈಕೈಗಾಗಿ ಜಾತಿ,ಮತ,ಧರ್ಮಗಳ ಹೆಸರಲ್ಲಿ ಅಧಃಪತನ ನಡೆಯುತ್ತಿದೆ,ಇದು ತಪ್ಪು. ಸಾಹಿತಿ,ವಿದ್ವಾಂಸನಾದವನು ಸಮಾಜ ಅವಿಭಾಜ್ಯ ಅಂಗ ಭಾವೈಕ್ಯತೆ, ಸಮನ್ವಯತೆ ಹೊಂದುವ ನಮ್ಮ ಪರಂಪರೆ ಅರಿಯಲು ವಿಶಾಲ ದೃಷ್ಟಿ ಹೊಂದುವುದಿಲ್ಲವೇಕೆ ಎಂದು ಆಕಾಶವಾಣಿಯ ನಿವೃತ್ತ ಹಿರಿಯ ಕಾರ್ಯಕ್ರಮ ನಿರ್ವಹಣಾಧಿಕಾರಿ ಹಾಗೂ ಸಾಹಿತಿ ಡಾ.ಸದಾನಂದ ಪೆರ್ಲ ಸಾಹಿತಿಗಳನ್ನು ಪ್ರಶ್ನಿಸಿದರು. ಕೃಷ್ಣಾ ನಗರದ ವೇಣುವನದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಚಕೋರ ಸಾಹಿತ್ಯ ವೇದಿಕೆ ಮತ್ತು ರಾಮಪ್ಪ ಗೋನಾಲ ಸಾಹಿತ್ಯ, ಸಾಂಸ್ಕೃತಿಕ ಪ್ರತಿಷ್ಠಾನ ಸಹಯೋಗದೊಂದಿಗೆ ಏರ್ಪಡಿಸಿದ ಯುಗಾದಿ–ರಂಜಾನ್ ಹಬ್ಬದ ಪ್ರಯುಕ್ತ ಏರ್ಪಡಿಸಿದ ಭಾವೈಕ್ಯತೆ ಕವಿಗೋಷ್ಠಿಯ ಮುಖ್ಯ ಅತಿಥಿಯಾಗಿ ಮಾತನಾಡಿ ಒಂದು ಕವಿತೆ ಕವಿ ಬರೆದು ಓದಿ ದರೆ,ಪ್ರಕಟವಾದರೆ ಅದು ಜನರ ಸ್ವತ್ತಾಗುತ್ತದೆ. ಕವಿಗಳದ್ದಾಗದು ಭಾರತೀಯ ಸನಾತನ ಪರಂಪರೆ ಅರಿತುಕೊಳ್ಳುವು ದು ಒಳಿತು, ಕವಿಗಳು ಹೃದಯಕ್ಕೆ ಹತ್ತಿರವಾದ ಮನಸ್ಸು ಕಟ್ಟುವ ಕಾವ್ಯ ರಚಿಸಲು ಸಲಹೆ ನೀಡಿದರು.

ಕಾವ್ಯಕ್ಕೆ ಯಶಸ್ವಿ ಆದಾಗ ಶಕ್ತಿ ತುಂಬುತ್ತದೆ. ಕೇವಲ ಪ್ರೀತಿ,ಪ್ರೇಮದ ಕುರಿತು ಮಾತ್ರ ಬರೆಯದೇ ಸಮಾಜ ಮುಖಿಯಾದ ಹಾಗು ಸಮಾಜದಲ್ಲಿ ನಡೆಯುವ ಭ್ರಷ್ಟಾಚಾರ, ಅನೀತಿ ಮುಂತಾದನ್ಯೂನ್ಯ ತೆಗಳ ಕುರಿತು ಕೂಡ ಕವಿಗಳು ಕಾವ್ಯದಲ್ಲಿ ಎತ್ತಿ ಹೇಳಬೇಕು ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ.ಹನುಮಂತರಾವ ಬಿ.ದೊಡ್ಡಮನಿ ಕವಿಗೋಷ್ಠಿಯನ್ನು ಉದ್ಘಾಟಿಸಿ ಕರೆ ನೀಡಿದರು.

ಕವಿಗಳು ಸಹೃದಯರ ಅಂತರಂಗದ ಭಾವನೆಗಳನ್ನು ಅಭಿವ್ಯಕ್ತಿಸುವ ದಿಟ್ಟ ನಿಲುವು ಹೊಂದಬೇಕು. ಮುಖ ನೋಡಿ ವಿಮರ್ಶೆ ಮಾಡಬಾರದು. ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಪಿಎಚ್.ಡಿಗಳು ದುಸ್ಥಿಗೆ ಬಂದಿವೆ ಎಂದು ಕಳವಳ ವ್ಯಕ್ತಪಡಿಸಿದರು. ಸಾಹಿತ್ಯ ಅಕಾಡೆಮಿ ಸದಸ್ಯ ಡಾ.ಸಿದ್ಧರಾಮ ಹೊನ್ಕಲ್ ಮಾತನಾಡಿ ಜನರ ನೋವಿಗೆ ಮಿಡಿಯುವ ಪ್ರಾಣ ಮಿತ್ರದಂತೆ ಕವಿಗಳು ಕೆಲಸ ಮಾಡಬೇಕೆಂದರು.ಅಕಾಡೆಮಿಯ ಉದ್ದೇಶ ಹಾಗು ಧ್ಯೇಯ ಕುರಿತಾಗಿ ವಿವರಿಸಿದರು. ವಿವಿಧ ಕ್ಷೇತ್ರದ ಸಾಧಕರಾದ ಡಾ.ಬಸವರಾಜ ಕೊನೇಕ್, ಡಾ.ಜಯದೇವಿ ಗಾಯಕವಾಡ,ಈಶ್ವರಪ್ಪ ಕಟ್ಟಿಮನಿ, ಡಾ.ಹನುಮಂತ ರಾವ್ ದೊಡ್ಡಮನಿ,ಡಾ. ಚಂದ್ರಕಲಾ ಬಿದರಿ, ಡಾ.ಸಿದ್ಧರಾಮ ಹೊನ್ಕಲ್, ಅವರನ್ನು ರಾಮಪ್ಪ ಗೋನಾಲ ಪ್ರತಿಷ್ಠಾನದಿಂದ ವಿಶೇಷವಾಗಿ ಸನ್ಮಾನಿಸಲಾಯಿತು. ಕಾವ್ಯಗಳು ಸಮಕಾಲೀನ ಸಮಸ್ಯೆಗಳಿಗೆ ಮುಖಾಮುಖಿ ಯಾಗಬೇಕು. ಕವಿಯಾದವನು ತನ್ನ ಸುತ್ತಲಿನ ಜನರೊಂದಿಗೆ ಬೆರೆತ ಜೀವನಕ್ರಮಗಳನ್ನು



ತನ್ನ ಕಾವ್ಯದಲ್ಲಿ ಅಡಕಗೊಳಿಸುತ್ತಾನೆ. ಕವಿ ಇಲ್ಲವಾದರೂ ಅವನ ಕಾವ್ಯವು ತಲೆತಲಾಂತರ ಉಳಿದುಕೊಳ್ಳುತ್ತದೆ. ಪಂಪ ಇಂದಿಗೂ ನೆನಪಿಗೆ ಉಳಿದಿರುವುದು ಅವನ ಕಾವ್ಯದ ಮೂಲಕನೆ. ಅಂದು ಕಾವ್ಯವು ಕೆಲವೇ ಕೆಲವು ಜನರು ರಚಿಸಿ ಕೆಲವೇ ಜನರ ಮಧ್ಯ ವಾಚಿಸಲಾಗುತ್ತಿತ್ತು ಆದರ ಇಂದು ಜನಸಾಮಾನ್ಯರು ಕಾವ್ಯ ರಚಿಸುತ್ತಿದ್ದಾರೆ. ಏನು ಓದು ಬರಹ ಬಾರದ ಜನರು ಸಹ ಕಾವ್ಯ ವಾಚನ ಕೇಳಬಹುದಾಗಿದೆ. ಆದರೆ ಜನರು ಕಾವ್ಯ ಕೇಳಲು ಬಾರದಿರುವುದು ಬೇಸರದ ಸಂಗತಿಯಾಗಿದೆ. ಇಂದು ಸುಮಾರು 30ಕ್ಕಿಂತಲೂ ಹೆಚ್ಚು ಕವಿಗಳು ಸಮಾನತೆ, ಸೌಹಾರ್ದತೆ, ಭಾವೈಕ್ಯತೆ, ಮಹಿಳಾ ಪರವಾದ ಚಿಂತನೆಗಳ ಕುರಿತು ಕಾವ್ಯ ವಾಚಿಸಿರುವುದು ಸಂತೋಷದ ವಿಷಯವಾಗಿದೆ ಎಂದು ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಲಿಂಗಪ್ಪ ಗೋನಾಲ ಅಧ್ಯಕ್ಷೀಯ ನುಡಿ ಆಡಿದರು.

ಕವಿಗೋಷ್ಠಿಯಲ್ಲಿ ಡಾ.ಶೀಲಾದೇವಿ ಬಿರಾದಾರ,ಡಾ.ದೇವೇಂದ್ರಪ್ಪ ಕಟ್ಟಿಮನಿ,ಉಷಾ ಗಬ್ಬೂರು,ಸಿದ್ಧರಾಮ ಸರಸಂಬಿ,ರೇಣುಕಾಬೆಸ್. ಎಚ್. ಡಾ.ಸುನೀತಾ ಮಾಳಗೆ,ಡಾ.ನಾಗಪಗಪ ಗೋಗಿ,ಪ್ರಿಯಾಂಕ ಮಾವಿನ,ಭೀಮರಾವ್ ಹೇಮನೂರು, ರಮೇಶ ಯಾಳಗಿ,ಮಮತಾ ಜಾನೆ,ಡಾ.ಅವಿನಾಶ ದೇವನೂರು, ರೇಣುಕಾ ಹೆಳವರ,ಡಾ.ರಾಜಶೇಖರ ಮಾಂಗ್,ಡಾ.ಸುಖದೇವಿ ಘಂಟಿ, ಡಾ.ಕಪಿಲ್ ಚಕ್ರವರ್ತಿ, ಸುಹಾಸಿನಿ.ಜಿ., ಸಾಕ್ಷಿ ಜಿ.,ವಿಕಾಸ್ ಹಿರೇಮಠ, ಅನಸೂಯಾ ಬಾಯಿ ನಾಗನಳ್ಳಿ,ಸಿ.ಎಸ್.ಮಾಲಿಪಾಟೀಲ ಸಂತೋಷ ಕುಮಾರ ಕರಹರಿ,ಬಸಮ್ಮ ಸಜ್ಜನ,ಸುರೇಶ ಹೇರೂರು,ವೆಂಕಟೇಶ ಕೆ. ಜನಾದ್ರಿ, ಹಿರಗಪ್ಪ ಬರಗಾಲಿ, ದೇವರಾಜ ಭಂಡಾರಿ ಇತರರು ಕವನ ವಾಚಿಸಿ ರಂಜಿಸಿದರು.

ಪ್ರಾರ್ಥನೆಯನ್ನು ಸಿಯುಕೆ ಸಂಗೀತ ವಿಭಾಗದ ಡಾ.ಸ್ವಪ್ನಿಲ್ ಚಂದ್ರಕಾಂತ ಚಾಫೇಕರ್ ನಡೆಸಿದರು. ಸ್ವಾಗತ –ಪ್ರಾಸ್ತಾವಿಕ ನುಡಿಯನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಚಂದ್ರಕಲಾ ಬಿದರಿ ಆಡಿದರು. ಚಕೋರ ವೇದಿಕೆ ಸಂಚಾಲಕ ಡಾ.ಗವಿಸಿದ್ಧಪ್ಪ ಪಾಟೀಲ ಮತ್ತು ಡಾ.ರಾಜಕುಮಾರ ಮಾಳಗೆ ನಿರೂಪಿಸಿದರು. ಡಿ.ಪಿ ಸಜ್ಜನ ವಂದಿಸಿದರು.

## ರಾಯಚೂರು ಕೇಂದ್ರ ಗ್ರಂಥಾಲಯಕ್ಕೆ ಜಿಲ್ಲಾಧಿಕಾರಿ ದಿಢೀರ್ ಭೇಟಿ, ಪರಿಶೀಲನೆ

**ರಾಯಚೂರು, ಏ.1–** ನಗರದ ಹೃದಯ ಭಾಗದಲ್ಲಿರುವ ನಗರ ಕೇಂದ್ರ ಗ್ರಂಥಾಲಯಕ್ಕೆ ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವಿದ್ಯಾರ್ಥಿಗಳಿಗೆ ಸಾಹಿತ್ಯಿಕ ಪುಸ್ತಕಗಳ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆ ತಯಾರಿಗೆ ಅನುಕೂಲವಾಗುವಂತಹ ಪುಸ್ತಕಗಳನ್ನು ಗ್ರಂಥಾಲಯ ದಲ್ಲಿಡಬೇಕು. ಗ್ರಂಥಾಲಯಕ್ಕೆ ಬರುವ ವಿದ್ಯಾರ್ಥಿಗಳಿಗೆ ಕುಡಿಯುವ ನೀರು ಸೇರಿದಂತೆ ಇತರೆ ಅಗತ್ಯ ಸೌಕರ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕು ಎಂದು ಗ್ರಂಥಾಲಯದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ರಾಯಚೂರು ನಗರದ ಕೇಂದ್ರ ಗ್ರಂಥಾಲಯಕ್ಕೆ ಜಿಲ್ಲಾಧಿಕಾರಿ ನಿತೀಶ ಕೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸದ್ಯ ಗ್ರಂಥಾಲಯದ ಒಳಗಡೆ ಮತ್ತು ಹೊರಗಡೆ ಅತ್ಯುತ್ತಮ ವಾತಾವರಣವಿದೆ. ಇದು ಹೀಗೆ–ಯೇ ಮುಂದುವರೆಯಬೇಕು. ವಿದ್ಯಾರ್ಥಿಗಳಿಗೆ ತಕ್ಷಣ ಪುಸ್ತಕಗಳು ಲಭ್ಯವಾಗುವಂತೆ ವಿಷಯವಾರು ಪುಸ್ತಕಗಳನ್ನು ಅಚ್ಚುಕಟ್ಟಾಗಿ ಜೋಡಿಸಬೇಕು. ಹೆಚ್ಚಿನ ಪ್ರಮಾಣದಲ್ಲಿ ಗಾಳಿ ಬೆಳಕು ಇರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು, ಗ್ರಂಥಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಗ್ರಂಥಾಲಯಕ್ಕೆ ಪ್ರತಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಓದಲು ಬರುತ್ತಾರೆ. ಹೀಗಾಗಿ ಗ್ರಂಥಾಲಯದ ಮೇಲಗಡೆ ಇನ್ನಷ್ಟು ಹೊಸದಾದ ಸಿಂಟ್ಯಾಕ್ಸ ಕೂಡಿಸಿ ಶುದ್ಧ ಕುಡಿಯುವ ನೀರು ಪೂರೈಸಬೇಕು. ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕವಾದ ಶೌಚಾಲಯಗಳ ನಿರ್ಮಾಣದ ವ್ಯವಸ್ಥೆ ಕಲ್ಪಿಸಬೇಕೆಂದು ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಗುರಿ ಕಡೆ ಗಮನಹರಿಸಬೇಕು: ಕಠಿಣ ಪ್ರರಿಶ್ರಮ ಹಾಗೂ ಏಕಾಗ್ರತೆಯಿಂದ ವಿದ್ಯಾರ್ಥಿಗಳು ತಮ್ಮ ಬದುಕಿನ ಗುರಿಯನ್ನು ಮುಟ್ಟಲು ಸಾಧ್ಯ. ವಿದ್ಯಾರ್ಥಿಗಳು ಶ್ರದ್ಧೆಯಿಂದ ತಮ್ಮ ಹೆಚ್ಚಿನ ಅವಧಿಯಲ್ಲಿ ಗುರಿ ಸಾಧನೆಯ ಕಡೆ ಗಮನಹರಿಸಬೇಕು. ಛಲದಿಂದ ಗುರಿಯೆಡೆ ಮುನ್ನಡೆದರೆ ಅಸಾಧ್ಯವಾದುದು ಯಾವುದು ಇಲ್ಲ. ಕೇವಲ ನಾಲ್ಕು ಗೋಡೆಗಳ ಮಧ್ಯೆ ಕುಳಿತು ಓದುವುದಲ್ಲ. ಓದಿದ್ದನ್ನು ನಾಲ್ಕು ದಿಕ್ಕಿನಲ್ಲಿ ಅಭ್ಯಾಸ ನಡೆಸಬೇಕು. ಜೀವನದ ಮೌಲ್ಯಗಳನ್ನು ಬೆಳೆಸಿಕೊಂಡರೆ ಪರೀಕ್ಷೆಯಲ್ಲಿ ತೇರ್ಗಡೆಯಾಗಬಹುದು. ಯಾವ ವಿಷಯಗಳಲ್ಲಿ ಹೆಚ್ಚು ಬಲವಾಗಿದ್ದೀರಿ, ದುರ್ಬಲರಾಗಿದ್ದೀರಿ ಎಂಬ ಅಂಶಗಳನ್ನು ಪಟ್ಟಿ ಮಾಡಿಕೊಂಡು ಅಧ್ಯಯನ ನಡೆಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

## ಸಾಹಿತಿಗಳು, ಕವಿಗಳು ಸಾಂಸ್ಕೃತಿಕ ರಾಯಭಾರಿಗಳಾಗಲಿ: ಜನವಾಡಕರ್



**ಬೀದರ್, ಮಾ.31–** ಇತ್ತೀಚಿನ ದಿನಗಳಲ್ಲಿ ನಮ್ಮ ಪೂರ್ವಜರ ಸಂಸ್ಕೃತಿ ನಶಿಸಿ ಹೋಗುತ್ತಿರುವುದು ದುರದೃಷ್ಟಕರ. ಇಂದಿನ ತರಣರು ನಮ್ಮ ಮೂಲ ಸಂಸ್ಕೃತಿಯನ್ನೇ ಮರೆಯುತ್ತಿದ್ದಾರೆ. ಸಾಹಿತಿಗಳು, ಕವಿಗಳು ನಮ್ಮ ಪರಂಪರೆಯನ್ನು ಉಳಿಸಿ ಬೆಳೆಸಬೇಕು. ಮುಂದಿನ ಜನಾಂಗಕ್ಕೆ ಈ ಪರಂಪರೆ ಮುಂದುವರೆಯಬೇಕು. ಕವಿಗಳು ತಮ್ಮ ಕವಿತೆಗಳಲ್ಲಿ ನಾಡಿನ ಸಂಸ್ಕೃತಿಯನ್ನು ಬಿಂಬಿಸಬೇಕು. ನಮ್ಮ ಕವಿಗಳು ಸಾಂಸ್ಕೃತಿಕ ರಾಯಭಾರಿಗಳಾಗಬೇಕೆಂದು ಹಿರಿಯ ಸಾಹಿತಿ ಜನವಾಡಕರ್ ಅವರು ಹೇಳಿದರು.

ಕಿತ್ತೂರ್ ರಾಣಿ ಚನ್ನಮ್ಮ ರಾಣಿ ವೃತದ ಹತ್ತಿರವಿರುವ ಮಹಾಲಕ್ಷ್ಮೀ ಸಭಾಂ ಗಣದಲ್ಲಿ ದೇಶಪಾಂಡೆ ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಎಂ.ಜಿ. ದೇಶಪಾಂಡೆ ಮತ್ತು ಕುಮಾರಿ ಪ್ರಿಯದರ್ಶಿನಿ ಅವರ ಜನ್ಮದಿನಾಚರಣೆ ಹಾಗೂ ಮಹಿಳಾ ದಿನಾಚರಣೆಯ ಅಂಗವಾಗಿ ಏರ್ಪಡಿಸಿದ ಯುಗಾದಿ ಕವಿಗೋಷ್ಠಿ, ಪ್ರಶಸ್ತಿ ಪ್ರದಾನ ಹಾಗೂ ಹಾಸ್ಯ, ಸಂಗೀತ ಕಾರ್ಯ ಕ್ರಮದ ವೇದಿಕೆಯಲ್ಲಿ ಮಾತನಾಡಿದ ಅವರು, ಕವಿತೆಗಳಲ್ಲಿ ಸಂದೇಶ ಇರಬೇಕೆಂದರು ಡಾ. ಜಗದೇವಿ ತಿಬಶೆಟ್ಟಿ ಅವರು ಆಶಯ ನುಡಿಗಳನ್ನಾಡಿ, ಕವಿ ಕವಯಿ ತ್ರಿಯರು ಹೆಚ್ಚಿನ ಜ್ಞಾನವನ್ನು ಬೆಳೆಸಿಕೊಳ್ಳಬೇಕು. ದ.ರಾ. ಬೇಂದ್ರೆ, ಕುವೆಂಪು ರವರ ಕವಿತೆಗಳು ಓದುವ ಮೂಲಕ ಅತ್ಯುತ್ತಮ ಕವಿತೆಗಳನ್ನು ಬರೆಯಬೇಕು. ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ ಪುಣ್ಯವತಿ ವಿಸಾಜಿಯವರು ಮಾತನಾಡಿ, ಆಳವಾದ ಅಧ್ಯಯನ ಹಾಗೂ ಅನುಭವಗಳಿಂದ ಸೊಗಸಾದ ಕಾವ್ಯಗಳು ರಚನೆ ಮಾಡಬೇಕು. ಜವಾಬ್ದಾರಿಯುತವಾಗಿ ಕಾವ್ಯಗಳು ರಚಿಸಬೇಕು ಎಂದರು.

### ಅಕಾಡೆಮಿ ಚಕೋರದಿಂದ ಭಾವೈಕ್ಯತೆ ಕವಿಗೋಷ್ಠಿ

## ಕಾವ್ಯ ಸಮಾಜದ ನ್ಯೂನತೆ ಎತ್ತಿ ಹಿಡಿಯಲಿ: ಡಾ.ದೊಡ್ಡಮನಿ



**ಕಲಬುರಗಿ, ಏ.1–** ಕಾವ್ಯಕ್ಕೆ ಯಶಸ್ವಿ ಆದಾಗ ಶಕ್ತಿ ತುಂಬುತ್ತದೆ. ಪ್ರೀತಿ, ಪ್ರೇಮದ ಕುರಿತು ಬೇಕದಷ್ಟು ಬಂದಿವೆ. ಆದ್ದರಿಂದ ಸಮಾಜ ಮುಖಿಯಾದ ಸಮಾಜದಲ್ಲಿ ನಡೆಯುವ ಭ್ರಷ್ಟಾಚಾರ, ಅನೀತಿಗಳ ನ್ಯೂನ್ಯತೆಗಳ ಕುರಿತು ಕವಿಗಳು ಕಾವ್ಯದಲ್ಲಿ ಎತ್ತಿ ಹೇಳಬೇಕು ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ.ಹನುಮಂತರಾವ ಬಿ.ದೊಡ್ಡಮನಿ ಕರೆ ನೀಡಿದರು.

ಕೃಷ್ಣಾ ನಗರದ ವೇಣುವನದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಚಕೋರ ಸಾಹಿತ್ಯ ವೇದಿಕೆ ಮತ್ತು ರಾಮಪ್ಪ ಗೋನಾಲ ಸಾಹಿತ್ಯ, ಸಾಂಸ್ಕೃತಿಕ ಪ್ರತಿಷ್ಠಾನ ಸಹಯೋಗ ದೊಂದಿಗೆ ಏರ್ಪಡಿಸಿದ ಯುಗಾದಿ–ರಂಜಾನ್ ಹಬ್ಬದ ಪ್ರಯುಕ್ತ ಏರ್ಪಡಿಸಿದ ಭಾವೈಕ್ಯತೆ ಕವಿಗೋಷ್ಠಿಯನ್ನು ಉದ್ಘಾಡಿಸಿ ಮಾತನಾಡಿದ ಅವರು, ಕವಿಗಳ ಅಂತರಂಗದ ಭಾವನೆಗಳನ್ನು ಅಭಿವ್ಯಕ್ತಿಸುವ ದಿಟ್ಟ ನಿಲುವು ಹೊಂದಬೇಕು. ವಿಮರ್ಶೆ ಮುಖ ನೋಡಿ ಮಾಡಬಾರದು. ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಪಿಎಚ್.ಡಿಗಳು ದುಃಸ್ಥಿಗೆ ಬಂದಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಸಾಹಿತಿ ಡಾ ಸದಾನಂದ ಪೆರ್ಲ ಮಾತನಾಡಿ, ಸಾಹಿತಿಗಳ ಬರಹ ಹಾದಿ ತಪ್ಪಿವೆ. ಒಂದು ಸಮುದಾಯ ಓಲೈಕೆಗಾಗಿ ಜಾತಿ, ಮತ, ಧರ್ಮಗಳ ಹೆಸರಲ್ಲಿ ಅಧಃಪತನ ನಡೆಯುತ್ತಿದೆ. ಇದು ತಪ್ಪು ಭಾವೈಕ್ಯತೆ, ಸಮನ್ವಯತೆ ಹೊಂದುವ ನಮ್ಮ ಪರಂಪರೆ ಅರಿಯಲು ವಿಶಾಲ ದೃಷ್ಟಿ ಹೊಂದುವುದಿಲ್ಲವೇಕೆ ಎಂದು ಸಾಹಿತಿಗಳನ್ನು ಪ್ರಶ್ನಿಸಿದರು.

ಸಾಹಿತ್ಯ ಅಕಾಡೆಮಿ ಸದಸ್ಯ ಡಾ.ಸಿದ್ಧರಾಮ ಹೊನ್ಕಲ್ ಮಾತನಾಡಿ. ಜನರ ನೋವಿಗೆ ಮಿಡಿಯುವ ಪ್ರಾಣಮಿತ್ರ ಎಂಬಂತೆ ಕವಿಗಳು ಕೆಲಸ ಮಾಡಬೇಕೆಂದರು. ವಿವಿಧ ಕ್ಷೇತ್ರದ ಸಾಧಕರಾದ ಡಾ.ಬಸವರಾಜ ಕೊನೇಕ್, ಡಾ.ಜಯದೇವಿ ಗಾಯಕವಾಡ, ಈಶ್ವರಪ್ಪ ಕಟ್ಟಿಮನಿ, ಡಾ.ಚಂದ್ರಕಲಾ ಬಿದರಿ, ಡಾ. ಸಿದ್ಧರಾಮ ಹೊನ್ಕಲ್, ಅವರನ್ನು ರಾಮಪ್ಪ ಗೋನಾಲ ಪ್ರತಿಷ್ಠಾನದಿಂದ ಸನ್ಮಾನಿಸಲಾಯಿತು.

ಕಾವ್ಯಗಳು ಸಮಕಾಲೀನ ಸಮಸ್ಯೆಗಳಿಗೆ ಮುಖಾಮುಖಿ ಯಾಗಬೇಕು. ಕವಿಯಾದವನು ತನ್ನ ಸುತ್ತಲಿನ ಜನರೊಂದಿಗೆ ಬೆರೆತ ಜೀವನಕ್ರಮಗಳನ್ನು ತನ್ನ ಕಾವ್ಯದಲ್ಲಿ ಅಡಕಗೊಳಿಸುತ್ತಾನೆ. ಕವಿ ಇಲ್ಲವಾದರೂ ಅವನ ಕಾವ್ಯವು ತಲೆತಲಾಂತರ ಉಳಿದುಕೊಳ್ಳುತ್ತದೆ. ಪಂಪ ಇಂದಿಗೂ ನೆನಪಿಗೆ ಉಳಿದಿರುವುದು ಅವನ ಕಾವ್ಯದ ಮೂಲಕನೆ. ಅಂದು ಕಾವ್ಯವು ಕೆಲವೇ ಕೆಲವು ಜನರು ರಚಿಸಿ ಕೆಲವೇ ಜನರ ಮಧ್ಯ ವಾಚಿಸಲಾಗುತ್ತಿತ್ತು. ಆದರೆ ಇಂದು ಜನಸಾಮಾನ್ಯರು ಕಾವ್ಯ ರಚಿಸುತ್ತಿದ್ದಾರೆ. ಏನು ಓದು ಬರಹ ಬಾರದ ಜನರು ಸಹ ಕಾವ್ಯ ವಾಚನ ಕೇಳಬಹುದಾಗಿದೆ. ಆದರೆ ಜನರು ಕಾವ್ಯ ಕೇಳಲು ಬಾರದಿರುವುದು ಬೇಸರದ ಸಂಗತಿಯಾಗಿದೆ. ಇಂದು ಸುಮಾರು 30 ಕ್ಕಿಂತಲೂ ಹೆಚ್ಚು ಕವಿಗಳು ಸಮಾನತೆ, ಸೌಹಾರ್ದತೆ, ಭಾವೈಕ್ಯ, ಮಹಿಳಾ ಪರವಾದ ಚಿಂತನೆಗಳ ಕುರಿತು ಕಾವ್ಯ ವಾಚಿಸಿರುವುದು ಸಂತೋಷದ ವಿಷಯವಾಗಿದೆ ಎಂದು ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಲಿಂಗಪ್ಪ ಗೋನಾಲ ಅಧ್ಯಕ್ಷೀಯ ನುಡಿ ಆಡಿದರು.

## ಬ್ಯಾಂಕ್ ಮ್ಯಾನೇಜರ್‌ನಿಂದಲೇ ಕೋಟಿ ಕೋಟಿ ಹಣ ವಂಚನೆ

**ರಾಯಚೂರು, ಏ.1–** ಜನ ಬ್ಯಾಂಕ್‌ಗಳನ್ನು ನಂಬಿಕೊಂಡು ಹಣ ಇಡುತ್ತಾರೆ. ಆದರೆ ಇಲ್ಲೊಂದು ಬ್ಯಾಂಕ್‌ನಲ್ಲಿ ಮ್ಯಾನೇಜರ್, ಗ್ರಾಹಕರ ಹಣವನ್ನು ನುಂಗಿ ನೀರು ಕುಡಿದಿದ್ದಾನೆ. ಬೇಲಿಯೇ ಎದ್ದು ಹೊಲವನ್ನು ಮೇಯ್ದ ಘಟನೆ ರಾಯಚೂರಿನಲ್ಲಿ ನಡೆದಿದೆ. ಹೌದು ರಾಯಚೂರು ಬ್ಯಾಂಕ್ ಆಫ್ ಮಹಾರಾಷ್ಟ್ರದಲ್ಲಿ ಭಾರೀ ಗೋಲ್‌ಮಾಲ್ ನಡೆದಿರುವ ಆರೋಪ ಕೇಳಿ ಬಂದಿದೆ.

ಬ್ಯಾಂಕ್ ಮ್ಯಾನೇಜರ್‌ನಿಂದಲೇ ಕೋಟಿ ಕೋಟಿ ಹಣವನ್ನು ವಂಚನೆ ಮಾಡಲಾಗಿದೆ. ಗೋಲ್ಡ್ ಲೋನ್ ಹೆಸರಲ್ಲಿ ಸುಮಾರು 10.97 ಕೋಟಿ ವಂಚನೆ ಮಾಡಲಾಗಿದೆ. ಅಲ್ಲದೆ ಕಾರ್ ಲೋನ್ ಹೆಸರಲ್ಲೂ ಮ್ಯಾನೇಜರ್ ಹಣ ವಂಚನೆ ಮಾಡಿದ್ದಾನೆ. ಮ್ಯಾನೇಜರ್ ಕೆ. ನರೇಂದ್ರ ರೆಡ್ಡಿ ಎಂಬಾತ ಅಸಲಿ ಚಿನ್ನ ಅಡವಿಟ್ಟು ಸಾಲ ಪಡೆದ ಗ್ರಾಹಕರಿಗೆ ನಕಲಿ ಚಿನ್ನ ಇಟ್ಟು ಮೋಸ ಮಾಡಿದ್ದಾನೆ. ಇದೀಗ ಗ್ರಾಹಕರು ಸೈಬರ್ ಪೊಲೀಸ್ ಠಾಣೆಗೆ ದೂರು ಕೊಟ್ಟು ನ್ಯಾಯ ನೀಡುವಂತೆ ಮನವಿ ಮಾಡಿದ್ದಾರೆ. ಬ್ಯಾಂಕ್‌ನಲ್ಲೂ ಸುರಕ್ಷತೆ ಇಲ್ಲ ಅಂತಾದರೆ ಜನ ಇನ್ನೆಲ್ಲಿ ಒಡವೆ ಬಂಗಾರ ದಾಖಲೆ ಇಡೋದು ಅಂತ ಚಿಂತೆಗೀಡಾಗಿದ್ದಾರೆ.

ಈ ಬಗ್ಗೆ ಮಾತನಾಡಿದ ಗ್ರಾಹಕರೊಬ್ಬರು, 'ನಮ್ಮದು ಈ ಬ್ಯಾಂಕ್ ಅಲ್ಲಿ ಅಕೌಂಟ್ ಇದ್ದು ಸುಮಾರು ಏಳು ಎಂಟು ವರ್ಷ ಆಗಿದೆ. ನಾವು ಲೋನ್ ಕಟ್ಟುತ್ತಾ ಬಂದಿದ್ದೇವೆ. ಕಾರು ಲೋನ್ ತೆಗೆದುಕೊಂಡು ಒಂದು ವರ್ಷ ಆಗಿದೆ. ಇತ್ತೀಚೆಗೆ ಪ್ರತೀ ತಿಂಗಳು ಹೆಚ್ಚುವರಿ ಹಣ ಕಡಿತಗೊಳಿಸಲಾಗಿದೆ. ಬ್ಯಾಂಕ್‌ಗೆ ಬಂದು ವಿಚಾರಿಸಿದಾಗ ಬ್ಯಾಂಕ್ ಸಿಬ್ಬಂದಿ ನೀವು ಸೈಬರ್ ಕ್ರೈಂಗೆ ಹೋಗಿ ದೂರು ನೀಡಿ ಎನ್ನುತ್ತಿದ್ದಾರೆ. ನಮ್ಮ ಕಡೆಯಿಂದ ಸಹಾಯ ಕೂಡ ಮಾಡುತ್ತೇವೆ ಎಂದು ಹೇಳಿದ್ದಾರೆ. ನಮಗೆ ಬ್ಯಾಂಕ್ ನವರೇ ಮೋಸ ಮಾಡಿದ್ದಾರೆ' ಎಂದು ಅವರು ಸುದ್ದಿಗಾರರ ಮುಂದೆ ಬೇಸರ ಹಂಚಿಕೊಂಡಿದ್ದಾರೆ.

ಮತ್ತೊಬ್ಬರು ಗ್ರಾಹಕರು ಹೇಳುವಂತೆ 'ನಮಗೆ ಬ್ಯಾಂಕ್ ಬ್ಯಾನೇಜರ್ ದಿಢೀರ್ ಆಗಿ ಹತ್ತು ಕೋಟಿ ವಂಚನೆ ಮಾಡಿದ್ದಾರೆ. ತಕ್ಷಣ ನಾವು ಬ್ಯಾಂಕ್‌ಗೆ ಬಂದು ವಿಚಾರಿಸಿದಾಗ ನಮಗೆ ಗೊತ್ತಾಗಿದೆ. ನಾವು ಚಿನ್ನವನ್ನು ಬ್ಯಾಂಕ್‌ನಲ್ಲಿ ಇಟ್ಟು ಅದರ ಮೇಲೆ ಸಾಲ ಪಡೆದುಕೊಂಡಿದ್ದೇವೆ. ಈಗ ಆ ಗೋಲ್ಡ್ ನಕಲಿ ಎಂದು ಹೇಳುತ್ತಿದ್ದಾರೆ. ನಮ್ಮ ಅಸಲಿ ಚಿನ್ನ ತೆಗೆದುಕೊಂಡು ಅದರ ಮೇಲೆ ಸಾಲಾ ಮಾಡಿ, ನಮ್ಮ ಅಸಲಿ ಚಿನ್ನಕ್ಕೆ ನಕಲಿ ಎಂದು ಮಾಡಿದ್ದಾರೆ. ಮತ್ತೆ ಹೊಸ ಲೋನ್‌ಗಳನ್ನು ಮಾಡಿಕೊಂಡ ಬ್ಯಾಂಕ್ ಮ್ಯಾನೇಜರ್ ಹತ್ತು ಕೋಟಿ ಹಣವನ್ನು ವಂಚಿಸಿದ್ದಾನೆ' ಎಂದು ಆರೋಪಿಸಿದ್ದಾರೆ.

### ಬೀದರ್‌ನಲ್ಲಿ ಮಹಿಳೆಯ ಬರ್ಬರ ಹತ್ಯೆ

## ಮಾಜಿ ಪ್ರಿಯಕರ ಪೌರ ಕಾರ್ಮಿಕನ ಬಂಧನ

**ಬೀದರ್, ಏ. 1––** ಜಿಲ್ಲೆಯ ಬಸವಕಲ್ಯಾಣದ ಶಾ–ಹುಸೇನ್ ಬಡಾವಣೆಯಲ್ಲಿ ಮಹಿಳೆಯ ಭೀಕರವಾಗಿ ಹತ್ಯೆ ಮಾಡಿರುವ ಘಟನೆ ನಡೆದಿದೆ. ಮಹಿಳೆಯನ್ನು ಕೊಲೆಗೈದು ಪರಾರಿಯಾಗಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಬಸವಕಲ್ಯಾಣ ನಗರಸಭೆಯಲ್ಲಿ ಸ್ವಚ್ಚತಾ ಕಾರ್ಮಿಕರಾಗಿ ರೇಷ್ಮಾ ಹೈದರ್ (34) ಎಂಬವರು ಕೊಲೆಯಾದ ಮಹಿಳೆ.

ಬೆಡ್ ರೂಮ್‌ನಲ್ಲಿ ಮಹಿಳೆಯನ್ನು ಕೊಲೆಗೈದು ಪರಾರಿಯಾಗಿದ್ದ ಆರೋಪಿ ಕೂಡಾ ಪೌರ ಕಾರ್ಮಿಕನೇ ಆಗಿದ್ದು, ಕೊಲೆಗೆ ಕಾರಣ ಏನೆಂಬುದು ನಿಖರವಾಗಿ ತಿಳಿದುಬಂದಿಲ್ಲ. ಈ ಕೊಲೆ ಅನೈತಿಕ ಸಂಬಂಧದ ಹಿನ್ನೆಲೆಯಿಂದ ನಡೆದಿರಬಹುದೆಂದು ಪೊಲೀಸರು ಶಂಕಿಸಿದ್ದಾರೆ. ಮಹಿಳೆಯ ಕುತ್ತಿಗೆ ಹಾಗೂ ಬಾಯಿಗೆ ಗಂಭೀರ ಗಾಯಗಳಾಗಿದ್ದು, ಕ್ರೂರ ಹತ್ಯೆಯಾಗಿದೆ ಎಂದು ಹೇಳಲಾಗಿದೆ.

ಬಸವಕಲ್ಯಾಣ ನಗರ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ಮುಂದುವರಿಸಿದ್ದಾರೆ.

# ಹೊಸ ವ್ಯಾಪಾರ ಒಪ್ಪಂದ: ಮಾತುಕತೆ ನಡೆಸಲು ಭಾರತ–ಚಿಲಿ ಒಪ್ಪಿಗೆ



ನವದೆಹಲಿ, ಏಪ್ರಿಲ್ 1: ಪ್ರಧಾನಿ ನರೇಂದ್ರ ಮೋದಿ ಮತ್ತು ಭೇಟಿ ನೀಡಿರುವ ಚಿಲಿ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ನಡುವಿನ ದ್ವಿಪಕ್ಷೀಯ ಮಾತುಕತೆಗಳ ನಂತರ, ಭಾರತ ಮತ್ತು ಚಿಲಿ ಇಂದು ಪರಸ್ಪರ ಪ್ರಯೋಜನಕಾರಿ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ಒಪ್ಪಿಕೊಂಡಿವೆ. "ಇಂದು ನಾವು ಪರಸ್ಪರ ಪ್ರಯೋಜನಕಾರಿ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ನಿರ್ಧರಿಸಿದ್ದೇವೆ ಮತ್ತು ನಮ್ಮ ತಂಡಗಳು ಈ ಕುರಿತು ಕೆಲಸ ಮಾಡಲು ನಿರ್ದೇಶಿಸಿದ್ದೇವೆ.

"ನಾವು ನಿರ್ಣಾಯಕ ಖನಿಜಗಳ ಕ್ಷೇತ್ರದಲ್ಲಿ ಸಹಕಾರವನ್ನು ಉತ್ತೇಜಿಸಲು ನಿರ್ಧರಿಸಿದ್ದೇವೆ. "ನಾವು ಸ್ಥಿತಿಸ್ಥಾಪಕ ಪೂರೈಕೆ ಮತ್ತು ಮೌಲ್ಯ ಸರಪಳಿಗಳನ್ನು ಸ್ಥಾಪಿಸಲು ಸಹ ಕೆಲಸ ಮಾಡುತ್ತೇವೆ" ಎಂದು ಪ್ರಧಾನಿ ಹೇಳಿದರು.

ಉನ್ನತ ಮಟ್ಟದ ನಿಯೋಗದ ಮುಖ್ಯಸ್ಥರಾಗಿ ಆಗಮಿಸಿದ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್ ಏಪ್ರಿಲ್ 1–5 ರವರೆಗೆ ರಾಜ್ಯ ಭೇಟಿಯಲ್ಲಿದ್ದಾರೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಚಿಲಿಯ ವಿದೇಶಾಂಗ ಸಚಿವ ಆಲ್ಬರ್ಟೊ ವ್ಯಾನ್ ಕ್ಲಾವೆರೆನ್ ಅವರ ಭೇಟಿಯ ಸಮಯದಲ್ಲಿ ಎರಡೂ ಕಡೆಯವರು ತಮ್ಮ ಸಂಬಂಧಗಳನ್ನು ಇನ್ನಷ್ಟು ಬಲಪಡಿಸಿಕೊಂಡರು. ಚಿಲಿಯ ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿಯಾದರು, ಈ ಸಂದರ್ಭದಲ್ಲಿ ಎರಡೂ ಕಡೆಯವರು ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಕುರಿತು ಮಾತುಕತೆಗಳನ್ನು ಪ್ರಾರಂಭಿಸುವ ಬಗ್ಗೆ ಚರ್ಚಿಸಿದರು. ಎರಡೂ ರಾಷ್ಟ್ರಗಳು 2006 ರಲ್ಲಿ ಸಹಿ ಹಾಕಿದ ಆದ್ಯತೆಯ ವ್ಯಾಪಾರ ಒಪ್ಪಂದವನ್ನು (ಪಿಟಿಎ) ಹೊಂದಿವೆ ಮತ್ತು ತಮ್ಮ ವ್ಯಾಪಾರ ಸಂಬಂಧಗಳನ್ನು ವಿಸ್ತರಿಸಲು ಉತ್ಸುಕವಾಗಿವೆ.

# ಆರಾಧನಾ ಸ್ಥಳಗಳ ಕಾಯ್ದೆ–1991ರ ಸಿಂಧುತ್ವ ಪ್ರಶ್ನಿಸಿ ರಿಟ್ ಹೊಸ ಅರ್ಜಿ ವಿಚಾರಣೆಗೆ ನಿರಾಕರಿಸಿದ ಸುಪ್ರೀಂಕೋರ್ಟ್

**ನವದೆಹಲಿ, ಏ.1:** ಆರಾಧನಾ ಸ್ಥಳಗಳ ಕಾಯ್ದೆ–1991ರ ಸಿಂಧುತ್ವವನ್ನು ಪ್ರಶ್ನಿಸಿ ಹೊಸದಾಗಿ ಸಲ್ಲಿಸಲಾಗಿದ್ದ ರಿಟ್ ಅರ್ಜಿಯನ್ನು ಪರಿಗಣಿಸಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಬದಲಿಗೆ, ಈಗಾಗಲೇ ವಿಚಾರಣೆಯಲ್ಲಿರುವ ಸಂಬಂಧಿತ ಅರ್ಜಿಯಲ್ಲಿ ಮಧ್ಯಪ್ರವೇಶಿಸಲು ಅರ್ಜಿದಾರರಿಗೆ ಅವಕಾಶ ನೀಡಲಾಗಿದೆ. ಮುಖ್ಯ ನ್ಯಾ. ಸಂಜೀವ್ ಖನ್ನಾ, ನ್ಯಾ. ಪಿ.ವಿ. ಸಂಜಯ್ ಕುಮಾರ್ ಮತ್ತು ಕೆ.ವಿ. ವಿಶ್ವನಾಥನ್ ಅವರನ್ನು ಒಳಗೊಂಡ ತ್ರಿಸದಸ್ಯ ಪೀಠವು, ಈಗಾಗಲೇ ಆರಾಧನಾ ಸ್ಥಳಗಳ ಕಾಯ್ದೆಗೆ ಸಂಬಂಧಿಸಿದಂತೆ ಹಲವು ಅರ್ಜಿಗಳನ್ನು ಒಟ್ಟಾಗಿ ವಿಚಾರಣೆಗೆ ಕೈಗೆತ್ತಿಕೊಂಡಿದೆ. ಈ ಸಂಬಂಧ 2024 ಡಿಸೆಂಬರ್ 12ರಂದು ದೇಶದ ಎಲ್ಲಾ ನ್ಯಾಯಾಲಯಗಳಿಗೆ, ಈ ಕಾಯ್ದೆಗೆ ಸಂಬಂಧಿಸಿದ ಹೊಸ ಅರ್ಜಿಗಳನ್ನು ಸ್ವೀಕರಿಸದಂತೆ ಮತ್ತು ಯಾವುದೇ ಸಮೀಕ್ಷೆಗಳಿಗೆ ಆದೇಶ ನೀಡದಂತೆ ಸೂಚನೆ ನೀಡಿದೆ.

ಹೊಸದಾಗಿ ಸಲ್ಲಿಸಲಾದ ಅರ್ಜಿಯು ಈಗಾಗಲೇ ವಿಚಾರಣೆಯಲ್ಲಿರುವ ಅರ್ಜಿಗಳಿಗಿಂತ ಭಿನ್ನವಾಗಿಲ್ಲ ಎಂದು ಮುಖ್ಯ ನ್ಯಾ. ಸಂಜೀವ್ ಖನ್ನಾ ಮತ್ತು ನ್ಯಾ. ಸಂಜಯ್ ಕುಮಾರ್ ಅವರ ಪೀಠವು ಅಭಿಪ್ರಾಯಪಟ್ಟಿದೆ. ಈ ಸಂದರ್ಭದಲ್ಲಿ, ಅರ್ಜಿದಾರರ ಪರ ವಕೀಲರು, ಪ್ರಸ್ತುತ ವಿಚಾರಣೆಯಲ್ಲಿರುವ ಅರ್ಜಿಗಳೊಂದಿಗೆ ಈ ಅರ್ಜಿಯನ್ನೂ ಸೇರಿಸಬೇಕೆಂದು ಕೋರುತ್ತೇವೆ. ಈ ಅರ್ಜಿಯಲ್ಲಿ ಕೆಲವು ಸೂಕ್ಷ್ಮ ವಿಷಯಗಳಿವೆ, ಅವುಗಳನ್ನು ನ್ಯಾಯಾಲಯಕ್ಕೆ ಮಂಡಿಸುತ್ತೇವೆ ಎಂದು ವಾದಿಸಿದ್ದಾರೆ. ಆದರೆ, ಸಂವಿಧಾನದ 32ನೇ ವಿಧಿಯ ಅಡಿಯಲ್ಲಿ ಹೊಸ ಅರ್ಜಿಯನ್ನು ಪರಿಗಣಿಸಲು ನ್ಯಾಯಾಲಯವು ನಿರಾಕರಿಸಿದೆ. ಆದರೆ, ಈಗಾಗಲೇ ವಿಚಾರಣೆಯಲ್ಲಿರುವ ಅರ್ಜಿಯಲ್ಲಿ ಮಧ್ಯಪ್ರವೇಶಕ್ಕೆ ಅನುಮತಿ ನೀಡಲಾಗಿದೆ. ಆರಾಧನಾ ಸ್ಥಳಗಳ ಕಾಯ್ದೆಯ ಸಿಂಧುತ್ವವನ್ನು ಪ್ರಶ್ನಿಸಿ ಕೃಷ್ಣ ಕುಮಾರ್ ಉಪಾಧ್ಯಾಯ ಎಂಬುವವರು ಮೂಲ ಅರ್ಜಿಯನ್ನು ಸಲ್ಲಿಸಿದ್ದಾರೆ. ಈ ಅರ್ಜಿಗೆ ಸಂಬಂಧಿಸಿದಂತೆ ಪರ ಮತ್ತು ವಿರೋಧದ ಹಲವು ಮಧ್ಯಂತರ ಅರ್ಜಿಗಳು ಸಲ್ಲಿಕೆಯಾಗಿದ್ದು, ಇವೆಲ್ಲವನ್ನೂ ಸುಪ್ರೀಂ ಕೋರ್ಟ್ ಒಟ್ಟಿಗೆ ವಿಚಾರಣೆ ನಡೆಸುತ್ತಿದೆ.

ಈ ಮಧ್ಯೆ ಅಂತಿಮ ಆದೇಶದವರೆಗೆ, ಜ್ಞಾನವ್ಯಾಪಿ, ಶಾಹಿ ಈದ್ಗಾ, ಸಂಭಾಲ್ ಜಾಮಾ ಮಸ್ಜಿದ್, ಅಜ್ಮೀರ್ ದರ್ಗಾ ಸೇರಿದಂತೆ ಮಸೀದಿ–ಮಂದಿರ ವಿವಾದಕ್ಕೆ ಸಂಬಂಧಿಸಿದ ಯಾವುದೇ ಹೊಸ ಅರ್ಜಿಗಳನ್ನು ಸ್ವೀಕರಿಸದಿರಲು ಮತ್ತು ಈ ಬಗ್ಗೆ ಯಾವುದೇ ಆದೇಶಗಳನ್ನು ಹೊರಡಿಸದಿರಲು ಸುಪ್ರೀಂ ಕೋರ್ಟ್ ಎಲ್ಲಾ ನ್ಯಾಯಾಲಯಗಳಿಗೆ ನಿರ್ದೇಶನ ನೀಡಿದೆ.

# ಔರಂಗಜೇಬ್ ಸಮಾಧಿ ಅಲ್ಲೇ ಇರಲಿ: ಆರ್‌ಎಸ್‌ಎಸ್

**ಮುಂಬೈ, ಏ. 1:** ಮೊಘಲ್ ಸಾಮ್ರಾಟ ಔರಂಗಜೇಬ್ ಸಮಾಧಿಯನ್ನು ತೆಗೆದುಹಾಕಬೇಕೆಂದು ಒತ್ತಾಯಿಸುತ್ತಿರುವ ಬಿಜೆಪಿ ಪರ ಬಲಪಂಥೀಯ ಸಂಘಟನೆಗಳ ವಿವಾದದ ನಡುವೆ, ಆರ್‌ಎಸ್‌ಎಸ್ ನಾಯಕ ಸುರೇಶ್ ಭಯ್ಯಾಜಿ ಜೋಶಿ ಈ ವಿವಾದವನ್ನು ಅನಗತ್ಯವಾಗಿ ಎತ್ತಲಾಗಿದೆ ಎಂದು ಹೇಳಿದ್ದಾರೆ. ಔರಂಗಜೇಬ್ ಇಲ್ಲಿ (ಮಹಾರಾಷ್ಟ್ರದಲ್ಲಿ) ನಿಧನರಾಗಿದ್ದು, ಆದ್ದರಿಂದ ಅವರ ಸಮಾಧಿಯನ್ನು ಇಲ್ಲಿ ನಿರ್ಮಿಸಲಾಗಿದೆ. ನಂಬಿಕೆ ಇರುವವರು (ಅಲ್ಲಿಗೆ) ಹೋಗುತ್ತಾರೆ. ಎಂದು ಅವರು ಹೇಳಿದ್ದಾರೆ.ಔರಂಗಜೇಬ್ ಸಮಾಧಿ

ನಮ್ಮ ಆದರ್ಶ ಛತ್ರಪತಿ ಶಿವಾಜಿ ಆಗಿದ್ದು, ಅವರು ಅಫ್ಜಲ್ ಖಾನ್ ಸಮಾಧಿಯನ್ನು ಸಹ ನಿರ್ಮಿಸಿದ್ದಾರೆ. ಇದು ಭಾರತದ ಉದಾರತೆ ಮತ್ತು ಒಳಗೊಳ್ಳುವಿಕೆಯನ್ನು ಸಂಕೇತಿಸುತ್ತದೆ. ಸಮಾಧಿ ಅಲ್ಲಿಯೆ ಉಳಿಯಲಿ; ಹೋಗಲು ಬಯಸುವವರು ಅಲ್ಲಿಗೆ ಹೋಗುತ್ತಾರೆ ಎಂದು ಜೋಶಿ ಹೇಳಿದ್ದಾರೆ. ಆರ್‌ಎಸ್‌ಎಸ್‌ನ ಅಂಗಸಂಸ್ಥೆಗಳಾದ ವಿಎಚ್‌ಪಿ ಮತ್ತು ಬಜರಂಗ ದಳವು ಸಂಭಾಜಿ ನಗರದ ಖುಲ್ದಾಬಾದ್‌ನಲ್ಲಿರುವ ಔರಂಗಜೇಬ್ ಸಮಾಧಿಯನ್ನು ತೆಗೆದುಹಾಕುವಂತೆ ಒತ್ತಾಯಿಸಿ ನಾಗ್ಪುರದಲ್ಲಿ ಪ್ರತಿಭಟನೆ ನಡೆಸಿತ್ತು. ಪ್ರತಿಭಟನೆಯ ಸಮಯದಲ್ಲಿ ಪವಿತ್ರ ಚಾದರ್ ಅನ್ನು ಸುಟ್ಟು ಪ್ರವಾದಿಯನ್ನು ಅವಮಾನಿಸಲಾಗಿದೆ ಎಂದು ಆರೋಪಿಸಲಾಗಿದ್ದು, ಹಾಗಾಗಿ ಪ್ರತಿಭಟನೆಯು ವಿವಾದಕ್ಕೆ ಕಾರಣವಾಗಿತ್ತು, ಜೊತೆಗೆ ನಾಗ್ಪುರದಲ್ಲಿ ಹಿಂಸಾಚಾರ ಉದ್ಭವವಾಗಿತ್ತು. ಜೋಶಿ ಅವರ ಹೇಳಿಕೆಗೂ ಮೊದಲು, ಮತ್ತೊಬ್ಬ ಆರ್‌ಎಸ್‌ಎಸ್ ನಾಯಕ ಸುನಿಲ್ ಅಂಬೇಕರ್ ಕೂಡಾ 17 ನೇ ಶತಮಾನದ ಮೊಘಲ್ ಚಕ್ರವರ್ತಿ ಔರಂಗಜೇಬ್ ಸಮಾಧಿ ಇಂದು ಪ್ರಸ್ತುತವಲ್ಲ ಎಂದು ಹೇಳಿದ್ದರು. ನಾಗ್ಪುರ ಹಿಂಸಾಚಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, ನಾವು



ಯಾವುದೇ ರೀತಿಯ ಕ್ರಮವನ್ನು ಪ್ರೋತ್ಸಾಹಿಸಬಾರದು. ಪೊಲೀಸರು ಪ್ರಕರಣದ ತನಿಖೆ ನಡೆಸುತ್ತಾರೆ ಎಂದು ಹೇಳಿದ್ದಾರೆ.

ಎಂಎನ್‌ಎಸ್ ಮುಖ್ಯಸ್ಥ ರಾಜ್ ಠಾಕ್ರೆಯವರ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ಜೋಶಿ ಅವರು ಹೇಳಿಕೆ ನೀಡಿದ್ದಾರೆ. ಶಿವಾಜಿ ಪಾರ್ಕ್‌ನಲ್ಲಿ ನಡೆದ ಗುಡಿ ಪಾಡ್ವಾ ರ್‍ಯಾಲಿಯಲ್ಲಿ ಮಾತನಾಡಿದ್ದ ಠಾಕ್ರೆ, ಜನರು ಜಾತಿ ಮತ್ತು ಧರ್ಮ ಆಧಾರಿತ ದ್ವೇಷದ ರಾಜಕೀಯಕ್ಕೆ ಬಲಿಯಾಗಬಾರದು ಮತ್ತು ಇತಿಹಾಸವನ್ನು ಕೋಮು ದೃಷ್ಟಿಕೋನದಿಂದ ನೋಡಬಾರದು ಎಂದು ಮನವಿ ಮಾಡಿದ್ದರು. ಛತ್ರಪತಿ ಶಿವಾಜಿಯ ಸ್ವರಾಜ್ಯದ ಮೇಲೆ ದಾಳಿ ಮಾಡಿದ ಔರಂಗಜೇಬ್ ಮತ್ತು ಅಫ್ಜಲ್ ಖಾನ್‌ರಂತಹ ಜನರ ಸಮಾಧಿಗಳನ್ನು ಮರಾಠಾ ಶೌರ್ಯದ ಸಂಕೇತವಾಗಿ ಪ್ರದರ್ಶಿಸಲು ಅವುಗಳನ್ನು ರಕ್ಷಿಸಬೇಕು ಎಂದು ಅವರು ಹೇಳಿದ್ದರು. ಐತಿಹಾಸಿಕ ಮಾಹಿತಿಗಾಗಿ ಜನರು ವಾಟ್ಸಾಪ್ ಫಾರ್ವರ್ಡ್‌ಗಳನ್ನು ಅವಲಂಬಿಸಬಾರದು ಎಂದು ಅವರು ಕೇಳಿಕೊಂಡಿದ್ದರು. ಶಿವಾಜಿ ಮಹಾರಾಜರು ಊಳಿಗಮಾನ್ಯ ಪದ್ಧತಿಯ ವಿರುದ್ಧ ಹೋರಾಡುತ್ತಿದ್ದರು. ಎಲ್ಲಾ ಸಮುದಾಯಗಳ ಜನರು ವಿಭಿನ್ನ ಸಾಮ್ರಾಜ್ಯಗಳಿಗಾಗಿ ಕೆಲಸ ಮಾಡಿದ್ದರಿಂದ, ಸೇನಾಧಿಪತಿ ಅಥವಾ ಐತಿಹಾಸಿಕ ವ್ಯಕ್ತಿಗಳ ಜಾತಿ ಮತ್ತು ಧರ್ಮವನ್ನು ನೋಡಬೇಡಿ. ಯುವಕರು ವಾಟ್ಸಾಪ್ನಲ್ಲಿ ಇತಿಹಾಸ ಓದುವುದನ್ನು ನಿಲ್ಲಿಸಬೇಕೆಂದು ನಾನು ಒತ್ತಾಯಿಸುತ್ತೇನೆ. ಇದು ಸಮಾಜದ ನಿಜವಾದ ಸಮಸ್ಯೆಗಳಿಂದ ನಿಮ್ಮನ್ನು ಬೇರೆಡೆಗೆ ತಿರುಗಿಸುವ ಯೋಜನೆಯಾಗಿದೆ ಎಂದು ಜೋಶಿ ಹೇಳಿದ್ದಾರೆ. ಔರಂಗಜೇಬ್ ಸಮಾಧಿಯನ್ನು ತೆಗೆದುಹಾಕಲು ವಿಎಚ್ಪಿ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಪವಿತ್ರ ಶ್ಲೋಕಗಳು ಇದ್ದ 'ಚಾದರ್' ಅನ್ನು ಸುಟ್ಟುಹಾಕಲಾಗಿದೆ ಎಂಬ ವದಂತಿಗಳು ಹರಡಲಾಗಿತ್ತು. ಹಾಗಾಗಿ ನಾಗ್ಪುರದಲ್ಲಿ ಹಿಂಸಾಚಾರ ಭುಗಿಲೆದ್ದಿತ್ತು. ಈ ವೇಳೆ ಘಟನೆಯ ಕುರಿತು ಪ್ರತಿಕ್ರಿಯಿಸಿದ್ದ ಆರ್‌ಎಸ್‌ಎಸ್ ವಕ್ತಾರ ಸುನಿಲ್ ಅಂಬೇಕರ್ 17 ನೇ ಶತಮಾನದ ಚಕ್ರವರ್ತಿಯು ಈಗ "ಅಪ್ರಸ್ತುತ" ಎಂದು ಬಣ್ಣಿಸಿದ್ದರು. ಸಮಾಧಿಯನ್ನು ಸ್ಥಳಾಂತರಿಸಬೇಕೇ ಎಂಬ ಪ್ರಶ್ನೆಗೆ ಅವರು 'ಇದು ಪ್ರಸ್ತುತವಲ್ಲ' ಎಂದು ಉತ್ತರಿಸಿದ್ದರು.

ಮೊದಲ ಪುಟದಿಂದ

## ವಾಯುಯಾನ ವಲಯಕ್ಕೆ ಉತ್ತೇಜನ



ಮತ್ತು ಇದು ದೇಶೀಯ ಕಂಪನಿಗಳಿಗೆ ಭಾರಿ ವೆಚ್ಚದ ಪ್ರಯೋಜನವನ್ನು ನೀಡುತ್ತದೆ. ಈ ಶಾಸನವು ಗುತ್ತಿಗೆದಾರರು ಮತ್ತು ಗುತ್ತಿಗೆದಾರರು ಇಬ್ಬರಿಗೂ ಮತ್ತು ಒಟ್ಟಾರೆ ವಾಯುಯಾನ ಮಾರುಕಟ್ಟೆಗೆ ಹೆಚ್ಚಿನ ಭದ್ರತೆಯನ್ನು ಸೃಷ್ಟಿಸುತ್ತದೆ ಏಕೆಂದರೆ ಈ ಕ್ಷೇತ್ರದಲ್ಲಿ ಸಾಕಷ್ಟು ಗೊಂದಲಗಳಿವೆ. ಕೆಲವು ಸಮಯದಿಂದ ಇದು ಒಂದು ಬೂದು ಪ್ರದೇಶವಾಗಿದೆ ಎಂದು ಸಚಿವರು ಹೇಳಿದರು, ಹಲವಾರು ಸಂಸ್ಥೆಗಳು ಸರಿಯಾದ ಶಾಸನವನ್ನು ಕೇಳುತ್ತಿವೆ. ಇದು ಇಂದು ಉದ್ಯಮಕ್ಕೆ ಅಗತ್ಯವಿರುವ ಬಹಳ ಮುಖ್ಯವಾದ ಮಸೂದೆಯಾಗಿದೆ. ಇದು ದೇಶದ ವಾಯುಯಾನ ಭೂದೃಶ್ಯವನ್ನು ಬದಲಾಯಿಸಲಿದೆ ಎಂದು ನಾಯ್ಡು ಸದನದಲ್ಲಿ ಮಾತನಾಡುತ್ತಾ ಹೇಳಿದರು.

# ತ.ನಾಡು ಬಿಜೆಪಿ ಅಧ್ಯಕ್ಷ ಸ್ಥಾನದಿಂದ ಅಣ್ಣಾಮಲೈಗೆ ಕೊಕ್ ಸಾಧ್ಯತೆ

**ನವದೆಹಲಿ, ಏ. 1:** ತಮಿಳುನಾಡಿನಲ್ಲಿ 2023ರಲ್ಲಿ ಎಐಎಡಿಎಂಕೆ ಮತ್ತು ಬಿಜೆಪಿ ನಡುವಿನ ಮೈತ್ರಿ ಮುರಿದು ಬೀಳಲು ಅಣ್ಣಾಮಲೈ ಪ್ರಮುಖ ಕಾರಣ ಎಂದು ಪರಿಗಣಿಸಲಾಗಿದೆ. ಮುಂದಿನ 2026ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಮತ್ತೆ ಎಐಎಡಿಎಂಕೆ ಮತ್ತು ಬಿಜೆಪಿ ಒಂದಾಗಲು ಹೊರಟಿದೆ. ಎರಡೂ ಪಕ್ಷಗಳು ಮೈತ್ರಿ ಮಾಡಿಕೊಂಡರೆ, ಅಣ್ಣಾಮಲೈಗೆ ಬಿಜೆಪಿ ಅಧ್ಯಕ್ಷ ಸ್ಥಾನ ಕೈ ತಪ್ಪುವ ಸಾಧ್ಯತೆ ಇದೆ. ಮುಂದಿನ ಚುನಾವಣೆಗೆ ಎಐಎಡಿಎಂಕೆ ಮತ್ತು ಬಿಜೆಪಿ ಜಾತಿ ಲೆಕ್ಕಾಚಾರ ಹಾಕಿದೆಯಂತೆ. ಅದರಂತೆ, ಎಐಎಡಿಎಂಕೆ ಮತ್ತು ಬಿಜೆಪಿ ಎರಡೂ ಪಕ್ಷಗಳ ಮುಖ ಆಗಿ ಗೌಂಡರ್ ಸಮುದಾಯದವರು ಮುಂದುವರೆಯುವುದು ಬಿಜೆಪಿ ಹೈಕಮಾಂಡ್‌ಗೆ ಇಷ್ಟವಿಲ್ಲ. ಎಐಎಡಿಎಂಕೆ ಮುಖ್ಯಸ್ಥ ಎಡಪ್ಪಾಡಿ ಕೆ. ಪಳನಿಸ್ವಾಮಿ ಅವರಂತೆಯೇ ಬಿಜೆಪಿ ಅಧ್ಯಕ್ಷ ಕೆ. ಅಣ್ಣಾಮಲೈ ಕೂಡ ಪ್ರಬಲ ಹಿಂದುಳಿದ ಸಮುದಾಯಕ್ಕೆ ಸೇರಿದವರು ಮತ್ತು ಪಶ್ಚಿಮ ಕೊಂಗು ಪ್ರದೇಶದವರು (ಇಲ್ಲಿ ಗೌಂಡರ್‌ಗಳು ಪ್ರಬಲರು).

ಮೈತ್ರಿ ಮಾತುಕತೆಯ ಮೊದಲ ಹೆಜ್ಜೆಯಾಗಿ ಎಐಎಡಿಎಂಕೆಯ ಪಳನಿಸ್ವಾಮಿಯವರು ಇತ್ತೀಚೆಗೆ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿದ್ದರು. ಈ ಬೆನ್ನಲ್ಲೇ ಅಣ್ಣಾಮಲೈ ಕೂಡ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದರು. ಈ ವೇಳೆ ಅಣ್ಣಾಮಲೈ ಅವರೇ ಎರಡೂ ಪಕ್ಷಗಳ ನಾಯಕರು ಒಂದೇ ಸಮುದಾಯವರು ಆಗಿರುವುದು ಬೇಡ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಹಾಗಾಗಿ, ಬಿಜೆಪಿ ಹೈಕಮಾಂಡ್ ಅಣ್ಣಾಮಲೈ ಅವರನ್ನು ತಮಿಳುನಾಡು ಬಿಜೆಪಿ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿ, ಆ ಸ್ಥಾನಕ್ಕೆ ಬೇರೆ ಸಮುದಾಯದ ಒಬ್ಬರನ್ನು ನೇಮಿಸುವ ಯೋಚನೆಯಲ್ಲಿದೆ. ಅಣ್ಣಾಮಲೈಗೆ ರಾಷ್ಟ್ರೀಯ ಬಿಜೆಪಿಯಲ್ಲಿ ಹೈಕಮಾಂಡ್ ಸ್ಥಾನ ಕೊಡುವ ಸಾಧ್ಯತೆ ಇದೆ. ಒಂದು ವೇಳೆ ಅಣ್ಣಾಮಲೈ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿದರೆ, ಆ ಸ್ಥಾನಕ್ಕೆ ಬಿಜೆಪಿ ಶಾಸಕ ನೈನಾರ್ ನಾಗೇಂದ್ರನ್ ನೇಮಕಗೊಳ್ಳುವ ಸಾಧ್ಯತೆ ಇದೆ. ಜಯಲಲಿತಾ ಅವರ ನಾಯಕತ್ವ ದಡಿಯಲ್ಲಿ ಎಐಎಡಿಎಂಕೆಯಲ್ಲಿದ್ದ ಪ್ರಭಾವಿ ತೇವರ್ ಸಮುದಾಯಕ್ಕೆ ಸೇರಿದ ತಿರುನಲ್ವೇಲಿಯ ಜನಪ್ರಿಯ ನಾಯಕರಾಗಿದ್ದಾರೆ ಈ ನಾಗೇಂದ್ರನ್. ಈ ಹಿಂದೆ ಜಯಲಲಿತಾ ಅವರ ಆಪ್ತೆ ವಿ. ಕೆ ಶಶಿಕಲಾ ಮೂಲಕ ಎಐಎಡಿಎಂಕೆ ತೇವರ್ ಸಮುದಾಯವನ್ನು ಹಿಡಿತದಲ್ಲಿಟ್ಟು ಕೊಂಡಿತ್ತು.

ಅಣ್ಣಾಮಲೈ ಅವರನ್ನು ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸುವುದು ಅವರಿಗೆ ಕೊಡುವ ಶಿಕ್ಷೆಯಲ್ಲ ಅಥವಾ ಹಿಂಬಡ್ತಿಯೂ ಅಲ್ಲ. ಬಿಜೆಪಿ ಪಶ್ಚಿಮ ತಮಿಳುನಾಡಿನ ಆಚೆಗೂ ತನ್ನ ಹಿಡಿತವನ್ನು ಬಲಪಡಿಸಲು ಬಯಸುತ್ತಿದೆ. ನಾಗೇಂದ್ರನ್ ಅವರಂತಹ ತೇವರ್ ಸಮುದಾಯದ ನಾಯಕನಿಗೆ ಪಕ್ಷದ ಚುಕ್ಕಾಣಿ ಕೊಡುವುದರಿಂದ ದಕ್ಷಿಣ ಜಿಲ್ಲೆಗಳು ಮತ್ತು ಅದರಾಚೆಗೆ ಬಿಜೆಪಿ ತನ್ನ ಪ್ರಭಾವವನ್ನು ವಿಸ್ತರಿಸಲು ಸಹಾಯವಾಗುತ್ತದೆ. ಎಐಎಡಿಎಂಕೆ–ಬಿಜೆಪಿ ಮೈತ್ರಿಕೂಟವು ಡಿಎಂಕೆಯ ಭದ್ರಕೋಟೆಯನ್ನು ಬೇಧಿಸಬೇಕಿದೆ ಎಂದು ಬಿಜೆಪಿ ನಾಯಕರೊಬ್ಬರು ಹೇಳಿದ್ದಾರೆ ಎನ್ನಲಾಗಿದೆ.

ಭಾನುವಾರ ಕೊಯಮತ್ತೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ್ದ ಅಣ್ಣಾಮಲೈ, ಎಐಎಡಿಎಂಕೆ–ಬಿಜೆಪಿ ಮೈತ್ರಿಕೂಟದ ಕುರಿತ ಪ್ರಶ್ನೆಗಳಿಗೆ ಉತ್ತರಿಸಲು ನಿರಾಕರಿಸಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಇತ್ತೀಚೆಗೆ ಒಂದು ಸಮಾರಂಭದಲ್ಲಿ ಈ ಬಗ್ಗೆ ಮಾತನಾಡಿದ್ದಾರೆ. ನೀವು ಅದನ್ನೇ ಪಕ್ಷದ ಅಂತಿಮ ಅಭಿಪ್ರಾಯವಾಗಿ ತೆಗೆದುಕೊಳ್ಳಬಹುದು ಎಂದು ಹೇಳಿದ್ದಾರೆ. ಬಿಜೆಪಿ ಹೈಕಮಾಂಡ್ಗೆ ತಮಿಳುನಾಡಿನ ವಿವರವಾದ ರಾಜಕೀಯ ಅಧ್ಯಯನ ನೀಡುವಲ್ಲಿ ತಮ್ಮ ಪಾತ್ರದ ಬಗ್ಗೆ ಮಾತನಾಡಿದ ಅಣ್ಣಾಮಲೈ ?ಒಬ್ಬ ಕೇಡರ್ ಮತ್ತು ನಾಯಕನಾಗಿ, ನಾನು ಸೂಕ್ಷ್ಮ ವಿಶ್ಲೇಷಣೆಯನ್ನು ಮಾಡಿದ್ದೇನೆ ಮತ್ತು ರಾಜ್ಯ ಘಟಕದ ಪ್ರಸ್ತುತ



ಸ್ಥಿತಿ ಮತ್ತು ಅದು ಹೇಗೆ ಮುಂದುವರಿಯಬೇಕು ಎಂಬುದರ ಕುರಿತು ಪುರಾವೆಗಳೊಂದಿಗೆ ಪಕ್ಷದ ರಾಷ್ಟ್ರೀಯ ನಾಯಕರಿಗೆ ವಿವರಿಸಿದ್ದೇನೆ ಎಂದಿದ್ದಾರೆ.

ತಮಿಳುನಾಡಿನ ಚುನಾವಣಾ ವ್ಯವಸ್ಥೆಯನ್ನು ಐದು ವಲಯಗಳ ಮೂಲಕ ವಿವರಿಸಿದ ಅಣ್ಣಾಮಲೈ, ಬಿಜೆಪಿ ಪಶ್ಚಿಮ ಪ್ರದೇಶದಲ್ಲಿ (54 ಸ್ಥಾನಗಳು) ಮತ್ತು ದಕ್ಷಿಣ ಜಿಲ್ಲೆಗಳಲ್ಲಿ (60 ಸ್ಥಾನಗಳು) ಗಮನಾರ್ಹ ಬೆಳವಣಿಗೆಯನ್ನು ಕಂಡಿದೆ. 150 ಸ್ಥಾನಗಳನ್ನು ಗೆಲ್ಲಲು, ಒಂದು ಪಕ್ಷವು ಮೂರು ವಲಯಗಳನ್ನು ಗೆದ್ದುಕೊಳ್ಳಬೇಕು; 180–190 ಸ್ಥಾನಗಳನ್ನು ಪಡೆಯಲು, ಅದು ನಾಲ್ಕು ವಲಯಗಳಲ್ಲಿ ಪ್ರಾಬಲ್ಯ ಸಾಧಿಸಬೇಕು ಎಂದು ತಿಳಿಸಿದ್ದಾರೆ. ದಕ್ಷಿಣ ತಮಿಳುನಾಡಿದಾದ್ಯಂತ ಬಿಜೆಪಿ ಈಗಾಗಲೇ ಎಐಎಡಿಎಂಕೆ ಮೇಲೆ ಮೇಲುಗೈ ಸಾಧಿಸಿದೆ. ಪಶ್ಚಿಮ ತಮಿಳುನಾಡಿನ ನಿರ್ಣಾಯಕ ಪ್ರದೇಶಗಳಲ್ಲಿಯೂ ಎಐಎಡಿಎಂಕೆ ಬಿಜೆಪಿಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ಅಣ್ಣಾಮಲೈ ಹೇಳಿದ್ದಾರೆ

# ನವೀಕರಿಸಬಹುದಾದ ಇಂಧನದಲ್ಲಿ ಭಾರತ ಅಭೂತಪೂರ್ವ ಸಾಧನೆ

## ಸಚಿವ ಪ್ರಲ್ಹಾದ ಜೋಶಿ ಸಂತಸ; ಪ್ರಧಾನಿ ಮೋದಿ ಶ್ಲಾಘನೆ

* 2025ರ ಆರಂಭದಲ್ಲಿ ಕಳೆದ ವರ್ಷಕ್ಕಿಂತ ಶೇ.35ರಷ್ಟು ಹೆಚ್ಚಳ
* 11.01 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಸೂರ್ಯ ಘರ್ ಅಳವಡಿಕೆ

**ನವದೆಹಲಿ, ಏಪ್ರಿಲ್ 1:** ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತ ಅಭೂತಪೂರ್ವ ಸಾಧನೆಗೈದಿದ್ದು, ಅದಾಗಲೇ 2025ರ ಆರ್ಥಿಕ ವರ್ಷದಲ್ಲಿ ಸೌರಸ್ಥಾಪಿತ ಸಾಮರ್ಥ್ಯ 100 GW ದಾಟಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಸಂತಸ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಭಾರತದ ನವೀಕರಿಸಬಹುದಾದ ಇಂಧನ ವಲಯ ಪ್ರಸಕ್ತ ಆರ್ಥಿಕ ವರ್ಷದ ಆರಂಭದಲ್ಲೇ ಗರಿಷ್ಠ ಸ್ಥಾಪನಾ ಸಾಮರ್ಥ್ಯವನ್ನು ಸಾಧಿಸಿದೆ. ಈ ಅವಧಿಯಲ್ಲಿ 25 ಗಿಗಾವಾಟ್ ಸ್ಥಾಪನೆ ಮಾಡಿದ್ದು, 2024ರ 18.57 GW ನೊಂದಿಗೆ ಹೋಲಿಸಿದರೆ ಶೇ.35ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದರು.

**ಇದೇ ವರ್ಷದಲ್ಲಿ 74 GW ಸಾಮರ್ಥ್ಯ ಹೆಚ್ಚಳ ನಿರೀಕ್ಷೆ:**

2025ರಲ್ಲಿ 15 GWನಿಂದ 21 GWಗೆ ಏರಿಕೆಯಾಗಿ ಶೇ.38ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ. ಆತ್ಮನಿರ್ಭರ್ ಧ್ಯೇಯದಂತೆ ದೇಶದ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯ ಇದೇ ವರ್ಷದಲ್ಲಿ 38 GW ನಿಂದ 74 GWಗೆ ಏರಿಕೆ ಕಾಣಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು. ಸೌರ PV ಕೋಶಗಳ ಉತ್ಪಾದನಾ ಸಾಮರ್ಥ್ಯವೂ 2024ರಲ್ಲಿ ಇದ್ದ 9GW ನಿಂದ 25ರಲ್ಲಿ 25 GWಗೆ ಅಂದರೆ ಕಳೆದ ವರ್ಷಕ್ಕಿಂತ ಮೂರುಪಟ್ಟು ಹೆಚ್ಚಳ ಕಂಡಿದೆ.

ಭಾರತದ ಮೊದಲ ಇಂಗೋಟ್–ವೇಫರ್ ತಯಾರಿಕಾ ಘಟಕವೂ ಪ್ರಸಕ್ತ ವರ್ಷ 2 GW ಸಾಮರ್ಥ್ಯದಲ್ಲಿ ಉತ್ಪಾದನೆ ಆರಂಭಿಸಿದೆ ಎಂದರು. 11.01 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಸೂರ್ಯ ಘರ್: PM ಸೂರ್ಯ ಘರ್ ಯೋಜನೆ ಮೊದಲ ವರ್ಷದಲ್ಲೇ 11.01 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ತಲುಪಿದೆ. ಈಗಾಗಲೇ 6.98 ಲಕ್ಷ ಜನರಿಗೆ 5,437.20 ಕೋಟಿ ಸಹಾಯಧನವನ್ನು ಕೇಂದ್ರ ಸರ್ಕಾರ ವಿತರಿಸಿದೆ ಎಂದು ಸಚಿವರು ವಿವರಿಸಿದರು. 10 ಲಕ್ಷ ಪಂಪ್‌ಗಳಿಗೆ ಪಿಎಂ ಕುಸುಮ್: PM-KUSUM ಯೋಜನೆಯಡಿ 2025ರಲ್ಲಿ 7 ಲಕ್ಷ ಪಂಪ್‌ಗಳ ಸೌರೀಕರಣ ಮಾಡಲಾಗಿದೆ. ಈವರೆಗೆ ಒಟ್ಟು 10 ಲಕ್ಷ ಪಂಪ್‌ಗಳಿಗೆ ಸೌರ ಶಕ್ತಿ ವಿದ್ಯುತ್ ಕಲ್ಪಿಸಲಾಗಿದೆ. ಪ್ರಸಕ್ತ ವರ್ಷದ ಆರಂಭದಲ್ಲೇ PM-KUSUM ಯೋಜನೆ ಆರ್ಥಿಕ ವೆಚ್ಚ 2,680 ಕೋಟಿಯಾಗಿದೆ. ಇದು 2024ಕ್ಕಿಂತ ಶೇ.268ರಷ್ಟು ಹೆಚ್ಚು ಪ್ರಗತಿ ಸಾಧಿಸಿದೆ ಎಂದು ಹೇಳಿದರು.

4.50 ಲಕ್ಷ ಟನ್ ಹಸಿರು ಹೈಡ್ರೋಜನ್ ಉತ್ಪಾದನೆಗೆ ಉತ್ತೇಜನ: ಹಸಿರು ಹೈಡ್ರೋಜನ್ ಉದ್ಯಮಕ್ಕೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಹೆಚ್ಚು ಉತ್ತೇಜನ, ಪ್ರೋತ್ಸಾಹ



ನೀಡಲಾಗಿದೆ. 1,500 ಮೆಗಾವ್ಯಾಟ್ ಸಾಮರ್ಥ್ಯದ ಎಲೆಕ್ಟ್ರೋಲೈಸರ್ ತಯಾರಿಕೆಗೆ 2,220 ಕೋಟಿ ಪ್ರೋತ್ಸಾಹ ಧನ ನೀಡಿದ್ದು, 4,50,000 ಟನ್ ಹಸಿರು ಹೈಡ್ರೋಜನ್ ಉತ್ಪಾದನೆಗೆ 2,239 ಕೋಟಿ ನೀಡಲಾಗಿದೆ ಎಂದು ಹೇಳಿದರು. ಇನ್ಫ್ರಾಸ್ಟ್ರಕ್ಚರ್ ವಿಭಾಗದಲ್ಲಿ ಹೈಡ್ರೋಜನ್ ಬಳಸಿ ಸ್ಟೀಲ್ ಮತ್ತು ಪರಿವಹನ ಕ್ಷೇತ್ರಗಳಲ್ಲಿ ಪೈಲಟ್ ಯೋಜನೆಗಳು ಪ್ರಾರಂಭಗೊಂಡಿವೆ. ಸ್ಟೀಲ್ ಕ್ಷೇತ್ರದಲ್ಲಿ 7 ಪೈಲಟ್ ಯೋಜನೆಗಳಿಗೆ 454 ಕೋಟಿ ಮತ್ತು 10 ಬಸ್, 27 ಲಾರಿಗಳನ್ನು ಬಳಸಲು 208 ಕೋಟಿ ಹಂಚಲಾಗಿದೆ ಎಂದರು.

ಆರ್ಥಿಕ ವರ್ಷ 2026ರ ಆರಂಭದಲ್ಲಿ ಪರಿವಹನ ಮತ್ತು ಗೃಹಬಳಕೆ ಉಳಿತಾಯಕ್ಕೆ ಸಂಬಂಧಿಸಿದಂತೆ ಮಹತ್ವದ ಘೋಷಣೆ ಮಾಡಲಾಗಿದೆ. ಬಯೋ–**CNG (Compressed Natural Gas) / PNG (Piped Natural Gas)**ಗೆ ಮಿಶ್ರಣಗೊಳಿಸುವ ನಿಯಮ 2025ರ ಏಪ್ರಿಲ್ 1ರಿಂದ ಬದಿಸಿದೆ. ಪ್ರತಿಲವಾಗಿ ಆರ್ಥಿಕ ವರ್ಷ 2028–29ರಲ್ಲಿಯೂ ಇದು ಶೇ.5ರಷ್ಟು ಹೆಚ್ಚಳವಾಗಲಿದೆ ಎಂದು ತಿಳಿಸಿದರು.

IREDA47,453 ಕೋಟಿ ಸಾಲ ಅನುಮೋದನೆ: ಭಾರತೀಯ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಸಂಸ್ಥೆ ಆರ್ಥಿಕ ವರ್ಷ 2025ರಲ್ಲಿ 47,453 ಕೋಟಿ ಸಾಲ ಅನುಮೋದನೆ ನೀಡಿದೆ. 30,168 ಕೋಟಿ ಸಾಲ ವಿತರಿಸಿದ್ದು, ಇದು ಕಳೆದ ವರ್ಷಕ್ಕಿಂತ ಶೇ.20ರಷ್ಟು ಹೆಚ್ಚಾಗಿದೆ ಎಂದು ಹೇಳಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ನವೀಕರಿಸಬಹುದಾದ ಇಂಧನ ವಲಯದಲ್ಲಿ ಮಹತ್ತರ ಘಟ್ಟಕ್ಕೆ ಸಾಕ್ಷಿಯಾಗಿದೆ. ಜಗತ್ತಿನ ಮೂರನೇ ಅತಿದೊಡ್ಡ ರಾಷ್ಟ್ರವಾಗುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.

ಪ್ರಧಾನಿ ಮೋದಿ ಶ್ಲಾಘನೆ: ಭಾರತ ನವೀಕರಿಸಬಹುದಾದ ಇಂಧನ ವಲಯದಲ್ಲಿ ಗಮನಾರ್ಹ ಬೆಳವಣಿಗೆ ಸಾಧಿಸಿದೆ. ಇಂಧನ ಸುಸ್ಥಿರತೆಯತ್ತ ಬದ್ಧತೆ ತೋರಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಶ್ಲಾಘನೆ ವ್ಯಕ್ತಪಡಿಸಿ ಸಚಿವ ಪ್ರಲ್ಹಾದ ಜೋಶಿ ಅವರ ಟ್ವೀಟ್‌ಗೆ ಪ್ರತಿಕ್ರಿಯಿಸಿದ್ದಾರೆ.

# ಸರಕು ರೈಲುಗಳ ಡಿಕ್ಕಿ: 2 ಸಾವು



**ರಾಂಚಿ, ಏ. 1:** ಮಂಗಳವಾರ ಮುಂಜಾನೆ ಜಾರ್ಖಂಡ್ನ ಸಾಹೇಬ್‌ಗಂಜ್ ಜಿಲ್ಲೆಯಲ್ಲಿ ಎರಡು ಸರಕು ರೈಲುಗಳ ನಡುವೆ ಡಿಕ್ಕಿ ಸಂಭವಿಸಿ ಇಬ್ಬರು ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತಕ್ಕೆ ಒಳಗಾಗಿರುವ ಎರಡು ರೈಲುಗಳನ್ನು ರಾಷ್ಟ್ರೀಯ ಉಷ್ಣ ವಿದ್ಯುತ್ ನಿಗಮ ನಿರ್ವಹಿಸುತ್ತಿದ್ದು, ಬೆಳಗಿನ ಜಾವ 3 ಗಂಟೆ ಸುಮಾರಿಗೆ ಬರ್ಹೈಟ್ ಪೊಲೀಸ್ ಠಾಣೆ ಪ್ರದೇಶದ ಭೋಗ್ನಾದಿಹ್ ಬಳಿ ಡಿಕ್ಕಿ ಸಂಭವಿಸಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಜಾರ್ಖಂಡ್ ಅಪಘಾತ ಸಂಭವಿಸಿದ ಹಳಿಗಳು ಎನ್‌ಟಿಪಿಸಿ ಒಡೆತನದಲ್ಲಿದೆ ಮತ್ತು ಮುಖ್ಯವಾಗಿ ಅದರ ವಿದ್ಯುತ್ ಸ್ಥಾವರಗಳಿಗೆ ಕಲ್ಲಿದ್ದಲು ಸಾಗಿಸಲು ಅದನ್ನು ಬಳಸಲಾಗುತ್ತಿತ್ತು. ಎರಡೂ ಸರಕು ರೈಲುಗಳ ಚಾಲಕರು ಮುಖಾಮುಖಿ ಡಿಕ್ಕಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಸಾಹೇಬ್ ಗಂಜ್‌ನ ಉಪ–ವಿಭಾಗೀಯ ಪೊಲೀಸ್ ಅಧಿಕಾರಿ ಕಿಶೋರ್ ಟಿರ್ಕಿ ಪಿಟಿಐಗೆ ತಿಳಿಸಿದ್ದಾರೆ.

ಪೂರ್ವ ರೈಲ್ವೆ ವಕ್ತಾರ ಕೌಶಿಕ್ ಮಿತ್ರ, ಸರಕು ರೈಲುಗಳು ಮತ್ತು ಹಳಿ ಎರಡೂ ಎನ್‌ಟಿಪಿಸಿಗೆ ಸೇರಿದ್ದು, ಇದಕ್ಕೂ ಭಾರತೀಯ ರೈಲ್ವೆಗೂ ಯಾವುದೇ ಸಂಬಂಧವಿಲ್ಲ, ಎಂದು ಹೇಳಿದ್ದಾರೆ. ಅಪಘಾತ ಸಂಭವಿಸಿದ ಮಾರ್ಗವು ಬಿಹಾರದ ಭಾಗಲ್ಪುರ್ ಜಿಲ್ಲೆಯ ಎನ್ಟಿಪಿಸಿಯ ಕಹಲ್ಗಾಂವ್ ಸೂಪರ್ ಥರ್ಮಲ್ ಪವರ್ ಸ್ಟೇಷನ್ ಅನ್ನು ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯ ಫರಕ್ಕಾ ವಿದ್ಯುತ್ ಸ್ಥಾವರಕ್ಕೆ ಸಂಪರ್ಕಿಸುತ್ತದೆ.

# 2020ರ ದೆಹಲಿ ಗಲಭೆ ಪ್ರಕರಣ: ಸಚಿವ ಕಪಿಲ್ ಮಿಶ್ರಾ ವಿರುದ್ಧ ಎಫ್‌ಐಆರ್ ದಾಖಲಿಸಲು ನ್ಯಾಯಾಲಯ ಆದೇಶ


**ನವದೆಹಲಿ, ಏಪ್ರಿಲ್ 1 :** 2020 ರ ದೆಹಲಿ ಗಲಭೆ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎಂಬ ಆರೋಪದ ಮೇಲೆ ದೆಹಲಿ ಕಾನೂನು ಮತ್ತು ನ್ಯಾಯ ಸಚಿವ ಕಪಿಲ್ ಮಿಶ್ರಾ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಲು ಎಸಿಜೆಎಂ ನ್ಯಾಯಾಲಯ ಮಂಗಳವಾರ ನಿರ್ದೇಶಿಸಿದೆ. ವಾದಗಳನ್ನು ಆಲಿಸಿದ ನಂತರ ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ (ಎಸಿಜೆಎಂ) ವೈಭವ್ ಚೌರಾಸಿಯಾ, "ಆಪಾದಿತ ಅಪರಾಧ ನಡೆದ ಸಮಯದಲ್ಲಿ ಮಿಶ್ರಾ ಆ ಪ್ರದೇಶದಲ್ಲಿದ್ದರು ಎಂಬುದು ಸ್ಪಷ್ಟವಾಗಿದೆ... ಹೆಚ್ಚಿನ ತನಿಖೆ ಅಗತ್ಯವಿದೆ" ಎಂದು ಹೇಳಿದರು. ಅನುಸರಣಾ ವರದಿ ಸಲ್ಲಿಸಲು ನ್ಯಾಯಾಲಯವು ಏಪ್ರಿಲ್ 16 ಕ್ಕೆ ಪ್ರಕರಣವನ್ನು ಮುಂದೂಡಿತು. ಅರ್ಜಿದಾರರಾದ ಮೊಹಮ್ಮದ್ ಇಲ್ಯಾಸ್, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಃಓಖಖ), 2023 ರ ಸೆಕ್ಷನ್ 175 ರ ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದರು ಮತ್ತು ಮಿಶ್ರಾ ಮತ್ತು ಇತರರು ಗಲಭೆಯ ಸಮಯದಲ್ಲಿ ಹಿಂಸಾಚಾರವನ್ನು ಪ್ರಚೋದಿಸಿದ್ದಾರೆ ಎಂದು ಆರೋಪಿಸಿದರು. ಫೆಬ್ರವರಿ 23, 2020 ರಂದು ಮಿಶ್ರಾ ಮತ್ತು ಅವರ ಸಹಚರರು ರಸ್ತೆಯನ್ನು ತಡೆದು ಮಾರಾಟಗಾರರ ಬಂಡಿಗಳಿಗೆ ಹಾನಿ ಮಾಡಿದಾಗ ಪೊಲೀಸ್ ಅಧಿಕಾರಿಗಳು



ಹಾಜರಿದ್ದರು ಎಂದು ಅವರು ಆರೋಪಿಸಿದರು. ದೆಹಲಿ ಪೊಲೀಸರ ಪರ ಸರ್ಕಾರಿ ವಕೀಲರು, ಮಿಶ್ರಾ ಗಲಭೆಯಲ್ಲಿ ಯಾವುದೇ ಪಾತ್ರ ವಹಿಸಿಲ್ಲ ಮತ್ತು ಅವರನ್ನು ತಪ್ಪಾಗಿ ಆರೋಪಿಸುವ ಪಿತೂರಿ ಇದೆ ಎಂದು ವಾದಿಸುವ ಮೂಲಕ ಅರ್ಜಿಯನ್ನು ವಿರೋಧಿಸಿದರು. ದೆಹಲಿಯಲ್ಲಿ 2020 ರ ಗಲಭೆಗಳು ಫೆಬ್ರವರಿ 24 ಮತ್ತು 26 ರ ನಡುವೆ ನಡೆದಿದ್ದು, ಸುಮಾರು 53 ಸಾವುಗಳು ಮತ್ತು 500 ಕ್ಕೂ ಹೆಚ್ಚು ಜನರು ಗಾಯಗೊಂಡರು.

# ಭಾರತ-ಚೀನಾ ಸಂಬಂಧಕ್ಕೆ 75 ವರ್ಷ-ಎರಡೂ ದೇಶಗಳಿಂದ ಸಂಭ್ರಮದ ವಾರ್ಷಿಕೋತ್ಸವ ಆಚರಣೆ

**ಬೀಜಿಂಗ್, ಏ. 1:** ಚೀನಾ ಮತ್ತು ಭಾರತ ನಡುವಿನ ರಾಜತಾಂತ್ರಿಕ ಸಂಬಂಧಕ್ಕೆ 75 ವರ್ಷ. ಈ ಹಿನ್ನೆಲೆಯಲ್ಲಿ ಎರಡೂ ದೇಶಗಳು ವಾರ್ಷಿಕೋತ್ಸವವನ್ನು ಆಚರಿಸಿಕೊಂಡಿದ್ದು, ಪರಸ್ಪರ ಅಭಿನಂದನಾ ಸಂದೇಶಗಳನ್ನು ವಿನಿಮಯ ಮಾಡಿಕೊಂಡವು. ಇದು ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸುವ ಹೊಸ ಬದ್ಧತೆಯನ್ನು ಸೂಚಿಸುತ್ತದೆ. ಚೀನಾದ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಮತ್ತು ರಾಷ್ಟ್ರಪತಿ ದೌಪದಿ ಮುರ್ಮು ಅವರು ಮುಂದಿನ ದಿನಗಳಲಿ ಗಟ್ಟಿಯಾದ ಸಹಕಾರ ನೀಡುವ ಬಗ್ಗೆ ಆಶಾವಾದವನ್ನು ವ್ಯಕ್ತಪಡಿಸಿದರು. ಕ್ಸಿ ಅವರ ಸಂಬಂಧವು "ಡ್ರಾಗನ್-ಆನೆ ಟ್ಯಾಂಗೋ" ರೂಪವನ್ನು ಪಡೆಯಬೇಕು ಎಂದು ಮುರ್ಮು ಒತ್ತಿ ಹೇಳಿದರು. 2020 ರಲ್ಲಿ ಪೂರ್ವ ಲಡಾಖ್‌ನಲ್ಲಿ ಉಂಟಾದ ಗಡಿ ಬಿಕ್ಕಟ್ಟಿನ ನಂತರ ಸಂಬಂಧಗಳನ್ನು ಪುನಃಸ್ಥಾಪಿಸುವ ಪ್ರಯತ್ನಗಳ ಹಿನ್ನೆಲೆಯಲ್ಲಿ ಈ ವಾರ್ಷಿಕೋತ್ಸವವು ಮಹತ್ವದ ಕ್ಷಣವಾಗಿದೆ. ಇಂದು ಇಬ್ಬರೂ ನಾಯಕರು ತಮ್ಮ ದ್ವಿಪಕ್ಷೀಯ ಸಂಬಂಧಗಳನ್ನು ಕಾರ್ಯತಂತ್ರದ, ದೀರ್ಘಕಾಲೀನ ದೃಷ್ಟಿಕೋನದಿಂದ ನೋಡುವ ಮತ್ತು ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ನಂಬಿಕೆ ಮತ್ತು ಸಹಕಾರವನ್ನು ಹೆಚ್ಚಿಸಲು ಒಟ್ಟಾಗಿ ಕೆಲಸ ಮಾಡುವ ಮಹತ್ವವನ್ನು ಗಮನಿಸಿದರು. ಇತ್ತೀಚಿನ ತಿಂಗಳುಗಳಲ್ಲಿ, ಲಡಾಖ್ ಬಿಕ್ಕಟ್ಟಿನ ಉದ್ವಿಗ್ನತೆಯನ್ನು ಮೀರಿ ಎರಡೂ ದೇಶಗಳು ಮಹತ್ವದ ಕ್ರಮಗಳನ್ನು ಕೈಗೊಂಡಿವೆ. ಕಳೆದ ವರ್ಷ ರಷ್ಯಾದ ಕಜಾನ್ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಕ್ಸಿ ಜಿನ್ಪಿಂಗ್ ನಡುವಿನ ಉನ್ನತ ಮಟ್ಟದ ಸಭೆಯು ದ್ವಿಪಕ್ಷೀಯ ಸಂಬಂಧಗಳ ಭವಿಷ್ಯದ ದಿಕ್ಕಿಗೆ ಕಾರ್ಯತಂತ್ರದ ಮಾರ್ಗದರ್ಶನವನ್ನು ನೀಡಿತು. ಬಳಿಕ ಗಡಿ ನಿರ್ವಹಣೆ ಮತ್ತು ಗಡಿಯಾಚೆಗಿನ ವಿನಿಮಯದಂತಹ ಕ್ಷೇತ್ರಗಳಲ್ಲಿ ಸಹಕಾರ ಮತ್ತು ಪ್ರಗತಿ ಹೆಚ್ಚಾಗಿದೆ.





ಭಾರತೀಯ ನೌಕಾಪಡೆಯ ಐಎನ್‌ಎಸ್‌ವಿ ತಾರಿಣಿ ಲೆಫ್ಟಿನೆಂಟ್ ಕಮಾಂಡರ್ ದಿಲ್ನಾ ಕೆ ಮತ್ತು ಲೆಫ್ಟಿನೆಂಟ್ ಕಮಾಂಡರ್ ರೂಪಾ ಅವರು ಮಂಗಳವಾರ ಕೇಪ್‌ಟೌನ್‌ನಲ್ಲಿ ನಾವಿಕ ಸಾಗರ್ ಪರಿಕ್ರಮ II ದಂಡಯಾತ್ರೆಯ ನಾಲ್ಕನೇ ಹಂತವನ್ನು ಪೂರ್ಣಗೊಳಿಸಿದರು.

# ಕಾನೂನು ಕ್ರಮ: ನೇಪಾಳದ ಮಾಜಿ ರಾಜನಿಗೆ ಎಚ್ಚರಿಕೆ

**ಕಟ್ಮಂಡು, ಏ. 1:** ನೇಪಾಳದ ಕಠ್ಮಂಡುವಿನಲ್ಲಿ ಭದ್ರತಾ ಪಡೆಗಳೊಂದಿಗಿನ ಘರ್ಷಣೆಯಲ್ಲಿ ಭಾಗಿಯಾಗಿರುವ ಮಾಜಿ ರಾಜ ಜ್ಞಾನೇಂದ್ರ ಶಾ ಮತ್ತು ರಾಜಪ್ರಭುತ್ವ ಪರ ಪ್ರತಿಭಟನಾಕಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದು ನೇಪಾಳದ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಸೋಮವಾರ ಎಚ್ಚರಿಸಿದ್ದಾರೆ ಎಂದು ದಿ ಕಠ್ಮಂಡು ಪೋಸ್ಟ್ ವರದಿ ಮಾಡಿದೆ.

ರಾಜಪ್ರಭುತ್ವವನ್ನು ಪುನಃಸ್ಥಾಪಿಸಲು ಒತ್ತಾಯಿಸಿ ಮಾಜಿ ರಾಜನ ಬೆಂಬಲಿಗರು ಶುಕ್ರವಾರ ಕಠ್ಮಂಡುವಿನ ಟಿಂಕುನೆ ಪ್ರದೇಶದಲ್ಲಿ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಘರ್ಷಣೆಗಳು ಭುಗಿಲೆದ್ದಿದ್ದವು. ಈ ಸಂದರ್ಭದಲ್ಲಿ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದ್ದು, ಹಲವಾರು ಜನರು ಗಾಯಗೊಂಡಿದ್ದರು. ಘಟನೆಯಲ್ಲಿ ಹಲವಾರು ಕಟ್ಟಡಗಳು ಮತ್ತು ವಾಹನಗಳಿಗೆ ಬೆಂಕಿ ಹಚ್ಚಲಾಗಿತ್ತು. 2008 ರಲ್ಲಿ, ನೇಪಾಳವು ತನ್ನ 240 ವರ್ಷಗಳಷ್ಟು ಹಳೆಯದಾದ ರಾಜಪ್ರಭುತ್ವವನ್ನು ರದ್ದುಗೊಳಿಸಿ ಜಾತ್ಯತೀತ, ಒಕ್ಕೂಟ ಮತ್ತು ಪ್ರಜಾಪ್ರಭುತ್ವ ಗಣರಾಜ್ಯವಾಗಿ ಪರಿವರ್ತನೆಗೊಂಡಿತು.

ಸೋಮವಾರ ದೇಶದ ಸಂಸತ್ತಿನಲ್ಲಿ ಮಾತನಾಡಿದ ಓಲಿ, ಬ್ಯಾಂಕ್ ಸಾಲಗಳನ್ನು ಮರುಪಾವತಿಸಲು ನಿರಾಕರಿಸುವ ವ್ಯಕ್ತಿಗಳೊಂದಿಗೆ ಜ್ಞಾನೇಂದ್ರ ಶಾ ಹೊಂದಾಣಿಕೆ ಮಾಡಿಕೊಂಡಿದ್ದು, ಅವರ ಮಹತ್ವಾಕಾಂಕ್ಷೆಗಳಿಗಾಗಿ ಸಾಮಾಜಿಕ ಅಶಾಂತಿಯನ್ನು ಹುಟ್ಟುಹಾಕಿದ್ದಾರೆ ಎಂದು ಹೇಳಿದ್ದಾರೆ ಎಂದು ವರದಿಯಾಗಿದೆ.

ಆರೋಪಿತ ಸಂಘಟಕರು ಪೊಲೀಸರ ಮೇಲೆ ವಾಹನ ಚಲಾಯಿಸಲು ಪ್ರಯತ್ನಿಸಿದ್ದಾರೆ ಮತ್ತು ನಿರ್ಬಂಧಿತ ಪ್ರದೇಶವನ್ನು ಉಲ್ಲಂಘಿಸಿದ್ದಾರೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ತೈಲ ನಿಗಮದ ಡಿಪೋಗೆ ಬೆಂಕಿ ಹಚ್ಚುವಂತಹ ಭಯೋತ್ಪಾದಕ ಚಟುವಟಿಕೆಗಳು ನಡೆದಿವೆ. ಎಂದು ಅವರು ಹೇಳಿದ್ದಾರೆ.

ಮಾಜಿ ರಾಜ ವೀಡಿಯೊ ಹೇಳಿಕೆಯ ಮೂಲಕ ಪ್ರತಿಭಟನಾಕಾರರನ್ನು ಪ್ರಚೋದಿಸಿದ್ದು, ಸಿಂಹಾಸನವನ್ನು ಮರಳಿ ಪಡೆಯಲು ಬಯಸುವವರು ಪ್ರತಿಭಟನೆ ಮತ್ತು ಅದರ ಫಲಿತಾಂಶಗಳ ಬಗ್ಗೆ ತಮ್ಮ ನಿಲುವನ್ನು ಸಾರ್ವಜನಿಕವಾಗಿ ಹೇಳಬೇಕಲ್ಲವೇ ಎಂದು ಪ್ರಧಾನ ಮಂತ್ರಿ ಕೇಳಿದ್ದಾರೆ ಎಂದು ಕಠ್ಮಂಡು ಪೋಸ್ಟ್ ಉಲ್ಲೇಖಿಸಿದೆ. ಫೆಬ್ರವರಿ 19 ರಂದು ನೇಪಾಳದ ಪ್ರಜಾಪ್ರಭುತ್ವ ದಿನದಂದು ವೀಡಿಯೊ ಬಿಡುಗಡೆ ಮಾಡಿದ್ದ ಜ್ಞಾನೇಂದ್ರ ಶಾ, ರಾಜಪ್ರಭುತ್ವದ ಮರು ಸ್ಥಾಪನೆಗೆ ಸಾರ್ವಜನಿಕ ಬೆಂಬಲಕ್ಕಾಗಿ ಮನವಿ ಮಾಡಿದ್ದರು. ಅದರ ನಂತರ ಇತ್ತೀಚಿನ ವಾರಗಳಲ್ಲಿ ರಾಜಪ್ರಭುತ್ವದ ಪುನಃಸ್ಥಾಪನೆಗೆ ಬೇಡಿಕೆಗಳು ಎದ್ದಿವೆ ಎಂದು ಪಿಟಿಐ ವರದಿ ಮಾಡಿದೆ. ಅವರಿಗೆ [ಶಾ] ಶಿಕ್ಷೆಯಿಂದ ವಿನಾಯಿತಿ ನೀಡಲಾಗುವುದಿಲ್ಲ. ಪ್ರಸ್ತುತ ವ್ಯವಸ್ಥೆಯನ್ನು ಉರುಳಿಸಲು ಮತ್ತು ರಾಜಪ್ರಭುತ್ವವನ್ನು ಪುನಃಸ್ಥಾಪಿಸಲು ಪ್ರಯತ್ನಿಸುತ್ತಿರುವವರು ಮಾರ್ಚ್ 28ರ ಘಟನೆಗಳ ಬಗ್ಗೆ ತಮ್ಮ



ನಿಲುವನ್ನು ಸ್ಪಷ್ಟಪಡಿಸಬೇಕು. ಎಂದು ಪ್ರಧಾನಿ ಓಲಿ ಸೋಮವಾರ ಹೇಳಿರುವುದಾಗಿ ಕಠ್ಮಂಡು ಪೋಸ್ಟ್ ಉಲ್ಲೇಖಿಸಿದೆ. ಘರ್ಷಣೆಗಳ ಕುರಿತು ತನಿಖೆಗಳು ನಡೆಯುತ್ತಿವೆ. ದೇಶದ ಗೃಹ ವ್ಯವಹಾರಗಳ ಸಚಿವಾಲಯವು ಸಾವುನೋವುಗಳು, ಆಸ್ತಿ ನಾಶ ಮತ್ತು ಬೆಂಕಿ ಹಚ್ಚುವಿಕೆಯನ್ನು ಪರಿಶೀಲಿಸಿದೆ. ಶೀಘ್ರದಲ್ಲೇ ವಿವರವಾದ ವರದಿಯನ್ನು ಸಲ್ಲಿಸಲಾಗುವುದು. ಈ ಭಯಾನಕ ಕೃತ್ಯಗಳ ಅಪರಾಧಿಗಳು ಕಠಿಣ ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಪ್ರಧಾನಿ ಓಲಿ ಹೇಳಿದ್ದಾರೆ.



ಉತ್ತರ ಗಾಜಾ ಪಟ್ಟಿಯಲ್ಲಿರುವ ಜಬಾಲಿಯಾ ನಿರಾಶ್ರಿತರ ಶಿಬಿರದಲ್ಲಿ ಪ್ಯಾಲೆಸ್ತೀನಿ ಮಕ್ಕಳು ಕಾಣಿಸಿಕೊಂಡಿದ್ದಾರೆ.

# ಅಜಿತ್ ದೋವಲ್‌ಗೆ ಸಮನ್ಸ್: ಪನ್ನೂನ್ ಹೇಳಿಕೆಯನ್ನು ತಳ್ಳಿಹಾಕಿದ ಅಮೆರಿಕ ಕೋರ್ಟ್

**ನ್ಯೂಯಾರ್ಕ್, ಏ. 1:** ಪ್ರಧಾನಿ ನರೇಂದ್ರ ಮೋದಿಯವರ ಅಮೆರಿಕ ಭೇಟಿ ವೇಳೆ ಫೆಬ್ರವರಿ 12-13ರಂದು ಜತೆಯಲ್ಲಿದ್ದ ಎನ್‌ಎಸ್‌ಎ ಅಜಿತ್ ದೋವಲ್ ಅವರಿಗೆ ನೋಟಿಸ್ ಕೊಡಿಸುವಲ್ಲಿ ತಾನು ಯಶಸ್ವಿಯಾಗಿದ್ದಾಗಿ ಖಲಿಸ್ತಾನ್ ಪ್ರತ್ಯೇಕತಾವಾದಿ ಮುಖಂಡ ಗುರುಪತ್ವಂತ್ ಸಿಂಗ್ ಪನ್ನೂನ್ ನೀಡಿದ ಹೇಳಿಕೆಯನ್ನು ಅಮೆರಿಕ ನ್ಯಾಯಾಲಯ ತಳ್ಳಿಹಾಕಿದೆ. ಮೋದಿ ಮತ್ತು ದೋವಲ್ ಅವರು ತಂಗಿದ್ದ ಬ್ಲೇರ್ ಹೌಸ್ ಅಧ್ಯಕ್ಷೀಯ ಅತಿಥಿಗೃಹದ ಹೊರಗೆ ನೋಟಿಸ್ ಇಟ್ಟು ಹೋಗುವ ಸಿಬ್ಬಂದಿಯ ಪ್ರಯತ್ನವನ್ನು ಅಮೆರಿಕದ ಸೀಕ್ರೆಟ್ ಸರ್ವೀಸ್ ಏಜೆಂಟ್ ಗಳು ವಿಫಲಗೊಳಿಸಿದ್ದು, ನೋಟಿಸ್ ನೀಡಲು ಬಂದ ಸಿಬ್ಬಂದಿಯನ್ನು ಬಂಧಿಸುವ ಬೆದರಿಕೆ ಹಾಕಿದ್ದಾಗಿ ಪನ್ನೂನ್ ಪರ ವಕೀಲರು ಬರೆದ ಪತ್ರಕ್ಕೆ ನ್ಯಾಯಾಲಯ ಉತ್ತರಿಸಿದೆ. ನೋಟಿಸ್ ನೀಡಲು ಬಂದಿದ್ದ ವ್ಯಕ್ತಿ ಪಕ್ಕದ ಸ್ಟಾರ್ ಬಕ್ಸ್ ಮಳಿಗೆಯಲ್ಲಿ ನೋಟಿಸ್ ಇಟ್ಟು ಹೋಗಿದ್ದು, ಇದು ನೋಟಿಸ್ ತಲುಪಿದೆ ಎನ್ನುವುದನ್ನು ಖಾತರಿಪಡಿಸಲು ಸಾಕಾಗುವುದಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಪನ್ನೂನ್ ಪರ ವಕೀಲ ಬರೆದ ಪತ್ರವನ್ನು ಪರಾಮರ್ಶಿಸಿದ ನ್ಯೂಯಾರ್ಕ್ ದಕ್ಷಿಣ ಜಿಲ್ಲೆಯ ನ್ಯಾಯಾಧೀಶರು, "ಕೋರ್ಟ್‌ಗೆ ಅಗತ್ಯವಿರುವಂತೆ ದೂರಿನ ಪ್ರತಿಯನ್ನು ಹೋಟೆಲ್ ವ್ಯವಸ್ಥಾಪಕ ಸದಸ್ಯರಿಗೆ ಅಥವಾ ಸಿಬ್ಬಂದಿಗೆ ಇಲ್ಲವೇ ಯಾವುದೇ ಅಧಿಕಾರಿಗಳಿಗೆ ಅಥವಾ ದೋವಲ್ ಅವರ ಭದ್ರತಾ ಸಿಬ್ಬಂದಿಗೆ ನೀಡಿಲ್ಲ" ಎಂದು ಸ್ಪಷ್ಟಪಡಿಸಿದ್ದಾರೆ. ರಾಷ್ಟ್ರೀಯ ಭದ್ರತಾ ಸಲಹೆಗಾರರಿಗೆ ನೋಟಿಸ್ ನೀಡಿಲ್ಲ ಎನ್ನುವ ಭಾರತದ ವಾದವನ್ನು ಇದು ದೃಢಪಡಿಸಿದೆ. ಪನ್ನೂನ್ ಹತ್ಯೆ ಪ್ರಯತ್ನ ಪ್ರಕರಣದಲ್ಲಿ ಭಾರತ ಸರ್ಕಾರದ ಏಜೆಂಟ್ ವಿಕಾಸ್ ಯಾದವ್ ಎಂಬಾತನ ಕೈವಾಡವಿದೆ ಎಂದು ಅಮೆರಿಕದ ಅಧಿಕಾರಿಗಳು ಹೇಳಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪನ್ನೂನ್ ಹೂಡಿದ್ದ ಸಿವಿಲ್ ದಾವೆಯಲ್ಲಿ ಅಮೆರಿಕದ ಕೋರ್ಟ್ ಕಳೆದ ಸೆಪ್ಟೆಂಬರ್ ನಲ್ಲಿ ಸಮನ್ಸ್ ನೀಡಲು ಆದೇಶಿಸಿತ್ತು.



**ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ಕಳೆದ ಫೆಬ್ರುವರಿಯಲ್ಲಿ ವಾಷಿಂಗ್ಟನ್‌ಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಅವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಅವರಿಗೆ ಯಾವುದೇ ಸಮನ್ಸ್ ನೀಡಿಲ್ಲ ಎಂದು ಅಮೆರಿಕದ ನ್ಯಾಯಾಲಯವೊಂದು ಸ್ಪಷ್ಟಪಡಿಸಿದೆ. ಈ ಮೂಲಕ ಭಾರತದ ಉನ್ನತ ಅಧಿಕಾರಿಗೆ ಸಮನ್ಸ್ ನೀಡಲಾಗಿತ್ತು ಎಂದು ಆರೋಪಿಸಿ ಕಾಲಿಸ್ತಾನಿ ಪ್ರತ್ಯೇಕತಾವಾದಿ ನಾಯಕ ಗುರುಪತ್ವಂತ್ ಸಿಂಗ್ ಪನ್ನೂನ್ ಹೇಳಿದ್ದ ಹೇಳಿಕೆಯನ್ನು ಕೋರ್ಟ್ ತಳ್ಳಿಹಾಕಿತು.**

# ಮಲೇಷ್ಯಾ ಗ್ಯಾಸ್ ಪೈಪ್‌ಲೈನ್ ಸೋರಿಕೆ: ನೂರಾರು ಮಂದಿಗೆ ಗಾಯ

**ಕೌಲಲಾಂಪುರ, , ಏ. 1:** ಮಲೇಶ್ಯಾದ ರಾಜಧಾನಿ ಬಳಿ ಗ್ಯಾಸ್ ಪೈಪ್‌ಲೈನ್ ಸೋರಿಕೆಯ ಹಿನ್ನೆಲೆಯಲ್ಲಿ ಸ್ಥಳೀಯರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದ್ದು 100ಕ್ಕೂ ಅಧಿಕ ಮಂದಿ ಗಾಯಗೊಂಡಿರುವುದಾಗಿ ಅಗ್ನಿಶಾಮಕ ದಳದ ಅಧಿಕಾರಿಗಳು ಹೇಳಿದ್ದಾರೆ. ಕೌಲಲಾಂಪುರ ಬಳಿಯ ಸೆಲಾಂಗೊರ್ ರಾಜ್ಯದಲ್ಲಿ ಸುಮಾರು 500 ಮೀಟರ್ ವ್ಯಾಪ್ತಿಯಲ್ಲಿ ಗ್ಯಾಸ್ ಪೈಪ್‌ಲೈನ್‌ನಲ್ಲಿ ಸೋರಿಕೆಯಾಗುತ್ತಿರುವುದು ಪತ್ತೆಯಾದೊಡನೆ ಪೈಪ್‌ಲೈನ್ ನ ವಾಲ್ವ್ ಮುಚ್ಚಿ ಗ್ಯಾಸ್ ಪೂರೈಕೆ ಸ್ಥಗಿತಗೊಳಿಸಲಾಗಿದೆ. 100ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದು ಗಂಭೀರ ಗಾಯಗೊಂಡ 60 ಮಂದಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ಯಾಸ್ ಸೋರಿಕೆಯ ಬಳಿಕ ಕಾಣಿಸಿಕೊಂಡ ಬೆಂಕಿಯಿಂದ ಸುಮಾರು 50 ಮನೆಗಳಿಗೆ ಹಾಗೂ ಹಲವು ವಾಹನಗಳಿಗೆ




ಹಾನಿಯಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.



ಮ್ಯಾನ್ಮಾರ್‌ನ ಮಂಡಾಲೆಯಲ್ಲಿ ಸಂಭವಿಸಿದ ಭೂಕಂಪದ ಹಿನ್ನೆಲೆಯಲ್ಲಿ ಮಂಗಳವಾರ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿರುವ ಭಾರತದ ಎನ್‌ಡಿಆರ್‌ಎಫ್ ಸಿಬ್ಬಂದಿ.

# ವಿಶ್ವ ಬಾಕ್ಸಿಂಗ್ ಕಪ್: ಲಕ್ಷ್ಯ ಚಾಹರ್‌ಗೆ ಸೋಲು



**ನವದೆಹಲಿ,ಏ.1:** ಲಕ್ಷ್ಯ ಚಾಹರ್ ಅವರು ಬ್ರೆಜಿಲ್‌ನ ಫಾಜ್ ದುಗ್ರಾಸುನಲ್ಲಿ ನಡೆಯುತ್ತಿರುವ ಮೊದಲ ವಿಶ್ವ ಬಾಕ್ಸಿಂಗ್ ಕಪ್‌ನ 80 ಕೆ.ಜಿ ವಿಭಾಗದಲ್ಲಿ ಸ್ಥಳೀಯ ಬಾಕ್ಸರ್ ವಂಡರ್ಲೆ ಪರೀರಾ ಅವರಿಗೆ ಮಣಿಯುವುದರೊಡನೆ ಭಾರತ ನಿರಾಶಾದಾಯಕ ಆರಂಭ ಮಾಡಿತು. ದೇಶದ ಹಾಲಿ ಲೈಟ್ ಹೆವಿವೇಟ್ ಚಾಂಪಿಯನ್ ಚಾಹರ್ ಅವರು ಸೋಮವಾರ ರಾತ್ರಿ ನಡೆದ ಸೆಣಸಾಟದಲ್ಲಿ 0-5 ರಿಂದ 2023ರ ವಿಶ್ವ ಚಾಂಪಿಯನ್‌ಷಿಪ್ ಬೆಳ್ಳಿ ಪದಕ ವಿಜೇತ ವಂಡರ್ಲೆ ಎದುರು ಪ್ರಿಕ್ವಾರ್ಟರ್ ಫೈನಲ್‌ನಲ್ಲಿ ಸೋಲನುಭವಿಸಿದರು. ಪರೇರ ಅವರು ಚಾಹರ್‌ರನ್ನು ಸಮಗ್ರವಾಗಿ ಸೋಲಿಸಿದರು. ಒಬ್ಬರನ್ನು ಹೊರತುಪಡಿಸಿ ಎಲ್ಲಾ ತೀರ್ಪುಗಾರರು ಅವರಿಗೆ 30 ಅಂಕಗಳನ್ನು ನೀಡಿದರು. ಅವರು 150 ಅಂಕಗಳ ಪೈಕಿ 149 ಅಂಕಗಳನ್ನು ಗಳಿಸಿದರು. ಚಾಹರ್ 135 ಅಂಕಗಳನ್ನು ಪಡೆದರು. 20 ವರ್ಷ ವಯಸ್ಸಿನ ಜಾದೂಮಣಿ ಸಿಂಗ್ ಮೆಂಡೆಂಗ್ರಾಮ್ (50 ಕೆ.ಜಿ. ವಿಭಾಗ), ನಿಖಿಲ್ ದುಬೆ (75 ಕೆ.ಜಿ. ವಿಭಾಗ), ಜುಗೂ (85 ಕೆ.ಜಿ. ವಿಭಾಗ) ಅವರು ಎರಡನೇ ದಿನ ಕಣಕ್ಕಿಳಿಯಲಿರುವ ಭಾರತದ ಸ್ಪರ್ಧಿಗಳಾಗಿದ್ದಾರೆ. ಈ ಕೂಟ ಆರು ದಿನ ನಿಗದಿಯಾಗಿದೆ. ಅಂತರರಾಷ್ಟ್ರೀಯ ಒಲಿಂಪಿಕ್ ಸಂಸ್ಥೆಯಿಂದ, ಮಾನ್ಯತೆಯನ್ನು ಮರಳಿ ಪಡೆದ ನಂತರ ವರ್ಲ್ಡ್ ಬಾಕ್ಸಿಂಗ್ ನಡೆಸುತ್ತಿರುವ ಮೊದಲ ಪ್ರಮುಖ ಟೂರ್ನಿ ಇದಾಗಿದೆ. ಪ್ಯಾರಿಸ್ ಒಲಿಂಪಿಕ್ಸ್ ನಂತರ ಭಾರತದ ಬಾಕ್ಸರ್‌ಗಳು ಹೊಸ ತೂಕ ವಿಭಾಗಗಳಲ್ಲಿ ಪಾಲ್ಗೊಳ್ಳುತ್ತಿರುವ ಮೊದಲ ಅಂತರರಾಷ್ಟ್ರೀಯ ಟೂರ್ನಿ ಕೂಡ ಇದಾಗಿದೆ.

